ಸಂಪುಟ: 04 ಸಂಚಿಕೆ: 144 ಪುಟಗಳು: 08 ಮಂಗಳವಾರ 06 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ವತ್ಸ ಪ್ರೀತಿಗೆ ಸೋಲೆಂಬುದಿಲ್ಲ, ಇಂದೊ ನಾಳೆಯೊ ಅಥವಾ ಯುಗಾಂತರವ್ರೊ ಸತ್ಯ ಗೆದ್ದೇ ತೀರುವುದು, ಪ್ರೀತಿ ಖಂಡಿತ ಜಯ ಗಳಿಸುತ್ತದೆ.

# ವಿಜಯೇಂದ್ರ ಸಿ.ಡಿ ಹೀರೊ, ಸಿ.ಡಿ ಇಟ್ಟುಕೊಂಡು ಬ್ಲಾಕ್‌ಮೇಲ್

• ಉದಯವಾಹಿನಿ, ವಿಜಯಪುರ



'ವಿಜಯೇಂದ್ರ, ಸಿ.ಡಿ ಹೀರೊ ಇದ್ದಾನೆ. ಸಿ.ಡಿ.ಗಳನ್ನು ಇಟ್ಟುಕೊಂಡು ಬ್ಲಾಕ್ ಮೇಲ್ ರಾಜಕಾರಣ, ಚಮಚಾಗಿರಿ ಮಾಡುತ್ತಾನೆ' ಎಂದು ವಿಜಯಪುರ ನಗರ ಬಿಜೆಪಿ ಶಾಸಕ ಬಸನಗೌಡ ಪಾಟೀಲ ಯತ್ನಾಳ ವಾಗ್ದಾಳಿ ನಡೆಸಿದರು.ನಗರದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಹೈಕಮಾಂಡ್ ಯಾವ ಆಧಾರದ ಮೇಲೆ ವಿಜಯೇಂದ್ರನನ್ನು ರಾಜ್ಯ ಅಧ್ಯಕ್ಷನನ್ನಾಗಿ ಮಾಡಿದ್ದಾರೋ ತಿಳಿಯದು, ರಾಜ್ಯ ಅಧ್ಯಕ್ಷ ಆಗಲು ಆತನಿಗೆ ಯಾವ ಅರ್ಹತೆಯೂ ಇಲ್ಲ. ವಿಜಯೇಂದ್ರ ಸ್ವತಃ ಭ್ರಷ್ಟನಿದ್ದಾನೆ. ಆತನಿಗೆ ಭ್ರಷ್ಟಾಚಾರದ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ' ಎಂದರು.

'ದೇಶದಲ್ಲಿ ವಕ್ಫ್ ಕಾನೂನಿಗೆ ತಿದ್ದುಪಡಿ ತರಲು ಪ್ರಧಾನಿ ನರೇಂದ್ರ ಮೋದಿ ಅವರು ಮುಂದಾಗಿರುವುದು ಸ್ವಾಗತಾರ್ಹ. ಈ ಕರಾಳ ಕಾನೂನು ರದ್ದುಪಡಿಸುವಂತೆ ನಾನು ವಿಧಾನಸಭೆ ಅಧಿವೇಶನದಲ್ಲಿ ಸರ್ಕಾರವನ್ನು ಒತ್ತಾಯಿಸಿದ್ದೆ. ಅಲ್ಲದೇ. ನಾಲ್ಕೈದು ಬಾರಿ ಪ್ರಧಾನಿಗೆ ಪತ್ರ ಬರೆದಿದ್ದೆ. ನಮ್ಮ ಬೇಡಿಕೆಗೆ ಪ್ರಧಾನಿ ಸಕಾರಾತ್ಮಕವಾಗಿ ಸ್ಪಂದಿಸಿದ್ದಾರೆ' ಎಂದು ಹೇಳಿದರು.'ವಕ್ಫ್ ಕಾನೂನು ನೆಹರು ಮಾಡಿದ ದೊಡ್ಡ ಅಪರಾಧವಾಗಿದೆ.



ದೇಶದಲ್ಲಿ ಸುಮಾರು 12 ಲಕ್ಷ ಎಕರೆ ಭೂಮಿ ವಕ್ಫ್ ಒಡತನದಲ್ಲಿದೆ. ಇದನ್ನು ವಶಕ್ಕೆ ಪಡೆಯಲು ಸ್ವತಃ ನ್ಯಾಯಾಲಯಕ್ಕೂ ಅಧಿಕಾರ ಇರಲಿಲ್ಲ. ಅದಕ್ಕೆ ಪ್ರತ್ಯೇಕ ಟ್ರಿಬುನಲ್ ಇದ್ದು, ಸಂಪೂರ್ಣ ಅಧಿಕಾರ ನೀಡಲಾಗಿತ್ತು. ಇದೊಂದು ಕರಾಳ ಶಾಸಕವಾಗಿತ್ತು. ಕಾಶ್ಮೀರಕ್ಕೆ ಸಂಬಂಧಿಸಿದಂತೆ 370ನೇ ಕಲಂ ತೆಗೆದಂತೆ, ವಕ್ಫ್ ಕಾಯ್ದೆ ತೆಗೆದುಹಾಕಲು ಮೋದಿ ಮುಂದಾಗಿರುವುದು ಐತಿಹಾಸಿಕ ನಿರ್ಧಾರ' ಎಂದರು. 'ದೇಶದಲ್ಲಿ ಪ್ರಥಮವಾಗಿ 18 ಲಕ್ಷ ಆಸ್ತಿ ಭಾರತೀಯ ಸೇನೆ ವಶದಲ್ಲಿದೆ. ಎರಡನೆಯದಾಗಿ 15 ಲಕ್ಷ ಎಕರೆ ಭಾರತೀಯ ರೈಲ್ವೆ ಇಲಾಖೆ ವಶದಲ್ಲಿ ಇದೆ. ಮೂರನೆಯದಾಗಿ 12 ಲಕ್ಷ ಎಕರೆ ವಕ್ಫ್ ವಶದಲ್ಲಿದೆ. ಈ ಕಾನೂನು ರದ್ದುಪಡಿಸಲು ಎಲ್ಲಾ ಪಕ್ಷಗಳು ಬೆಂಬಲ ನೀಡಬೇಕು' ಎಂದರು. 'ವಕ್ಫ್ ಕಾನೂನು ತಿದ್ದುಪಡಿ ಕಾಂಗ್ರೆಸ್‌ನ ರಾಹುಲ್ ಗಾಂಧಿ, ಸಮಾಜವಾದಿ ಪಾರ್ಟಿಯ ಅಖಿಲೇಶ ಯಾದವ್, ಓವೈಸಿ ವಿರೋಧ ಮಾಡುವುದು ಸರಿಯಲ್ಲ. ಈ ವಿರೋಧಿಸುವವರೆಲ್ಲೂ ಬಹುತೇಕ ಸಾಬರಿದ್ದಾರೆ. ಅವರು ಹಿಂದುಗಳೇ ಅಲ್ಲ, ಎಲ್ಲಾ ಜಾತಿ ಮಿಶ್ರಣವಾಗಿದ್ದಾರೆ' ಎಂದು ಕುಟುಕಿದರು.

## ವೈಫಲ್ಯ ಮುಚ್ಚಿಕೊಳ್ಳಲು ಪಾದಯಾತ್ರೆ ಮಾಡುತ್ತಿದ್ದಾರೆ

• ಉದಯವಾಹಿನಿ, ಬೆಂಗಳೂರು

ಜೆಡಿಎಸ್– ಬಿಜೆಪಿ ಪಕ್ಷಗಳು ತಮ್ಮ ವೈಫಲ್ಯವನ್ನು ಮುಚ್ಚಿಕೊಳ್ಳಲು ಪಾದಯಾತ್ರೆ ನಡೆಸಿ ಜನರ ಗಮನವನ್ನು ಬೇರೆಡೆ ಸೆಳೆಯುತ್ತಿವೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಆರೋಪಿಸಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯ ವಿವಿಧ ಭಾಗಗಳಲ್ಲಿ ನೆರೆ ಹಾವಳಿಯನ್ನು ವೀಕ್ಷಿಸಿ ಮಾತನಾಡಿದ ಅವರು, ಇವರ ವೈಫಲ್ಯ ಮುಚ್ಚಿಹಾಕಲು ಜನರ ಗಮನ ಬೇರೆಡೆ ಸೆಳೆಯುವ ಯತ್ನ ಮಾಡುತ್ತಿದ್ದಾರೆ. ಕುಮಾರಸ್ವಾಮಿಯವರು ನಮ್ಮ ಭದ್ರಾ, ಮೇಲ್ದಂಡೆ, ಮೇಕೆದಾಟು, ಮಹದಾಯಿ ಯೋಜನೆಗೆ ಕೇಂದ್ರದಿಂದ ಅನುಮತಿ ಕೊಡಿಸಲಿ ಸಾಕು ನಾನು ಅವರ ಕೈಮುಗಿಯುತ್ತೇನೆ ಎಂದರು. ಬಿಜೆಪಿ–ಜೆಡಿಎಸ್ ಒಟ್ಟಾಗಿ ಆಪರೇಷನ್ ಮಾಡಿ ಜನರಿಂದ ಆಯ್ಕೆಯಾದ ಸರ್ಕಾರವನ್ನು ಬೀಳಿಸೋ ಪುರುಷಾರ್ಥಕ್ಕೆ ಜನ ಇವರನ್ನು ಆಯ್ಕೆ ಮಾಡಿ ಕಳಿಸಿರೋದು, ಸರ್ಕಾರ ಬೀಳಿಸೋದನ್ನೇ ಇವರು ರಾಜ್ಯದ ಅಭಿವೃದ್ಧಿ ಎಂದು ತಿಳಿದಿರುವ ಹಾಗಿದೆ ಎಂದು ಹೇಳಿದರು.
ಸರ್ಕಾರ ಬೀಳಿಸೋದು ಇರಲಿ, ಕೇಂದ್ರದಿಂದ ಯಾವೆಲ್ಲಾ ಯೋಜನೆಯನ್ನ ಇವರು ರಾಜ್ಯಕ್ಕೆ ತಂದಿದ್ದಾರೆ? ಇವರಿಂದ ರಾಜ್ಯಕ್ಕೆ ಕೊಡುಗೆ ಏನು? ಮೊದಲು ತಿಳಿಸಲಿ, ಆಪರೇಷನ್ ಕಮಲ ಮಾಡುವುದೇ ದೊಡ್ಡ ಕೊಡುಗೆಯಾ? ಎಂದು ಪ್ರಶ್ನಿಸಿದರು.

## ಅವ್ಯವಹಾರದ ದಾಖಲೆ ತೆರೆದರೆ ಸಂಪುಟವನ್ನೇ ಮಾಡಬಹುದು

• ಉದಯವಾಹಿನಿ, ರಾಮನಗರ

ಡಿಸಿಎಂ ಡಿ.ಕೆ.ಶಿವಕುಮಾರ್ ಅವರ ಅವ್ಯವಹಾರಗಳ ಬಗ್ಗೆ ನನ್ನ ಬಳಿ ದಾಖಲೆಗಳಿವೆ. ಆ ದಾಖಲೆಗಳನ್ನು ತೆರೆದರೆ ಒಂದು ಸಂಪುಟವನ್ನೇ ಮಾಡಬಹುದು ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಟಾಂಗ್ ನೀಡಿದ್ದಾರೆ. ರಾಮನಗರದಲ್ಲಿ ಮಾತನಾಡಿದ ಹೆಚ್.ಡಿ.ಕುಮಾರಸ್ವಾಮಿ, ಡಿ.ಕೆ.ಶಿವಕುಮಾರ್ ಅವರ ಗೊಡ್ಡು ಬೆದರಿಕೆಗಳಿಗೆ ನಾನು ಬಗ್ಗಲ್ಲ. ಅವರ ಅವ್ಯವಹಾರಗಳ ಬಗ್ಗೆ ನನ್ನ ಬಳಿ ಇರುವ ದಾಖಲೆಗಳನ್ನು ತೆರೆದರೆ ಸಂಪುಟವನ್ನೇ ಮಾಡಬಹುದು ಎಂದರು.
ತಪ್ಪು ಮಾಡಿ ಪಶ್ಚಾತ್ತಾಪ ಪಡಲ್ಲ ಎಂದು ಭಡ ಮಾತು ಆಡುತ್ತಿದ್ದಾರೆ. ಅವರ ಮಾತಿಗೆ ಯಾರೂ ಗೌರವ ಕೊಡುತ್ತಿಲ್ಲ. ಡಿಕೆಶಿ ಸ್ಥಿತಿ ನೋಡಿದರೆ ಅಯ್ಯೋ ಎನಿಸುತ್ತದೆ ಎಂದರು. ಉಪಮುಖ್ಯಮಂತ್ರಿಯಾಗಿ ಜನರ ಸಂಕಷ್ಟ, ಸಮಸ್ಯೆ ಬಗೆಹರಿಸುವುದು ಬಿಟ್ಟು ನನ್ನನ್ನು ಗುಣಗಾನ ಮಾಡುತ್ತಾ ಕೂತಿದ್ದಾರೆ. ಹುಚ್ಚರಂತೆ ಪದಬಳಕೆ ಮಾಡುತ್ತಿದ್ದಾರೆ. ಇಂತಹ ಬೆದರಿಕೆಗಳಿಗೆ ನಾನು ಹೆದರಲ್ಲ ಎಂದು ಕಿಡಿಕಾರಿದರು.

## ಸಿದ್ದರಾಮಯ್ಯ ಶೋಷಿತರು ಎಂಬ ಕಾರಣಕ್ಕೆ ಕಮಲ-ತೆನೆ ಟಾರ್ಗೆಟ್

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯರು ಶೋಷಿತರು ಹಾಗೂ ಬಡವರ ಪಾಲಿನ ಧ್ವನಿಯಾಗಿದ್ದಾರೆ ಎಂಬ ಕಾರಣಕ್ಕೆ ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆಯೇ? ಎಂದು ಸಚಿವ ದಿನೇಶ್ ಗುಂಡೂರಾವ್ ಹೇಳಿದ್ದಾರೆ. ಈ ಶತಮಾನದ ಅತಿ ದೊಡ್ಡ ಜೋಕ್ ಯಾವುದೆಂದರೆ ಅದು ಬಿಜೆಪಿ–ಜೆಡಿಎಸ್ ನಡೆಸುತ್ತಿರುವ ಪಾದಯಾತ್ರೆ. ಮುಡಾದಲ್ಲಿ 50–50ರ ಅನುಪಾತದಲ್ಲಿ ನಿವೇಶನ ನೀಡುವ ನಿಯಮ ತಂದಿದ್ದೇ ಬಿಜೆಪಿಯ ಅಧಿಕಾರಾವಧಿಯಲ್ಲಿ. ಈ ನಿಯಮದ ಅನುಸಾರ ಸಿದ್ದರಾಮಯ್ಯರಿಗೆ ಬದಲಿ ನಿವೇಶನ ಕೊಟ್ಟಿದ್ದು ಕೂಡ ಎಚ್‌ಡಿಕೆಯ ಅಧಿಕಾರಾವಧಿಯಲ್ಲಿ. ಈಗ ಸಿದ್ದರಾಮಯ್ಯ ಅಕ್ರಮವಾಗಿ ಸೈಟ್ ಪಡೆದಿದ್ದಾರೆ ಎಂದು ಪಾದಯಾತ್ರೆ ಮಾಡುತ್ತಿರುವ ಎಚ್‌ಡಿಕೆಯವರಿಗೆ ಮತಿಭ್ರಮಣೆಯಾಗಿದೆ ಎಂದು ಭಾವಿಸಬೇಕೋ ಅಥವಾ ಅವರ ಹುಚ್ಚು ಅತಿರೇಕಕ್ಕೆ ಹೋಗಿದೆ ಎಂದು ತಿಳಿಯಬೇಕೋ.? ತಮ್ಮ ರಾಜಕೀಯ ಜೀವನದಲ್ಲಿ ಯಾವುದೇ ಕಳಂಕ ಅಂಟಿಸಿಕೊಳ್ಳದ ವ್ಯಕ್ತಿತ್ವ ಸಿದ್ದರಾಮಯ್ಯರದ್ದು. ಮುಡಾ ವಿಚಾರದಲ್ಲೂ ಸಿದ್ದರಾಮಯ್ಯ ಕಾನೂನಿನ ಅನುಸಾರವೇ ನಿವೇಶನ ಪಡೆದಿದ್ದಾರೆ. ಇದೇ ರೀತಿ ಜೆಡಿಎಸ್ ನಾಯಕ ಕುಮಾರಸ್ವಾಮಿ ಕೂಡ ಮುಡಾದಿಂದ ಕೈಗಾರಿಕಾ ನಿವೇಶನ ಪಡೆದಿದ್ದಾರೆ. ಬಿಜೆಪಿಯ ಹಲವು ನಾಯಕರ ಬಳಿ ಮುಡಾ ನಿವೇಶನಗಳಿವೆ. ಹೀಗಿರುವಾಗ ಸಿದ್ದರಾಮಯ್ಯ ಮಾತ್ರ ವಿಪಕ್ಷಗಳ ಟಾರ್ಗೆಟ್ ಯಾಕೆ.? ಅವರನ್ನು ಟಾರ್ಗೆಟ್ ಮಾಡಲಾಗುತ್ತಿದೆಯೇ.? ಎಂದು ಪ್ರಶ್ನಿಸಿದ್ದಾರೆ.

# ಸಿದ್ದು ಪ್ರವಾಸ ರದ್ದು

## ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದರೆ ಕಾನೂನಾತ್ಮಕ, ರಾಜಕೀಯ ಹೋರಾಟಕ್ಕೆ ಸಿದ್ಧ

## ಸಿದ್ದರಾಮಯ್ಯ ಪ್ರಾಸಿಕ್ಯೂಶನ್ ಬಗ್ಗೆ ರಾಜ್ಯಪಾಲರ ನಿರ್ಧಾರ ಬಗ್ಗೆ ಕುತೂಹಲ

**ರಾಜ್ಯದ ಮಳೆ ಹಾನಿ ಪ್ರದೇಶಗಳಿಗೆ ಭೇಟಿ ನೀಡುತ್ತಿರುವ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದಿನ ವಿಜಯನಗರ ಹಾಗೂ ಕೊಪ್ಪಳ ಜಿಲ್ಲೆಯ ಪ್ರವಾಸವನ್ನು ರದ್ದು ಮಾಡಿದ್ದಾರೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಇಂದು ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಬೇಕೇ, ಬೇಡವೇ ಎಂಬ ಬಗ್ಗೆ ತೀರ್ಮಾನ ಕೈಗೊಳ್ಳುವ ಸಾಧ್ಯತೆ ಇರುವುದರಿಂದ ಮುಖ್ಯಮಂತ್ರಿಗಳ ಇಂದಿನ ವಿಜಯನಗರ ಹಾಗೂ ಕೊಪ್ಪಳ ಜಿಲ್ಲಾ ಪ್ರವಾಸ ರದ್ದಾಗಿದೆ ಎಂದು ಹೇಳಲಾಗಿದೆ.**

• ಉದಯವಾಹಿನಿ, ಬೆಂಗಳೂರು

ನಿನ್ನೆ, ಮೊನ್ನೆ ಮೈಸೂರು, ಕೊಡಗು, ಹಾಸನ ಜಿಲ್ಲೆಯ ಮಳೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ್ದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಇಂದು ಬೆಳಗಾವಿ ಜಿಲ್ಲೆಗೆ ತೆರಳಿದ್ದು, ಅಲ್ಲಿ ಗೋಕಾಕ್, ಚಿಕ್ಕೋಡಿ ಸೇರಿದಂತೆ ಹಲವು ಮಳೆ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿದ್ದಾರೆ.

ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರು ವಿಜಯನಗರ ಹಾಗೂ ಕೊಪ್ಪಳ ಜಿಲ್ಲೆಗೆ ಭೇಟಿ ನೀಡಬೇಕಿತ್ತು. ಹಾಗೆಯೇ ಮಳೆಯಿಂದ ಭರ್ತಿಯಾಗಿರುವ ತುಂಗಾಭದ್ರ ಜಲಾಶಯಕ್ಕೆ ಬಾಗಿನ ಅರ್ಪಿಸುವ ಕಾರ್ಯಕ್ರಮವೂ ನಿಗದಿಯಾಗಿತ್ತು. ಆದರೆ ಈ ಎರಡೂ ಜಿಲ್ಲೆಗಳ ಪ್ರವಾಸವನ್ನು ರದ್ದು ಮಾಡಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿ ಕಾರ್ಯಾಲಯದಿಂದ ಪ್ರಕಟಣೆ ಹೊರ ಬಿದ್ದಿದ್ದು, ನಾಳಿನ ಮುಖ್ಯಮಂತ್ರಿಗಳ ಕೊಪ್ಪಳ, ವಿಜಯನಗರ ಜಿಲ್ಲಾ ಪ್ರವಾಸ ರದ್ದಾಗಿದೆ ಎಂದು ಪ್ರಕಟಣೆಯಲ್ಲಿ ಹೇಳಲಾಗಿದೆ. ಮುಖ್ಯಮಂತ್ರಿಗಳ ಇಂದಿನ ಪ್ರವಾಸ ರದ್ದಾಗಿರುವುದಕ್ಕೆ ಸ್ಪಷ್ಟ ಕಾರಣ ಗೊತ್ತಾಗಿಲ್ಲ.

ಮುಡಾ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ಸಂಜೆ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಬಗ್ಗೆ ತೀರ್ಮಾನ ಕೈಗೊಳ್ಳುವ ಹಿನ್ನೆಲೆ ಮುಖ್ಯಮಂತ್ರಿಗಳ ನಾಳಿನ ಪ್ರವಾಸ ರದ್ದಾಗಿದೆ ಎಂದು ಹೇಳಲಾಗುತ್ತಿದೆ.

### ಕಾನೂನು ಹೋರಾಟ ಪರಂ

ಸಿದ್ದರಾಮಯ್ಯ ವಿರುದ್ಧ ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೆ ಆ ಬಗ್ಗೆ ಕಾನೂನು ಹೋರಾಟ ನಡೆಸುವುದಾಗಿ ಗೃಹ ಸಚಿವ ಡಾ. ಜಿ.ಪರಮೇಶ್ವರ್ ಹೇಳಿದರು. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯಪಾಲರು ರಾಜ್ಯ ಸಚಿವ ಸಂಪುಟದ ಸಲಹೆ ಒಪ್ಪುತ್ತಾರೆ ಎಂಬ ವಿಶ್ವಾಸವಿದೆ. ಅವರು ರಾಜ್ಯಸರ್ಕಾರಕ್ಕೆ ಕೊಟ್ಟಿರುವ ನೋಟಿಸ್ ವಾಪಸ್ ಪಡೆಯುತ್ತಾರೆ. ಹಾಗೆಯೇ ಈ ಪ್ರಕರಣದಲ್ಲಿ ಸತ್ಯಾಂಶ ಇಲ್ಲ ಎಂಬ ಸಚಿವ ಸಂಪುಟದ ನಿರ್ಣಯವನ್ನು ಒಪ್ಪುತ್ತಾರೆ ಎಂಬ ನಂಬಿಕೆ ಇದೆ. ಜತೆಗೆ ಪ್ರಾಸಿಕ್ಯೂಷನ್ ಮನವಿಯನ್ನು ತಿರಸ್ಕರಿಸುವ ವಿಶ್ವಾಸವೂ ಇದೆ ಎಂದು ಹೇಳಿದರು. ರಾಜ್ಯ ಸಚಿವ ಸಂಪುಟ ಸಭೆಯ ಸಲಹೆ ಮೀರಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ಕೊಡುತ್ತಾರೆ ಎಂದು ನಾನು ಭಾವಿಸಲ್ಲ ಎಂದರು. ರಾಜ್ಯಪಾಲರಿಗೆ ಅವರದೇ ಆದ ದತ್ತವಾದ ಅಧಿಕಾರ ಇರಬಹುದು. ಆದರೆ ಸಂಪುಟ ಸಭೆಯ ಸಲಹೆಯನ್ನು ಅವರು ಸುಲಭವಾಗಿ ತಿರಸ್ಕಾರ ಮಾಡುವುದಿಲ್ಲ ಎಂದುಕೊಂಡಿದ್ದೇನೆ. ಒಂದು ವೇಳೆ ಎಲ್ಲಾವನ್ನೂ ಮೀರಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದರೆ ನಾವು ಕೂಡಾ ಕಾನೂನು ಹೋರಾಟವನ್ನು ಮಾಡುತ್ತೇವೆ ಎಂದು ಸಚಿವ ಡಾ. ಜಿ. ಪರಮೇಶ್ವರ್ ಹೇಳಿದರು.



1. ಮುಡಾ ಹಗರಣ ದೃಢವಾದರೆ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಜೈಲಿಗೆ ಹೋಗಬೇಕಾಗುತ್ತೆ ಎಂದ ಸಚಿವ ಚಲುವರಾಯಸ್ವಾಮಿ.
2. ಮುಡಾ ಹಗರಣಕ್ಕೂ ಹಾಲಿ ಸಿಎಂ ಸಿದ್ದರಾಮಯ್ಯ ಅವರಿಗೂ ಸಂಬಂಧವೇ ಇಲ್ಲ ಎಂದ ಕೃಷಿ ಸಚಿವ.
3. ರಾಜ್ಯದಲ್ಲಿ ಈ ಬಾರಿ ಉತ್ತಮ ಮಳೆಯಾಗುತ್ತಿದ್ದು , ರೈತರು ಕೃಷಿ ಚಟುವಟಿಕೆಗಳಲ್ಲಿ ತೊಡಗಿಕೊಳ್ಳಬೇಕು ಎಂದ ಸಚಿವ.



**ಸಿದ್ದು ಮುಡಾ ಹಗರಣ ಸದ್ದು**

### ಅನುಮತಿ ನೀಡಿದರೆ ಏನಾಗಲಿದೆ?

ಸದ್ಯ ದೆಹಲಿ ಪ್ರವಾಸದಿಂದ ರಾಜ್ಯಪಾಲರು ಮರಳಿದ್ದಾರೆ. ಒಂದು ವೇಳೆ ಅವರು ಸಿಎಂ ವಿರುದ್ಧ ತನಿಖೆಗೆ ಅನುಮತಿಸಿದ್ದೆ ಆದಲ್ಲಿ ಸಾರ್ವಜನಿಕವಾಗಿ ಕೋಲಾಹಲಕ್ಕೆ ಎಡೆ ಮಾಡಿಕೊಟ್ಟಂತಾಗಬಹುದು. ಅಲ್ಲದೇ ದೆಹಲಿಯಲ್ಲಿ ಸಂಸತ್ ಅಧಿವೇಶನ ನಡೆಯುತ್ತದೆ. ಸಿಎಂ ವಿರುದ್ಧ ಪ್ರಾಸಿಕ್ಯೂಶನ್‌ಗೆ ಅನುಮತಿಸಿದರೆ, ಸದನದಲ್ಲಿ ಪ್ರತಿಪಕ್ಷಗಳು ಕೋಲಾಹಲ ಎಬ್ಬಿಸಬಹುದು. ಹೀಗಾಗಿ ಅಧಿವೇಶನ ಮುಗಿಯುವವರೆಗೂ ಕಾದು ನಂತರ ರಾಜ್ಯಪಾಲರು ತಮ್ಮ ನಿರ್ಧಾರ ಪ್ರಕಟಿಸಬಹುದು ಅಂತಲೂ ಅಂದಾಜಿಸಲಾಗಿದೆ.

### ಸಚಿವರ ಬದಲಾವಣೆ ಮಾಡಲ್ಲ

ಸಚಿವರ ಬದಲಾವಣೆ ಬಗ್ಗೆ ಪ್ರತಿಕ್ರಿಯೆ ನೀಡಿದ ಕೃಷಿ ಸಚಿವರು, ಹೈಕಮಾಂಡ್ ನಾಯಕರು ಎಲ್ಲರೂ ಉತ್ತಮವಾಗಿ ಕೆಲಸ ಮಾಡಿ ಎಂದು ಸೂಚನೆ ನೀಡಿದ್ದಾರೆ. ಸದ್ಯಕ್ಕೆ ಯಾರ ಬದಲಾವಣೆಯನ್ನು ಮಾಡುವುದಿಲ್ಲ ಎಂದರು.

### ಪ್ರಾಸಿಕ್ಯೂಷನ್ ತೀರ್ಮಾನ

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡುವ ಬಗ್ಗೆ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಇಂದು ನಿರ್ಧಾರ ಕೈಗೊಳ್ಳುವ ಸಾಧ್ಯತೆ ಇದೆ. ಕಳೆದ 4 ದಿನಗಳಿಂದ ದೆಹಲಿಯಲ್ಲಿದ್ದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರು ಇಂದು ಸಂಜೆ ರಾಜ್ಯಕ್ಕೆ ವಾಪಸ್ಸಾಗಲಿದ್ದು, ಮುಖ್ಯಮಂತ್ರಿಗಳ ವಿರುದ್ಧದ ಪ್ರಾಸಿಕ್ಯೂಷನ್ ಮನವಿಗೆ ಯಾವ ತೀರ್ಮಾನ ಕೈಗೊಳ್ಳುತ್ತಾರೆ ಎಂಬುದು ಕುತೂಹಲ ಮೂಡಿಸಿದೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡುವಂತೆ ಸಾಮಾಜಿಕ ಕಾರ್ಯಕರ್ತ ಟಿ.ಜೆ. ಅಬ್ರಾಹಂ ರಾಜ್ಯಪಾಲರಿಗೆ ಮನವಿ ಮಾಡಿದ್ದರು.ಈ ಮನವಿ ಆಧರಿಸಿ ರಾಜ್ಯಪಾಲರು ಸರ್ಕಾರಕ್ಕೆ ಶೋಕಾಸ್ ನೋಟಿಸ್ ಜಾರಿ ಮಾಡಿದ್ದರು.



ರಾಜ್ಯಪಾಲರ ಈ ಶೋಕಾಸ್ ನೋಟಿಸ್ ರಾಜ್ಯದಲ್ಲಿ ಸಾಕಷ್ಟು ಸುದ್ದಿಗೆ ಗ್ರಾಸವಾಗಿತ್ತು. ರಾಜ್ಯಪಾಲರು ಸರ್ಕಾರಕ್ಕೆ ಶೋಕಾಸ್ ನೋಟಿಸ್ ನೀಡಿದ ಬೆನ್ನಲ್ಲೆ ರಾಜ್ಯ ಸಚಿವ ಸಂಪುಟ ಸಭೆ ಸೇರಿ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅನುಪಸ್ಥಿತಿಯಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ನೋಟಿಸ್‌ನ್ನು ವಾಪಸ್ ಪಡೆಯಬೇಕು ಹಾಗೂ ಪ್ರಾಸಿಕ್ಯೂಷನ್ ಮನವಿಯನ್ನು ತಿರಸ್ಕರಿಸಬೇಕು ಎಂಬ ಸಲಹೆ ಸಚಿಪ ಸಂಪುಟ ಸಭೆ ರಾಜ್ಯಪಾಲರಿಗೆ ನೀಡಿತ್ತು. ಸಚಿವ ಸಂಪುಟ ಸಭೆ ರಾಜ್ಯಪಾಲರಿಗೆ ನೀಡಿದ ಸಲಹೆಯನ್ನು ರಾಜಭವನಕ್ಕೆ ಕಳುಹಿಸಲಾಗಿತ್ತು.

# ಕೇಳುವುದಿದ್ದರೇ ಎಸ್‌ಐಟಿ ಮುಂದೆ ಕೇಳಿ

• ಉದಯವಾಹಿನಿ, ಬೆಂಗಳೂರು



ವಿಪಕ್ಷ ನಾಯಕ ಆರ್ ಅಶೋಕ್ ಅವರೇ ನೀವು ವಾಲ್ಮೀಕಿ ನಿಗಮದ ಹಗರಣದ ಬಗ್ಗೆ ಹೇಳುವುದಿದ್ದರೇ, ಕೇಳುವುದಿದ್ದರೇ ಎಸ್‌ಐಟಿ ಮುಂದೆ ಹೋಗಿ ಕೇಳಿ, ಹೇಳಿ. ಅದು ಬಿಟ್ಟು ಹಾದಿ ಬೀದಿಯಲ್ಲಿ ಕತೆ ಕಟ್ಟಿಕೊಂಡು ಮಾತೋಡು ಬಿಡಿ ಎಂಬುದಾಗಿ ಸಿಎಂ ಸಿದ್ದರಾಮಯ್ಯ ಅವರು ಹೇಳಿದ್ದಾರೆ. ಈ ಬಗ್ಗೆ ಮಾಧ್ಯಮ ಹೇಳಿಕೆ ಬಿಡುಗಡೆ ಮಾಡಿರುವಂತ ಮುಖ್ಯಮಂತ್ರಿ ಸಿದ್ಧರಾಮಯ್ಯ ಅವರು, ಈ ಕೆಳಗಿನಂತೆ ತಿಳಿಸಿದ್ದಾರೆ.

ವಾಲ್ಮೀಕಿ ಅಭಿವೃದ್ಧಿ ನಿಗಮಕ್ಕೆ ಸಂಬಂಧಿಸಿದ ಹಗರಣದ ಬಗ್ಗೆ ನೀವು ಕೆಲವು ಪ್ರಶ್ನೆಗಳನ್ನು ಕೇಳಿದ್ದೀರಿ, ನಿಮಗೆ ಗೊತ್ತಿರುವಂತೆ ಈ ಪ್ರಕರಣದ ತನಿಖೆಗೆ ನಮ್ಮ ಸರ್ಕಾರ ಎಸ್.ಐ.ಟಿ ಯನ್ನು ರಚಿಸಿದೆ. ಇದಕ್ಕೆ ಸಂಬಂಧಿಸಿದಂತೆ ನಿಮಗೆ ಇಲ್ಲವೇ ನಿಮ್ಮ ಪಕ್ಷಕ್ಕೆ ಏನಾದರೂ ಹೇಳುವುದಿದ್ದರೆ ಇಲ್ಲವೇ ಕೇಳುವುದಿದ್ದರೆ ಎಸ್.ಐ.ಟಿ ಮುಂದೆ ಹೋಗಿ ಕೇಳಿ, ಇಲ್ಲವೇ ಹೇಳಿ.ಇದನ್ನು ಬಿಟ್ಟು ಹಾದಿಬೀದಿಯಲ್ಲಿ ಮಾತನಾಡುವವರಂತೆ, ತಾವೇ ಕತೆ ಕಟ್ಟಿಕೊಂಡು ತಲೆಬುಡ ಇಲ್ಲದ ಅರ್ಥಹೀನ ಪ್ರಶ್ನೆಗಳನ್ನು ನನಗೆ ಕೇಳಿ ನಿಮ್ಮ ಸ್ಥಾನದ ಗೌರವವನ್ನು ನೀವೇ ಕಳೆದುಕೊಳ್ಳಬೇಡಿ



ನಮಗೆ ಪ್ರಶ್ನೆ ಕೇಳುವ ಮೊದಲು ನಿಮ್ಮದೇ ಪಕ್ಷದ ಶಾಸಕರಾದ ಬಸನಗೌಡ ಪಾಟೀಲ್ ಯತ್ನಾಳ್ ಅವರು ನಿರಂತರವಾಗಿ ಪಕ್ಷದ ಅಧ್ಯಕ್ಷರಾದ ಬಿ.ವೈ ವಿಜಯೇಂದ್ರ ಅವರ ವಿರುದ್ಧ ಮಾಡುತ್ತಿರುವ ಗಂಭೀರ ಸ್ವರೂಪದ ಆರೋಪಗಳಿಗೆ ಉತ್ತರಿಸುವ ಧೈರ್ಯ ತೋರಿಸಿ. ಭ್ರಷ್ಟಾಚಾರ, ವಿದ್ರೋಹ ಮತ್ತು ಸ್ವಜನಪಕ್ಷಪಾತವೂ ಸೇರಿದಂತೆ ಯತ್ನಾಳ್ ಅವರು ಮಾಡುತ್ತಿರುವ ಆರೋಪಗಳು ಗಂಭೀರ ಸ್ವರೂಪದ್ದಾಗಿವೆ. ಇಂತಹ ಆರೋಪಗಳನ್ನು ಮಾಡಿದ ನಂತರವೂ ಅವರ ವಿರುದ್ಧ ಬಿಜೆಪಿ ಹೈಕಮಾಂಡ್ ಯಾವುದೇ ಕ್ರಮಕ್ಕೆಗೊಳ್ಳದಿರುವುದನ್ನು ನೋಡಿದರೆ ಅವರ ಆರೋಪಗಳಲ್ಲಿ ಸತ್ಯಾಂಶ ಇರುವುದನ್ನು ಪಕ್ಷದ ಹೈಕಮಾಂಡ್ ಕೂಡಾ ಒಪ್ಪಿಕೊಂಡಂತೆ ಕಾಣುತ್ತಿದೆ ಎಂಬುದಾಗಿ ಹೇಳಿದ್ದಾರೆ.

# ವಾಲ್ಮೀಕಿ ನಿಗಮದ ಹಗರಣ: ಬಿ.ನಾಗೇಂದ್ರಗೆ ಮತ್ತೆ 14 ದಿನಗಳ ನ್ಯಾಯಾಂಗ ಬಂಧನ ವಿಸ್ತರಣೆ

• ಉದಯವಾಹಿನಿ, ಬೆಂಗಳೂರು



ಒಂದೆಡೆ ಮುಡಾ ಹಗರಣ, ವಾಲ್ಮೀಕಿ ನಿಗಮದಲ್ಲಿ ನಡೆದಿದ್ದಂತ ಕೋಟ್ಯಂತರ ರೂ ಅಕ್ರಮ ಹಣ ವರ್ಗಾವಣೆ ಸಂಬಂಧ ಬಿಜೆಪಿ-ಜೆಡಿಎಸ್ ನಾಯಕರು ಪಾದಯಾತ್ರೆ ನಡೆಸುತ್ತಿದ್ದಾರೆ. ಈ ಬೆನ್ನಲ್ಲೇ ವಾಲ್ಮೀಕಿ ನಿಗಮದ ಹಗರಣದಲ್ಲಿ ಮಾಜಿ ಸಚಿವ ಬಿ.ನಾಗೇಂದ್ರ ಅವರಿಗೆ ಕೋರ್ಟ್ ಮತ್ತೆ 14 ದಿನಗಳ ನ್ಯಾಯಾಂಗ ಬಂಧನ ವಿಸ್ತರಿಸಿ ಆದೇಶಿಸಿದೆ. ಈ ಕುರಿತಂತೆ ಇಂದು ಬೆಂಗಳೂರಿನ 82ನೇ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ವಿಚಾರಣೆ ನಡೆಸಿತು. ಇಂದು ಬಿ.ನಾಗೇಂದ್ರ ಅವರ ನ್ಯಾಯಾಂಗ ಬಂಧನದ ಅವಧಿ ಮುಕ್ತಾಯಗೊಂಡ ಹಿನ್ನಲೆಯಲ್ಲಿ, ಅವರಿಗೆ ಮತ್ತೆ 14 ದಿನಗಳ ನ್ಯಾಯಾಂಗ ಬಂಧನವನ್ನು ವಿಸ್ತರಣೆ ಮಾಡಿ ಆದೇಶಿಸಿದೆ.

ಅಂದಹಾಗೇ ವಾಲ್ಮೀಕಿ ಅಭಿವೃದ್ಧಿ ನಿಗಮದ ಬಹುಕೋಟಿ ಹಣ ಅವ್ಯವಹಾರ ಪ್ರಕರಣದಲ್ಲಿ ಇಡಿ ಅಧಿಕಾರಿಗಳಿಂದ ಮಾಜಿ ಸಚಿವ ಬಿ.ನಾಗೇಂದ್ರ ಅವರನ್ನು ಬಂಧಿಸಲಾಗಿತ್ತು. ಆ ಬಳಿಕ ಅವರನ್ನು ಕೋರ್ಟ್‌ಗೆ ಹಾಜರುಪಡಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿತ್ತು. ಪರಪ್ಪನ ಅಗ್ರಹಾರ ಜೈಲು ಸೇರಿರುವಂತ ಅವರಿಗೆ ಈಗ ಕೋರ್ಟ್ ಮತ್ತೆ 14 ದಿನಗಳ ನ್ಯಾಯಾಂಗ ಬಂಧನ ವಿಸ್ತರಿಸಿ ಆದೇಶಿಸಿದೆ.

# ಸಿದ್ದು ಸಂಪುಟ ಸಚಿವರಿಗೆ 'ದಸರಾ ಗಡುವು' ಕೊಟ್ರಾ ವೇಣುಗೋಪಾಲ್?

## ಸಭೆಯಲ್ಲಿ ಕೆಲವು ಸಚಿವರ ಕಾರ್ಯವೈಖರಿ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ಕಾಂಗ್ರೆಸ್ ನಾಯಕರು

• ಉದಯವಾಹಿನಿ, ಬೆಂಗಳೂರು

ಕಾಂಗ್ರೆಸ್ ರಾಜ್ಯ ಉಸ್ತುವಾರಿ ಕೆ.ಸಿ ವೇಣುಗೋಪಾಲ್ ಹಾಗೂ ರಣದೀಪ್ ಸಿಂಗ್ ಸುರ್ಜೇವಾಲಾ ಅವರು ರಾಜ್ಯದ ಸಚಿವರ ಜೊತೆಗೆ ಸಭೆ ನಡೆಸಿದ್ದಾರೆ. ಸಭೆಯಲ್ಲಿ ಕೆಲವು ಸಚಿವರ ಕಾರ್ಯವೈಖರಿ ಕುರಿತು ಅಸಮಾಧಾನ ವ್ಯಕ್ತಪಡಿಸಿರುವ ಕಾಂಗ್ರೆಸ್ ನಾಯಕರು ಹೀಗೆ ಮುಂದುವರೆದರೆ ದಸರಾ ವೇಳೆಗೆ ಸಚಿವ ಸಂಪುಟ ಪುನರ್ ರಚನೆ ಮಾಡಲಾಗುವುದು ಎಂಬ ಸಂದೇಶ ನೀಡಿದ್ದಾರೆ ಎಂದು ಹೇಳಲಾಗುತ್ತಿದೆ. ಇನ್ನೆರಡು ತಿಂಗಳಲ್ಲಿ ತಪ್ಪುಗಳನ್ನು ಸರಿಪಡಿಸಿಕೊಳ್ಳಿ

ಸಚಿವರ ಜೊತೆಗಿನ ಸಭೆಯ ಸಂದರ್ಭದಲ್ಲಿ ಹೈಕಮಾಂಡ್ ನಾಯಕರು ಅಸಮಾಧಾನ ಹೊರಹಾಕಿದ್ದಾರೆ ಎನ್ನಲಾಗಿದೆ. ನಿಮ್ಮ ಕಾರ್ಯವೈಖರಿ ನಮಗೆ ತೃಪ್ತಿದಾಯಕವಾಗಿಲ್ಲ. ನೀವು ಸಮರ್ಪಕವಾಗಿ ಕೆಲಸ ನಿರ್ವಹಿಸಿದರೆ ಲೋಕಸಭೆಯಲ್ಲಿ ರಾಜ್ಯದಿಂದ ಕನಿಷ್ಠ 15 ಸ್ಥಾನಗಳನ್ನು ಗೆಲ್ಲುತ್ತಿದ್ದೆವು. ನಿಮಗೆ ಮುಂದಿನ ಎರಡು ತಿಂಗಳು ಗಡುವು ಎಂದುಕೊಂಡು ಕೆಲಸ ನಿರ್ವಹಿಸಿ. ತಪ್ಪುಗಳನ್ನು ಸರಿಪಡಿಸಿಕೊಂಡು ಕೆಲಸ ನಿರ್ವಹಿಸದಿದ್ದರೆ ನಿಮ್ಮ ಖಾತೆ ತೆರೆಯಲು ಸಿದ್ದರಾಗಿರಿ ಎಂದು ಹೈಕಮಾಂಡ್ ನಾಯಕರು ಎಚ್ಚರಿಕೆ ನೀಡಿದ್ದಾರೆ ಎಂದು ಮೂಲಗಳು ಮಾಹಿತಿ ಒದಗಿಸಿವೆ.

ಹೀಗೇ ವರ್ತನೆ ಮುಂದುವರಿದರೆ ಹೈಕಮಾಂಡ್ ಸಹಿಸಿಕೊಳ್ಳುವುದಿಲ್ಲ. ನಿಮ್ಮ ಕಾರ್ಯವೈಖರಿ ತವರು ಹಾಗೂ ಉಸ್ತುವಾರಿ ಜಿಲ್ಲೆಗೆ ಮಾತ್ರ ಸೀಮಿತವಾಗಿದೆ. ರಾಜ್ಯ ಪ್ರವಾಸ ಮಾಡಿ ಇಲಾಖೆಯಲ್ಲಿ ಸುಧಾರಣೆ ತರಬೇಕು. ನಿಮ್ಮ ಕಾರ್ಯವೈಖರಿ ನಮಗೆ ತೃಪ್ತಿದಾಯಕವಾಗಿಲ್ಲ. ನೀವುಗಳು ಸರಿಯಾಗಿ ಕೆಲಸ ಮಾಡಿದ್ರೆ ಲೋಕಸಭೆಯಲ್ಲಿ ಕನಿಷ್ಠ 15 ಸ್ಥಾನಗಳನ್ನ ಗೆಲ್ಲುತ್ತಿದ್ವಿ. ಬಿಜೆಪಿ ಅವಧಿಯ ಹಗರಣಗಳ ತನಿಖೆಯನ್ನು ಚುರುಕುಗೊಳಿಸಿ. ಮುಡಾ ವಿಚಾರದಲ್ಲಿ ರಾಜ್ಯಪಾಲರ ವಿರುದ್ಧ ಕಾನೂನು ಹೋರಾಟ ಮಾಡಿ. ಎಲ್ಲಾರೂ ಸಿಎಂ ಸಿದ್ದರಾಮಯ್ಯ ಬೆನ್ನಿಗೆ ನಿಲ್ಲಬೇಕು ಎಂದು ಸಂದೇಶ ರವಾನಿಸಿದ್ದಾರೆ.

ಪರಿಣಾಮಕಾರಿಯಾಗಿ ಜೆಡಿಎಸ್ ಬಿಜೆಪಿಗೆ ತಿರುಗೇಟು ಕೊಡುವ ಕೆಲಸ ಮಾಡಬೇಕು. ಆ ಮೂಲಕ ಕಾಂಗ್ರೆಸ್‌ನಲ್ಲಿ ಯಾವುದೇ ಭಿನ್ನಮತ, ಅಸಮಾಧಾನ ಇದೆ ಎನ್ನುವ ಚರ್ಚೆಗೆ ಹೈಕಮಾಂಡ್ ನಾಯಕರು ಬ್ರೇಕ್ ಹಾಕಲು ಮುಂದಾಗಿದ್ದರು. ಸಭೆಯ ಬಳಿಕ ಸುದ್ದಿಗೋಷ್ಠಿ ನಡೆಸುವುದಕ್ಕೂ ಮುನ್ನಾ ಸಿಎಂ ಕಾನೂನು ಸಲಹೆಗಾರ ಪೊನ್ನಣ್ಣ ಅವರನ್ನು ಪಕ್ಕಕ್ಕೆ ಕರೆದುಕೊಂಡು ಹೋಗಿ ರಾಜ್ಯಪಾಲರ ನೋಟಿಸ್ ಕುರಿತು ಕೆ.ಸಿ.ವೇಣುಗೋಪಾಲ್ ಮಾಹಿತಿ ಪಡೆದುಕೊಂಡರು.

ಇವತ್ತು ಕರ್ನಾಟಕದ ಕೆಲವು ಗಂಭೀರ ವಿಚಾರಗಳ ಬಗ್ಗೆ ಸಭೆ ಮಾಡಲಾಗಿದೆ. ಕರ್ನಾಟಕ ಸರ್ಕಾರವನ್ನು ಟಾರ್ಗೆಟ್ ಮಾಡಲಾಗಿದೆ. ಬಿಜೆಪಿ ಮತ್ತು ಜೆಡಿಎಸ್ ನವರು ಅವರ ಮಕ್ಕಳ ರಕ್ಷಣೆಗೆ ನಿಂತಿದ್ದಾರೆ. ಸಿದ್ದರಾಮಯ್ಯ ಬಗ್ಗೆ ಎಲ್ಲಾರಿಗೂ ಗೊತ್ತಿದೆ. ನಾವು ಗ್ಯಾರೆಂಟಿಗಳನ್ನು ಕರ್ನಾಟಕದಲ್ಲಿ ಜಾರಿ ಮಾಡಿದ್ವಿ. ಅವರು ಸಿದ್ದರಾಮಯ್ಯ ಹಾಗೂ ಸರ್ಕಾರದ ವಿರುದ್ಧ ಸಂಚು ರೂಪಿಸಿದ್ದಾರೆ. ಸಿಎಂ ಗೆ ಗವರ್ನರ್ ಷೋಕಾಸ್ ನೋಟಿಸ್ ಕೊಟ್ಟಿದ್ದಾರೆ ಎಂದು ಬೇಸರ ಹೊರಹಾಕಿದರು.



ರಾಜ್ಯದ ಜನರ ಬಗ್ಗೆ ಬಿಜೆಪಿ ಜೆಡಿಎಸ್‌ನವರಿಗೆ ಕಾಳಜಿ ಇಲ್ಲ. ಈ ಬಗ್ಗೆ ನಾವು ಇಂದು ಸಭೆಯಲ್ಲಿ ಚರ್ಚೆ ಮಾಡಿದ್ದೇವೆ. ಬಿಜೆಪಿ ಭ್ರಷ್ಟಾಚಾರದ ಬಗ್ಗೆ ಮಾತಾಡ್ತಿರೋದೆ ದೊಡ್ಡ ಜೋಕ್. ವಿಜಯೇಂದ್ರ ಬಗ್ಗೆ ಯಾಕೆ ಮಾತಾಡಲ್ಲ. ಪ್ರಜ್ವಲ್ ರೇವಣ್ಣ ಬಗ್ಗೆ ಯಾಕ್ ಮಾತಾಡ್ತಿಲ್ಲ. ಕಾನೂನು ಅದರ ಕ್ರಮ ತೆಗೆದುಕೊಳ್ಳುತ್ತೆ. ಪ್ರತಿ ದಿನ ಸಿದ್ದರಾಮಯ್ಯ ಸಿದ್ದರಾಮಯ್ಯ ಅಂತಿದ್ದಾರೆ. ಅವರ ಟಾರ್ಗೆಟ್ ಸಿದ್ದರಾಮಯ್ಯ ಆಗಿದ್ದಾರೆ ಎಂದರು.

### ಸಿದ್ದರಾಮಯ್ಯ ಅವರ ಪ್ರಾಮಾಣಿಕತೆ ಎಲ್ಲಾರಿಗೂ ಗೊತ್ತು

ಕೇಂದ್ರ ಬಜೆಟ್‌ನಲ್ಲಿ ಕರ್ನಾಟಕಕ್ಕೆ ಆಗಿರುವ ಅನ್ಯಾಯದ ಬಗ್ಗೆ ಯಾರೂ ಮಾತಾಡ್ತಿಲ್ಲ. ಹಣಕಾಸು ಸಚಿವರು ಕೂಡ ಇಲ್ಲಿಂದ ಆಯ್ಕೆಯಾದವರು ಆದ್ರೆ ಕರ್ನಾಟಕಕ್ಕೆ ಅನ್ಯಾಯ ಮಾಡಿದ್ದಾರೆ ಅದನ್ನು ಕೇಳುವ ಧೈರ್ಯ ಬಿಜೆಪಿ ಜೆಡಿಎಸ್ ನಾಯಕರಿಗಿಲ್ಲ. ನಾವು ಜನರ ಹತ್ತಿರ ಹೋಗ್ತಿವಿ ಎಂದರು. ಸಿದ್ದರಾಮಯ್ಯ ಇದೇ ಮೊದಲ ಬಾರಿಗೆ ಸಿಎಂ ಆಗಿಲ್ಲ. ಈ ಹಿಂದೆಯೂ ಸಿಎಂ ಆಗಿದ್ದ ಅನುಭವ ಇದೆ. ಅವರ ವರ್ಚಸ್ಸು ಹಾಳು ಮಾಡಲು ಹೊರಟಿದ್ದಾರೆ. ಬಡವರು ಮತ್ತು ಶ್ರೀಮಂತ ನಡುವೆ ಈ ಬಾರಿ ಎಲೆಕ್ಷನ್ ನಡೆದಿದ್ದು. ಸಿದ್ದರಾಮಯ್ಯ ಅವರ ಪ್ರಾಮಾಣಿಕತೆ ಎಲ್ಲಾರಿಗೂ ಗೊತ್ತು. ಪಿತೂರಿ ನಡೆಸಿ ಸರ್ಕಾರ ಅಸ್ಥಿರಗೊಳಿಸಲು ಪ್ರಯತ್ನ ನಡೆಸಿದ್ದಾರೆ ಎಂದು ಆರೋಪಿಸಿದರು.

### ಸರ್ಕಾರ ಬೀಳಿಸುವ ಬಲ ಬಿಜೆಪಿಗಿಲ್ಲ

ರಾಜ್ಯದ ಆಡಳಿತಾರೂಢ ಕಾಂಗ್ರೆಸ್ ಸರ್ಕಾರವನ್ನು ಪತನಗೊಳಿಸಲು ಬಿಜೆಪಿ-ಜೆಡಿಎಸ್ ನಡೆಸುತ್ತಿರುವ ಷಡ್ಯಂತ್ರಕ್ಕೆ ನಾವು ಮಣಿಯುವುದಿಲ್ಲ. ಜನರ ಬಳಿಗೆ ಹೋಗಿ ವಾಸ್ತವವನ್ನು ವಿವರಿಸುತ್ತೇವೆ. ಒಗ್ಗಟ್ಟಿನಿಂದ ಹೋರಾಡುತ್ತೇವೆ ಎಂದು ಎಐಸಿಸಿ ಕರ್ನಾಟಕ ರಾಜ್ಯ ರಾಜಕಾರಣದಲ್ಲಿ ನಡೆಯುತ್ತಿರುವ ಗಂಭೀರ ಬೆಳವಣಿಗೆಗಳ ಕುರಿತು ರಾಜ್ಯದ ಸಚಿವರೊಂದಿಗೆ ಚರ್ಚಿಸಲಾಯಿತು. ಕರ್ನಾಟಕ ರಾಜ್ಯ ಬಿಜೆಪಿಯು ಸರ್ಕಾರಗಳನ್ನು ಉರುಳಿಸುವ ಇತಿಹಾಸವನ್ನು ಹೊಂದಿದೆ ಎಂದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,058/Gram24ct ₹6,470/Gram22ct | ಬೆಳ್ಳಿ: ₹85.70/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ರಾಮಾಯಣ ಮಹಾಭಾರತ ಸಂದೇಶ

ಆಗಸ್ಟ್ ಎರಡರಂದು ತಮಿಳುನಾಡು ಸಚಿವ ಎಸ್ ಎಸ್ ಶಿವಶಂಕರ ರಾಮಾಯಣ ಮಹಾಭಾರತದಂಥ ಗ್ರಂಥಗಳಲ್ಲಿ ಬದುಕಿಗೆ ಬೇಕಾದ ಸಂದೇಶಗಳಿಲ್ಲ ಎಂದಿದ್ದಾರೆ. ತಿರುಕ್ಕುರಳ್ ನ್ನು ಎತ್ತಿ ಹಿಡಿಯುವುದಕ್ಕೆ ಈ ಮಾತು. ಒಂದನ್ನು ಎತ್ತಿ ಹಿಡಿಯಲು ಮತ್ತೊಂದನ್ನು ತುಳಿಯಬೇಕಿಲ್ಲ. ಮತ್ತೊಬ್ಬನನ್ನು ಸೋಲಿಸಿಯೇ ಗೆಲ್ಲುವಂಥ ಚುನಾವಣೆ ಇದಲ್ಲ. ಶ್ರೇಷ್ಠವಾದದ್ದು ಒಂದೇ ಇರಬೇಕೆಂದಿಲ್ಲ. ಲಕ್ಷ ಶ್ಲೋಕದ ಮಹಾಭಾರತ, ಇಪ್ಪತ್ನಾಲ್ಕು ಸಾವಿರ ಶ್ಲೋಕದ ರಾಮಾಯಣ ಬದುಕಿಗೆ ಸಂದೇಶ ನೀಡದಿದ್ದಲ್ಲಿ ಐದು ಸಾವಿರ ವರ್ಷಗಳಿಗೂ ಹೆಚ್ಚು ಪ್ರಾಚೀನದ ಈ ಕೃತಿಗಳು ಇಂದಿಗೂ ಜನಜನಿತವಾಗಿ ಇರುತ್ತಿರಲಿಲ್ಲ. ಮಹಾಭಾರತದ ಒಂದಂಶ ಭಗವದ್ಗೀತೆ. ಇದರ ಯದ್ಯದಾಚರತಿ ಶ್ರೇಷ್ಠಃ ತತ್ತದೇವೇತರೋ ಜನಃ –ದೊಡ್ಡವರು ನಡೆದುಕೊಂಡಂತೆ ಉಳಿದವರು ಅನುಸರಿಸುತ್ತಾರೆ. ಆದ್ದರಿಂದ ತಂದೆ ತಾಯಿ ಗುರು ಹಿರಿಯರು ಅಧಿಕಾರಿ ಮಂತ್ರಿ ನ್ಯಾಯಾಧೀಶ ಮುಂತಾದವರು ಜವಾಬ್ದಾರಿಯಿಂದ ಇರಬೇಕೆಂಬ ಸಂದೇಶ ಬದುಕಿಗೆ ಸಂಬಂಧಿಸಿದ್ದಲ್ಲವೇ ರಾಮಾಯಣದ ಧರ್ಮಾದರ್ಥಃ ಪ್ರಭವತಿ ಎಂಬ ಒಂದು ಶ್ಲೋಕ ಧರ್ಮದಿಂದ ಹಣ ಮುಂತಾದ ಸಂಪತ್ತು, ಧರ್ಮದಿಂದ ಸುಖ, ಧರ್ಮದಿಂದ ಎಲ್ಲವೂ ಸಿಗುತ್ತದೆ, ಈ ಜಗವೆಲ್ಲ ಧರ್ಮದ ಸಾರ ಎನ್ನುತ್ತದೆ. ಬದುಕನ್ನು ಕಾಪಿಡುವ ಕಾನೂನು ಸಂವಿಧಾನದ ಆಶಯವೂ ಇದೇ ಅಲ್ಲವೇ ಅಧರ್ಮವನ್ನು ಪ್ರಚೋದಿಸುವುದು ಬದುಕಿನ ಸಂದೇಶವಾಗಲು ಸಾಧ್ಯವೇ ಇಲ್ಲ.

# ಭಿನ್ನಮತೀಯ ಯತ್ನಾಳ್ ವಿರುದ್ಧ ಶಿಸ್ತು ಕ್ರಮಕ್ಕೆ ಚಿಂತನೆ

**■ ಯತ್ನಾಳ್ ನಾಲಿಗೆ ಬಿಎಸ್‌ವೈ ಕುಟುಂಬದ ವಿರುದ್ಧ ಮತ್ತಷ್ಟು ಹರಿತ ■ ಕಾರ್ಯಕರ್ತರು ಗೊಂದಲ**

• ಉದಯವಾಹಿನಿ, ಬೆಂಗಳೂರು

ಸ್ವಪಕ್ಷೀಯರ ವಿರುದ್ಧವೇ ಬಹಿರಂಗ ಹೇಳಿಕೆ ನೀಡಿ ಪಕ್ಷಕ್ಕೆ ಸಾಕಷ್ಟು ಮುಜುಗರ ಸೃಷ್ಟಿಸುತ್ತಿರುವ ಬಿಜೆಪಿಯ ಖಾಯಂ ಭಿನ್ನಮತೀಯ ನಾಯಕ ಹಾಗೂ ಬಿಜಾಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಪಕ್ಷದಿಂದಲೇ ಉಚ್ಛಾಟನೆ ಇಲ್ಲವೇ ಶಿಸ್ತುಕ್ರಮ ಜರುಗಿಸಲು ಕೇಂದ್ರ ವರಿಷ್ಟರು ಗಂಭೀರ ಚಿಂತನೆ ನಡೆಸಿದ್ದಾರೆ.

ತಮ ವಿಭಿನ್ನ ಮಾತು, ನಡೆ-ನುಡಿ, ಹಾರ್ಡ್‌ಕೋರ್ ಹಿಂದುತ್ವದ ಚಿಂತನೆಗಳ ನೆಲೆಯಲ್ಲಿ ಗುರುತಿಸಿಕೊಂಡ ಯತ್ನಾಳ್ ಹೆಸರು ಮೂರು ದಶಕದ ರಾಜ್ಯ ರಾಜಕಾರಣದಲ್ಲಿ ಜನಜನಿತ. ವಿಜಯೇಂದ್ರ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷರಾದ ಮೇಲಂತೂ ಯತ್ನಾಳ್ ನಾಲಿಗೆ ಬಿಎಸ್‌ವೈ ಕುಟುಂಬದ ವಿರುದ್ಧ ಮತ್ತಷ್ಟು ಹರಿತಗೊಂಡಿದೆ. ಯಾವ ಮುಲಾಜು ಇಲ್ಲದೇ ಮನಬಂದಂತೆ ಬಿಎಸ್‌ವೈ ಕುಟುಂಬ ವಿರುದ್ಧ ನಾಲಿಗೆ ಹರಿಬಿಡುತ್ತಿದ್ದಾರೆ.

ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಜಂಟಿಯಾಗಿ ಮೈಸೂರು ಚಲೋ ಪಾದಯಾತ್ರೆ ನಡೆಸುತ್ತಿರುವ ಸಂದರ್ಭದಲ್ಲೇ ಯತ್ನಾಳ್ ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪ ಹಾಗೂ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಬಹಿರಂಗವಾಗಿಯೇ ಬಾಯಿಗೆ ಬಂದಂತೆ ಟೀಕೆ ಮಾಡುತ್ತಿರುವುದು ಸ್ವತಃ ಕಾರ್ಯಕರ್ತರಿಗೆ ಸಾಕಷ್ಟು ಇರುಸು ಮುರಿಸು ಉಂಟು ಮಾಡಿದೆ.

ಯತ್ನಾಳ್ ಅವರ ಹೇಳಿಕೆಗಳನ್ನು ಕಾಂಗ್ರೆಸ್ ಅಸ್ತ್ರ ಮಾಡಿಕೊಳ್ಳುತ್ತಿದ್ದು, ನಮ ವಿರುದ್ಧ ಆರೋಪ ಮಾಡುತ್ತಿರುವ ನೀವು (



ಉದಯವಾಹಿನಿ ಚಿತ್ರ

ಬಿಜೆಪಿಯವರು) ಮೊದಲು ನಿಮ ಪಕ್ಷದ ಹಿರಿಯ ನಾಯಕ ಯತ್ನಾಳ್ ಹೇಳಿಕೆಗೆ ಉತ್ತರ ಕೊಡಿ ಎಂದು ಕೈ ನಾಯಕರು ತಿರುಗೇಟು ನೀಡುತ್ತಿದ್ದಾರೆ. ಇದರಿಂದಾಗಿ ಕಾರ್ಯಕರ್ತರು ಗೊಂದಲಕ್ಕೆ ಸಿಲುಕಿದ್ದು, ಅವರ ಮೇಲೆ ಏಕೆ ಶಿಸ್ತು ಕ್ರಮ ಜರಗಿಸಬಾರದು ಎಂದು ಪಕ್ಷದವರನ್ನೇ ಪ್ರಶ್ನೆ ಮಾಡುತ್ತಿದ್ದಾರೆ. ಇದೀಗ ಯತ್ನಾಳ್ ಹೇಳೀಕೆಗಳನ್ನು ಗಂಭೀರವಾಗಿ ತೆಗೆದುಕೊಂಡಿರುವ ದೆಹಲಿ ಬಿಜೆಪಿ ನಾಯಕರು ಅವರ ಮೇಲೆ ಶಿಸ್ತು ಕ್ರಮ ಇಲ್ಲವೇ ಪಕ್ಷದಿಂದಲೇ ಉಚ್ಛಾಟನೆ ಮಾಡುವ ಬಗ್ಗೆಯೂ ಚಿಂತನೆ ನಡೆಸಿದ್ದಾರೆ ಎಂದು ಪಕ್ಷದ ಮೂಲಗಳು ತಿಳಿಸಿವೆ.ಮುಡಾ ಹಗರಣ ಇಟ್ಟುಕೊಂಡು ಬೆಂಗಳೂರಿನಿಂದ ಮೈಸೂರಿನವರೆಗೂ ಸಿದ್ದರಾಮಯ್ಯ ಅವರ ರಾಜೀನಾಮಗೆ ಆಗ್ರಹಿಸಿ ಪಾದಯಾತ್ರೆ ನಡೆಸುತ್ತಿರುವಾಗ ವಿಜಯೇಂದ್ರ ನಡೆ ಬಗ್ಗೆ ಯತ್ನಾಳ್ ಅನುಮಾನ ವ್ಯಕ್ತಪಡಿಸಿ, ಸ್ಫೋಟಕ ಹೇಳಿಕೆ ನೀಡಿದ್ದರು.ವಿಜಯೇಂದ್ರ ಪಕ್ಷದ ಹಿತಾಸಕ್ತಿಗಾಗಿ ಪಾದಯಾತ್ರೆ ಮಾಡುತ್ತಿಲ್ಲ. ಡಿ.ಕೆ. ಶಿವಕುಮಾರ್ ಅಣತಿ ಮೇರೆಗೆ ಸಿದ್ದರಾಮಯ್ಯ ಅವರನ್ನು

> ಬಿಎಸ್‌ವೈ ಪುತ್ರ ವಿಜಯೇಂದ್ರ ರಾಜ್ಯಾಧ್ಯಕ್ಷರಾದರು. ಬಿಎಸ್‌ವೈ ಕುಟುಂದ ಹಿಡಿತ ಇರೋವರೆಗೂ ತಮಗೆ ಪಕ್ಷದಲ್ಲಿ ಸ್ಥಾನಗಳು ಸಿಗುವುದಿಲ್ಲ ಎಂಬುದು ಯತ್ನಾಳ್‌ಗೆ ಮನವರಿಕೆಯಾದಂತಿದೆ. ಹೀಗಾಗಿ ಬಿಎಸ್ ವೈ ಹಿಡಿತವನ್ನು ಸಡಿಲಗೊಳಿಸಲು ಅವಿರತ ಪ್ರಯತ್ನಕ್ಕೆ ಅವರು ಮುಂದಾದಂತೆ ಕಾಣುತ್ತಿದೆ.

**ಶಿಸ್ತು ಕ್ರಮ ಇಲ್ಲವೇ ಪಕ್ಷದಿಂದಲೇ ಉಚ್ಛಾಟನೆ**

ಸಿಎಂ ಖುರ್ಚಿಯಿಂದ ಕೆಳಗಿಳಿಸಲು ಹೊಂದಾಣಿಕೆ ರಾಜಕಾರಣ ಮಾಡಿಕೊಂಡು ಪಾದಯಾತ್ರೆ ಮಾಡುತ್ತಿದ್ದಾರೆ ಎಂದು ನೇರವಾಗಿ ಆರೋಪಿಸಿದ್ದರು. ಯಾವ ಅಪ್ಪ ಮಕ್ಕಳಿಗೂ ಯಾರೂ ಅಂಜಬಾರದು, ಯಾರಿಗೂ ಅಪ್ಪಾಜಿ ಅನ್ನಬಾರದು, ನಮ ಅಪ್ಪನಿಗೆ ಮಾತ್ರ ಅಪ್ಪ ಅನ್ನಬೇಕು. ಈ ಅಪ್ಪಾಜಿ ಸಂಸ್ಕೃತಿ ನಮ ರಾಜ್ಯದಿಂದ ಹೋಗಬೇಕು ಎಂದು ಯಡಿಯೂರಪ್ಪ ಹೆಸರು ಹೇಳದೇ ಕುಟುಕಿದ್ದರು. ಈ ಹಿಂದೆ ಕೋವಿಡ್ ಸಂದರ್ಭದಲ್ಲಿ ನಡೆದ ವ್ಯಾಪಕ ಭ್ರಷ್ಟಾಚಾರದ ಬಗ್ಗೆ ಪ್ರಸ್ತಾಪಿಸಿ, 40 ಸಾವಿರ ಕೋಟಿ ರೂ. ಅವ್ಯವಹಾರ ನಡೆದಿರುವ ಬಗ್ಗೆ ಯಡಿಯೂರಪ್ಪ ವಿರುದ್ಧ ಗಂಭೀರ ಆರೋಪ ಮಾಡಿದ್ದರು. ಬಸವರಾಜ ಬೊಮಾಯಿ ಅವರು ಮುಖ್ಯಮಂತ್ರಿಯಾದ ವೇಳೆ ಸಿಎಂ ಸ್ಥಾನಕ್ಕೆ 2,500 ಕೋಟಿ ರೂಪಾಯಿ, ಮಂತ್ರಿಸ್ಥಾನಕ್ಕೆ 100 ಕೋಟಿ ರೂಪಾಯಿ ಎಂದು ಹೇಳಿಕೆ ನೀಡಿ ಪಕ್ಷಕ್ಕೆ ಮುಜುಗರ

> ಇದನ್ನು ಅರಿತಿರುವ ಯಡಿಯೂರಪ್ಪ, ಇದೇ ಸಮುದಾಯಕ್ಕೆ ಸೇರಿದ ಅರವಿಂದ ಬೆಲ್ಲದ ಅವರನ್ನು ವಿಧಾನಸಭೆಯ ಪ್ರತಿಪಕ್ಷದ ಉಪ ನಾಯಕನ ಸ್ಥಾನಕ್ಕೆ ನೇಮಕವಾಗುವಂತೆ ನೋಡಿಕೊಳ್ಳುವ ಮೂಲಕ ಇಡೀ ಸಮುದಾಯದ ಬೆಂಬಲ ಯತ್ನಾಳ್‌ಗೆ ಇಲ್ಲ ಎಂಬುದನ್ನು ಸಾಬೀತು ಪಡಿಸುವ ತಂತ್ರಕ್ಕೆ ಶರಣಾಗಿದ್ದಾರೆ. ಕೋವಿಡ್ ಹಗರಣದ ಕುರಿತು ಮಾಡಿರುವ ಆರೋಪಗಳ ಮೂಲಕ ಕಾಂಗ್ರೆಸ್ ನಾಯಕರ ಕೈಗೆ ಯತ್ನಾಳ್ ತಾವಾಗೇ ಅಸ ಕೊಟ್ಟಿದ್ದಾರೆ.

ಸೃಷ್ಟಿಸಿದ್ದರು. ಇವರ ವಿವಾದದ ಮಾತುಗಳು ಪಟ್ಟಿ ಮಾಡುತ್ತ ಹೋದರೆ ಹನುಮಂತನ ಬಾಲದಷ್ಟು ಬೆಳೆಯುತ್ತೆ. ಆದರೆ, ಯತ್ನಾಳ್ ಮಾಡಿರುವ ಆರೋಪಗಳಿಗೆ ಯಾವುದಕ್ಕೂ ತಾರ್ಕಿಕ ಅಂತ್ಯ ಸಿಕ್ಕಿಲ್ಲ. ಕಳೆದ ವಿಧಾನಸಭಾ ಚುನಾವಣೆ ನಂತರ ಪ್ರತಿಪಕ್ಷ ನಾಯಕ ಇಲ್ಲವೇ ಬಿಜೆಪಿ ರಾಜ್ಯಾಧ್ಯಕ್ಷನಾಗುವ ಆಕಾಂಕ್ಷೆಯನ್ನು ಯತ್ನಾಳ್ ವ್ಯಕ್ತಪಡಿಸಿದ್ದರು. ಅಲ್ಲೂ ಅವರಿಗೆ ನಿರಾಸೆಯಾಯಿತು. ಆರ್.ಅಶೋಕ್ ಪ್ರತಿಪಕ್ಷ ನಾಯಕರಾದರು. ಪಕ್ಷೀಯ ನಾಯಕರ ವಿರುದ್ಧವೇ ಬಂಡಾಯ ಸಾರಿರುವ ಅವರಿಗೆ ದಿಲ್ಲಿ ಬಿಜೆಪಿ ಅಂಗಳದಲ್ಲಿರುವ ರಾಜ್ಯದ ಕೆಲವು ಬಿಜೆಪಿ ನಾಯಕರ ಬೆಂಬಲ ಇದೆ. ಅವರಿಗೂ ರಾಜ್ಯದಲ್ಲಿ ತಮ ಅಸ್ತಿತ್ವ ಉಳಿಸಿಕೊಳ್ಳಬೇಕಾಗಿದೆ. ಹೀಗಾಗಿ ಸದ್ಯಕ್ಕೆ ಈ ಗೊಂದಲಗಳು ಬಗೆಹರಿಯುವ ಸೂಚನೆಗಳು ಇಲ್ಲ.

## ಚಾರ್ಜ್ ಶೀಟ್ ಸಲ್ಲಿಸಿದ ಎಸ್‌ಐಟಿ

• ಉದಯವಾಹಿನಿ, ಬೆಂಗಳೂರು

ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆ ಸುತ್ತಿರುವ ವಿಶೇಷ ತನಿಖಾ ತಂಡ ಕೋರ್ಟ್‌ಗೆ ಚಾರ್ಜ್ ಶೀಟ್ ಸಲ್ಲಿಸಿದೆ. ಎಸ್‌ಐಟಿ ತಂಡದಿಂದ ಕೋರ್ಟ್‌ಗೆ ಸುಮಾರು 3 ಸಾವಿರ ಪುಟಗಳ ಪ್ರಾಥಮಿಕ ದೋಷಾರೋಪ ಪಟ್ಟಿ ಸಲ್ಲಿಕೆ ಮಾಡಲಾಗಿದ್ದು, 12 ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಅನ್ನು ನಗರದ ಎಸಿಎಂಎಂ ಕೋರ್ಟ್ ಸಲ್ಲಿಸಲಾಗಿದೆ. ಆರೋಪಿಗಳಾದ ಸತ್ಯನಾರಾಯಣ ವರ್ಮಾ, ಸತ್ಯನಾರಾಯಣ ಇಟ್ಕಾರಿ, ವಾಲ್ಮೀಕಿ ನಿಗಮ ಎಂಡಿ ಪದ್ಮನಾಭ. ಲೆಕ್ಕಾಧಿಕಾರಿ ಪರಶುರಾಮ, ನೆಕ್ಕುಂಟಿ ನಾಗರಾಜ್, ನಾಗೇಶ್ವರ್, ಸಾಯಿ ತೇಜ ಸೇರಿ 12 ಜನರ ಮೇಲೆ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿದೆ ತಿಳಿದುಬಂದಿದೆ. ಪ್ರಕರಣದಲ್ಲಿ ಸುಮಾರು 50 ಕೋಟಿ ಮೌಲ್ಯದ ನಗದು, ಚಿನ್ನಾಭರಣವನ್ನು ಸೀಜ್ ಮಾಡಿ ನ್ಯಾಯಾಲಯದ ಸುಪರ್ದಿಗೆ ನೀಡಲಾಗಿದೆ. ಪ್ರಕರಣದಲ್ಲಿ ಮೊದಲಿಗೆ ಬಂಧನವಾದ ಆರೋಪಿಗಳ ವಿರುದ್ಧ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಾಗಿದೆ.

## ಶೀಘ್ರವೇ ಪೊಲೀಸರ ಕೈ ಸೇರಲಿದೆ ಎಫ್‌ಎಸ್‌ಎಲ್ ರಿಪೋರ್ಟ್!

• ಉದಯವಾಹಿನಿ, ಬೆಂಗಳೂರು

ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ಶೀಘ್ರವೇ ಎಫ್ ಎಸ್‌ಎಲ್ ರಿಪೋರ್ಟ್ ಪೊಲೀಸರ ಕೈ ಸೇರಲಿದೆ.ಹೌದು. ರೇಣುಕಾಸ್ವಾಮಿ ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ 1 ವಾರದಲ್ಲಿ ಎಫ್ ಎಸ್ ಎಲ್ ರಿಪೋರ್ಟ್ ಪೊಲೀಸರ ಕೈ ಸೇರಲಿದ್ದು, ಆರೋಪಿಗಳು ಬಳಸಿದ ಬಟ್ಟೆಯಿಂದ ಹಿಡಿದು ಬೆಲ್ಟ್, ಶೂ ತನಕ. ವಾಹನ, ಗೇಟ್ , ಕೊಲೆಗೆ ಬಳಸಿದ ಆಯುಧ ಸೇರಿದಂತೆ ಎಲ್ಲಾ ವಸ್ತುಗಳ ಎಫ್ ಎಸ್‌ಎಲ್ ರಿಪೋರ್ಟ್ ಪೊಲೀಸರ ಕೈ ಸೇರಲಿದೆ. ಕೊಲೆ ಪ್ರಕರಣದ ಪ್ರಮುಖ ಸಾಕ್ಷ್ಯಗಳು ಪೊಲೀಸರ ಕೈ ಸೇರಲಿದೆ. ಈಗಾಗಲೇ ರೇಣುಕಾಸ್ವಾಮಿ ಮೊಬೈಲ್ ರಿಟ್ರೀವ್ ಮಾಡಲಾಗಿದ್ದು, ಎಲ್ಲಾ ದರ್ಶನ್ ಗ್ಯಾಂಗ್ ಗೆ ದೊಡ್ಡ ಉರುಳಾಗುವ ಸಾಧ್ಯತೆಯಿದೆ. ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ಗ್ಯಾಂಗ್ ಬಂಧನವಾಗಿದ್ದು, ಸದ್ಯ ಸೆರೆಮನೆ ವಾಸ ಅನುಭವಿಸುತ್ತಿದೆ. ಸದ್ಯದಲ್ಲೇ ಪೊಲೀಸರು ಕೋರ್ಟ್‌ಗೆ ಚಾರ್ಜ್ ಶೀಟ್ ಸಲ್ಲಿಕೆ ಮಾಡಲಿದ್ದಾರೆ.

## ಕಟ್ಟಡದ ಮೇಲಿಂದ ಬಿದ್ದು ನರ್ಸಿಂಗ್ ವಿದ್ಯಾರ್ಥಿನಿ ಸಾವು..!

• ಉದಯವಾಹಿನಿ, ಬೆಂಗಳೂರು

ಕಟ್ಟಡದ ಮೇಲಿಂದ ಬಿದ್ದು ನರ್ಸಿಂಗ್ ವಿದ್ಯಾರ್ಥಿನಿ ಸಾವನ್ನಪ್ಪಿದ ಘಟನೆ ಬೆಂಗಳೂರಿನ ಚಿಕ್ಕಬಾಣಾವರದಲ್ಲಿ ನಡೆದಿದೆ. ಧನ್ವಂತರಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿನಿ ಮೃತಪಟ್ಟಿದ್ದು, ಮೃತ ವಿದ್ಯಾರ್ಥಿ ಕೇರಳ ಮೂಲದಾಕೆ ಎಂದು ತಿಳಿದು ಬಂದಿದೆ. ಮೃತಳನ್ನು ಅತುಲ್ಯಾ ಎಂದು ಗುರುತಿಸಲಾಗಿದೆ. ಮೊಬೈಲ್ ನಲ್ಲಿ ಮಾತನಾಡುತ್ತಾ ಕಟ್ಟಡದಿಂದ ಕೆಳಗೆ ಬಿದ್ದಿರುವ ಶಂಕೆ ವ್ಯಕ್ತವಾಗಿದೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಧಾವಿಸಿ ಪರಿಶೀಲನೆ ನಡೆಸಿದ್ದಾರೆ. ಈ ಬಗ್ಗೆ ಹೆಚ್ಚಿನ ಮಾಹಿತಿ ನಿರೀಕ್ಷಿಸಲಾಗಿದೆ.

## ಭೀಕರ ಅಪಘಾತ ತಂದೆ ಸಾವು, ತಾಯಿ ಕಾಲು ಕಟ್, ರಸ್ತೆಯಲ್ಲೇ ಮಗು ಅನಾಥ!

• ಉದಯವಾಹಿನಿ, ಆನೇಕಲ್

ಹೊರವಲಯದ ಆನೇಕಲ್ ತಾಲ್ಲೂಕಿನ ಬೊಮ್ಮಸಂದ್ರ ಸಮೀಪ ಭೀಕರ ರಸ್ತೆ ಅಪಘಾತ ವೊಂದು ಸಂಭವಿಸಿದೆ. ಈ ಅಪಘಾತದಲ್ಲಿ ಪತಿ ಸಾವನ್ನಪ್ಪಿದ್ದು, ಪತ್ನಿಯ ಎರಡೂ ಕಾಲುಗಳು ಕಟ್ ಆಗಿವೆ. ಇತ್ತ ತಂದೆ-ತಾಯಿಯನ್ನು ಕಳೆದುಕೊಂಡ ಮಗು ಅನಾಥವಾಗಿದೆ. ಬೆಂಗಳೂರು ಕಡೆಯಿಂದ ಪತಿ, ಪತ್ನಿ, ಮಗು ಬೈಕ್‌ನಲ್ಲಿ ಬರ್ತಾ ಇರುವಾಗ ಬೊಮ್ಮಸಂದ್ರ ಫ್ಲೈ ಓವರ್ ಬಳಿ ವೇಗವಾಗಿ ಬಂದ ಲಾರಿ ಹಿಂಬದಿಯಿಂದ ಬೈಕಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ರಭಸಕ್ಕೆ ಸವಾರ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ. ಇತ್ತ ಪತ್ನಿ ತನ್ನ ಎರಡೂ ಕಾಲುಗಳನ್ನು ಕಳೆದುಕೊಂಡು ಅಸಾಹಕ ಸ್ಥಿತಿಯಲ್ಲಿದ್ದು ಚಿಕಿತ್ಸೆಗೆಂದು ಆಸ್ಪತ್ರೆಗೆ ದಾಖಲಿಸಲಾಗಿದೆ . ಭೀಕರ ರಸ್ತೆ ಅಪಘಾತದಲ್ಲಿ ತಂದೆ ಸಾವನ್ನಪ್ಪಿದ್ದಾರೆ ತಾಯಿಯು ಎರಡೂ ಕಾಲುಗಳು ಕಟ್ ಆಗಿವೆ ಇತ್ತ ಸಣ್ಣ ಪುಟ್ಟ ಗಾಯಗಳಿಂದ ಪ್ರಾಣಾಪಾಯದಿಂದ ಪಾರಾಗಿರುವ ಮಗು ಅನಾಥವಾಗಿದೆ. ಸ್ಥಳದಲ್ಲಿ ಮಗುವಿನ ಆಕ್ರಂದನ ಮುಗಿಲು ಮುಟ್ಟುವಂತಿತ್ತು.ಸ್ಥಳಕ್ಕೆ ಹೆಬ್ಬಗೋಡಿ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಗಾಯಾಳುಗಳನ್ನು ಹತ್ತಿರದ ಖಾಸಗಿ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

## ಬಿಜೆಪಿ ಅವಧಿಯ ಸಾಲು ಸಾಲು ಹಗರಣಗಳ ಪಟ್ಟಿ ನೀಡಿದ ಕಾಂಗ್ರೆಸ್

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಪಾದಯಾತ್ರೆ ಮೂರನೇ ದಿನಕ್ಕೆ ಕಾಲಿಟ್ಟಿದೆ. ವಿಪಕ್ಷಗಳ ಪಾದಯಾತ್ರೆಗೆ ಕೌಂಟರ್ ನೀಡಲು ಕಾಂಗ್ರೆಸ್ ಮದ್ದೂರಿನಲ್ಲಿ ಜನಂದೋಲನ ಸಮಾವೇಶ ನಡೆಸಿದೆ. ಇದೇ ವೇಳೆ ಬಿಜೆಪಿ ವಧಿಯಲ್ಲಿನ ಸಾಲು ಸಾಲು ಹಗರಣಗಳ ಕಾಂಗ್ರೆಸ್ ಪಟ್ಟಿ ಬಿಡುಗಡೆ ಮಾಡಿದೆ. ಬಿಜೆಪಿ ಅವಧಿಯಲ್ಲಿನ ಕೆಕೆಆರ್ ಡಿಬಿ ಹಗರಣ, ಬಗರ್ ಹುಕುಂ ಅಕ್ರಮ, ಕೃಷಿ ಇಲಾಖೆ ಹಗರಣ, ಮೊಟ್ಟೆ ಹಗರಣಗಳನ್ನು ಪ್ರಸ್ತಾಪಿಸಿರುವ ಕಾಂಗ್ರೆಸ್ ಸಾಲು ಸಾಲು ಆರೋಪಗಳ ಮೂಲಕ ವಾಗ್ದಾಳಿ ನಡೆಸಿದೆ. 200 ಕೋಟಿಗೂ ಹೆಚ್ಚು ಲೂಟಿ ಹೊಡೆದು ಕಲ್ಯಾಣ ಕರ್ನಾಟಕಕ್ಕೆ ಬಿಜೆಪಿ ಅನ್ಯಾಯ ಮಾಡಿದೆ. ವಿಪಕ್ಷ ನಾಯಕ ಆರ್.ಅಶೋಕ್ ಭ್ರಷ್ಟಾಚಾರದ ಸಾಮ್ರಾಟ ಕಿಡಿ ಕಾರಿದೆ. ಆಪ್ತ ಸಹಾಯಕನ ಮೂಲಕ ಲಂಚ ಪಡೆದಿದ್ದೂ ಅಲ್ಲದೇ ಭೂ ಕಬಳಿಕೆ, ಬಗರ್ ಹುಕುಂ ಅಕ್ರಮಗಳ ಭ್ರಷ್ಟಚರ ನಡೆಸಿರುವ ಆರ್.ಅಶೋಕ್ ಭ್ರಷ್ಟಾಚಾರದ ಸಾಮ್ರಾಟ ಕೃಷಿ ಇಲಾಖೆಯಲಿ ಹಗರಣ ನಡೆದಿದೆ.

## ನಗರಾಭಿವೃದ್ಧಿ ಇಲಾಖೆಯ ಕಾರ್ಯದರ್ಶಿಯ ನಿರ್ಲಕ್ಷ್ಯ ಧೋರಣೆ

• ಉದಯವಾಹಿನಿ, ಬೆಂಗಳೂರು

ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ನೌಕರರ ಸಂಘದ ವತಿಯಿಂದ ವಿವಿಧ ಭೇಡಿಕೆಗಳನ್ನು ಈಡೆರಿಸಲು ಮಾನ್ಯ ನಗರಾಭಿವೃದ್ಧಿ ಸಚಿವರು ಮತ್ತು ಮಾನ್ಯ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ರವರನ್ನು ಖುದ್ದಾಗಿ ಬೇಟಿ ಮಾಡಿ ಮತ್ತು ಹಲವಾರು ಬಾರಿ ಮನವಿ ಪತ್ರಗಳನ್ನು ಸಲ್ಲಿಸಿದ್ದರು, ಸಹ ಸಕರಾತ್ಮಕವಾಗಿ ಸ್ಪಂದಿಸದೆ ಇರುವುದರಿಂದ ಕರ್ನಾಟಕ ರಾಜ್ಯ ವ್ಯಾಪ್ತಿಯಲ್ಲಿ ಬರುವ 10 ಮಹಾನಗರ ಪಾಲಿಕೆ ಕೆಲಸ ಕಾರ್ಯಗಳನ್ನು ಸಂಪೂರ್ಣವಾಗಿ ಬಂದ್ ಮಾಡುವ ಬಗ್ಗೆ ಚರ್ಚಿಸಿ/ ತೀರ್ಮಾನಿಸಲು ದಿನಾಂಕ: 06-08-2024 ರಂದು ಬೆಳಿಗ್ಗೆ 11:00 ಗಂಟೆಗೆ ಬೆಂಗಳೂರು ನಗರದ ವಿ.ಟಿ ಪ್ಯಾರಡೈಸ್ ಹೋಟೆಲ್‌ನಲ್ಲಿ ತುರ್ತು ಸಭೆಯನ್ನು ರಾಜ್ಯಾಧ್ಯಕ್ಷರಾದ ಎ.ಅಮೃತ್ ರಾಜ್ ರವರ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿದೆ.



ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಮೈಸೂರು ಮಹಾನಗರ ಪಾಲಿಕೆ ನೌಕರರ ಸಂಘ, ದಾವಣಗೆರೆ ಮಹಾನಗರ ಪಾಲಿಕೆ ನೌಕರರ ಸಂಘ, ಹುಬ್ಬಳ್ಳಿ- ಧಾರವಾಡ ಮಹಾನಗರ ಪಾಲಿಕೆ ನೌಕರರ ಸಂಘ, ಬೆಳಗಾಂ ಮಹಾನಗರ ಪಾಲಿಕೆ ನೌಕರರ ಸಂಘ, ಬಳ್ಳಾರಿ ಮಹಾನಗರ ಪಾಲಿಕೆ ನೌಕರರ ಸಂಘ, ಗುಲ್ಬಾರ್ಗ ಮಹಾನಗರ ಪಾಲಿಕೆ ನೌಕರರ ಸಂಘ, ಎಸ್.ಕೆ ಮುನಿಸಿಪಲ್ ಎಂಪ್ಲಾಯಿಸ್ ಯೂನಿಯನ್ ನೌಕರರ ಸಂಘ ಮಂಗಳೂರು, ಶಿವಮೊಗ್ಗ ಮಹಾ ನಗರ ಪಾಲಿಕೆ ನೌಕರರ ಸಂಘ, ವಿಜಯಪುರ ಮಹಾನಗರ ಪಾಲಿಕೆ ನೌಕರರ ಸಂಘ ತುಮಕೂರು ಮಹಾನಗರ ಪಾಲಿಕೆ ನೌಕರರ ಸಂಘ ಅಧ್ಯಕ್ಷರು, ಪದಾಧಿಕಾರಿಗಳು ಭಾಗವಹಿಸಲಿದ್ದಾರೆ.

**ಪ್ರಮುಖ ಬೇಡಿಕೆಗಳ ಬಗ್ಗೆ ಚರ್ಚೆ**

- ಕರ್ನಾಟಕ ರಾಜ್ಯ ಮಹಾನಗರ ಪಾಲಿಕೆ ವೃಂದ ಮತ್ತು ನೇಮಕಾತಿ ನಿಯಾಮವಳಿ ತಿದ್ದುಪಡಿ ಬಗ್ಗೆ.
- ರಾಜ್ಯ ಸರ್ಕಾರಿ ನೌಕರರಿಗೆ ಜಾರಿ ಮಾಡಿರುವಂತೆ ಆರೋಗ್ಯ ಸೌಲಭ್ಯವನ್ನು ಮಹಾನಗರ ಪಾಲಿಕೆ ನೌಕರರಿಗೆ ಜಾರಿಮಾಡುವ ಬಗ್ಗೆ
- ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಜಾರಿಮಾಡಿರುವಂತೆ ಕೆ.ಜಿ.ಐ.ಡಿ, ಜಿ.ಪಿ.ಎಫ್ ಯೋಜನೆಯನ್ನು ಜಾರಿ ಮಾಡುವ ಬಗ್ಗೆ ,
- ಕರ್ನಾಟಕ ರಾಜ್ಯ ಸರ್ಕಾರಿ ನೌಕರರಿಗೆ ಪ್ರತಿ ವರ್ಷವೂ ಕ್ರೀಡಾಕೂಟಗಳನ್ನು ಏರ್ಪಡಿಸುವ ಮಾದರಿಯಲ್ಲೇ ಮಹಾನಗರ ಪಾಲಿಕೆ ನೌಕರರಿಗೆ ಕ್ರೀಡಾಕೂಟಗಳನ್ನು ಏರ್ಪಡಿಸುವ ಬಗ್ಗೆ ಹಾಗೂ ಇತರೆ ಪ್ರಮುಖ ವಿಷಯಗಳ ಚರ್ಚೆ.

## ಭ್ರಷ್ಟಾಚಾರದಲ್ಲಿ ನಂ.1ಕುಖ್ಯಾತಿ ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಭ್ರಷ್ಟಾಚಾರದಲ್ಲಿ ನಂ.1 ಎಂದು ಕುಖ್ಯಾತಿ ಪಡೆದಿದ್ದು ಜೆಡಿಎಸ್-ಬಿಜೆಪಿಯವರಿಂದಲೇ ಎಂದು ಸಿಎಂ ಸಿದ್ದರಾಮಯ್ಯ ಟ್ವೀಟ್ ಮಾಡಿದ್ದಾರೆ. ಜೆಡಿಎಸ್-ಬಿಜೆಪಿಯಿಂದಲೇ ಬ್ರಹ್ಮಾಂಡ ಭ್ರಷ್ಟಾಚಾರ ಆರಂಭವಾಗಿದೆ. ಗಣಿಧಣಿಗಳನ್ನು ರಾಜಕೀಯಕ್ಕೆ ಕರೆತಂದು ರಾಜ್ಯಕೀಯ ವ್ಯವಸ್ಥೆಯನ್ನು ಸಂಪೂರ್ಣ ಹಾಳು ಮಾಡಿದ್ದೇ ಬಿಜೆಪಿ.

ಇಡೀ ದೇಶದಲ್ಲೇ ಕರ್ನಾಟಕ ಭ್ರಷ್ಟಾಚಾರದಲ್ಲಿ ನಂಬರ್ 1 ಎಂದು ಕುಖ್ಯಾತಿ ಪಡೆದಿದ್ದು ಜೆಡಿಎಸ್-ಬಿಜೆಪಿಯವರಿಂದಲೇ. ಐಟಿ, ಇಡಿ, ಸಿಬಿಐ ಅವರ ಮನೆಗಳಿಗೆ ಬರಲೇ ಇಲ್ಲ ಎಂಬ ಸಚಿವ ಈಶ್ವರ್ ಖಂಡ್ರೆ ಹೇಳಿಕೆಯನ್ನು ಸಿಎಂ ಸಿದ್ದರಾಮಯ್ಯ ಟ್ವೀಟ್ ನಲ್ಲಿ ಹಂಚಿಕೊಂಡಿದ್ದಾರೆ.

ಬಿಜೆಪಿ ಶಾಸಕರು, ಕೇಂದ್ರ ಮಾಜಿ ಸಚಿವರಾದ ಬಸನಗೌಡ ಪಾಟೀಲ್ ಯತ್ನಾಳ್ ಅವರು ಬಿಜೆಪಿ-ಜೆಡಿಎಸ್ ಪಾದಯಾತ್ರೆಯನ್ನು ಭ್ರಷ್ಟಾಚಾರದ ವಿರುದ್ಧ ಭ್ರಷ್ಟಾಚಾರಿಗಳು ಮಾಡುತ್ತಿರುವ ಪಾದಯಾತ್ರೆ ಎಂದು ಹೇಳಿದ್ದಾರೆ, ನಿಮಗೆ ನಾಚಿಕೆ ಆಗಬೇಕು.



ಉದಯವಾಹಿನಿ ಚಿತ್ರ

ನೀವು ಏನನ್ನು ಸಾಬೀತು ಮಾಡಲು ಹೊರಟಿದ್ದೀರಿ ಅಸತ್ಯವನ್ನು ಸಾಬೀತುಮಾಡಲೊ, ಸತ್ಯವನ್ನು ಮರೆಮಾಚಲೊ ಪಾದಯಾತ್ರೆ ಏಕೆ ಹೊರಟಿದ್ದೀರಿ ಜೆಡಿಎಸ್ ಪಕ್ಷ ತಮ್ಮ ರಾಜಕೀಯ ಅಸ್ಥಿತ್ವ ಉಳಿಸಿಕೊಳ್ಳಲು ತಮ್ಮ ಜಾತ್ಯಾತೀತ ಸಿದ್ಧಾಂತವನ್ನು ಬದಿಗೊತ್ತಿ, ಕೋಮುವಾದಿ ಪಕ್ಷದ ಜೊತೆಗೆ ಕೈಜೋಡಿಸಿ, ಸಿದ್ದರಾಮಯ್ಯ ಹಾಗೂ ಡಿ.ಕೆ ಶಿವಕುಮಾರ್ ಅವರ ನೇತೃತ್ವದ ಸರ್ಕಾರವನ್ನು ಅಸ್ಥಿರಗೊಳಿಸಲು ಹೊರಟಿದೆ. ಇದು ಖಂಡನೀಯ ಎಂದು ಸಿಎಂ ಸಿದ್ದರಾಮಯ್ಯ ಟ್ವೀಟ್‌ನಲ್ಲಿ ಹಂಚಿಕೊಂಡಿದ್ದಾರೆ.

## ವಾಲ್ಮೀಕಿ ಹಗರಣದಲ್ಲಿ ಏಕಿಲ್ಲ..?

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವ ಎಚ್.ಡಿ.ರೇವಣ್ಣ ಅವರ ಕುಟುಂಬ ಸದಸ್ಯರ ಮೇಲೆ ಬಂದಿ ರುವ ಆರೋಪಕ್ಕೆ ಸಂಬಂಧಿಸಿದಂತೆ ಮಾತ್ರ ಆತುರದಲ್ಲಿ ಎಸ್ ಐಟಿ ರಚನೆ ಮಾಡಿ, ನೋಟೀಸ್ ನೀಡಿ, ವಿಚಾರಣೆ ಮಾಡಿ, ನ್ಯಾಯಾಂಗ ಬಂಧನಕ್ಕೂ ಕಳಿಸುತ್ತೀರಿ. ಆದರೆ ಅದೇ ಆಸಕ್ತಿ ವಾಲೀಕಿ ನಿಗಮದ ಹಗರಣದಲ್ಲಿ ಯಾಕೆ ತೋರಿಸುತ್ತಿಲ್ಲ



ಯಾವ ಸೀಮೆ ನ್ಯಾಯ ಸಿದ್ದರಾಮಯ್ಯನವರೇ ಎಂದು ವಿಧಾನಸಭೆಯ ಪ್ರತಿಪಕ್ಷದ ನಾಯಕ ಆರ್. ಆಶೋಕ್ ಪ್ರಶ್ನೆ ಮಾಡಿದ್ದಾರೆ. ಈ ಕುರಿತು ಸಿಎಂ ಸಿದ್ದರಾಮಯ್ಯನವರಿಗೆ ತಮ ಸಾಮಾಜಿಕ ಜಾಲತಾಣ ಎಕ್ಸ‌ನಲ್ಲಿ ಸರಣಿ ಪ್ರಶ್ನೆಗಳನ್ನು ಮುಂದಿಟ್ಟಿರುವ ಆಶೋಕ್ ಅವರು, ಎಸ್‌ಐಟಿ ರಚನೆಯಾಗಿದ್ದು 31.05.2024 ರಂದು. ಆದರೆ ಎಸ್‌ಐಟಿ ರಚನೆಯಾಗಿ 40 ದಿನ ಕಳೆದರೂ ಮಾಜಿ ಸಚಿವ ನಾಗೇಂದ್ರ, ಅವರನ್ನಾಗಲಿ, ಶಾಸಕ ಬಸವರಾಜ ದದ್ದಲ್ ಅವರನ್ನಾಗಲಿ ವಿಚಾರಣೆ ಮಾಡಲಿಲ್ಲ.ವಿಚಾರಣೆ ಹೋಗಲಿ ಒಂದು ನೋಟಿಸ್ ಕೂಡಾ ಕೊಡಲಿಲ್ಲ. ಅಂದಮೇಲೆ ನಿಮಗೆ ಸತ್ಯ ಸಂಗತಿ ಹೊರಬರುವುದು ಬೇಕಾಗಿಯೇ ಇರಲಿಲ್ಲ. ಎಸ್‌ಐಟಿ ರಚಿಸಿದ್ದೇ ಈ ಹಗರಣ ಮುಚ್ಚಿಹಾಕಲು ಅಲ್ಲವೇ ಸಿದ್ದರಾಮಯ್ಯನವರೇ ಎಂದು ಕಿಡಿಕಾರಿದ್ದಾರೆ. ಎಸ್‌ಐಟಿ ನಿಮ ಕೈಗೊಂಬೆ ಎನ್ನುವುದಕ್ಕೆ ಪರಶುರಾಮ್ ಮತ್ತು ಪದನಾಭ್ ಅವರ ನಡುವೆ ನಡೆದಿರುವ ಫೋನ್ ಸಂಭಾಷಣೆಯೇ ಸಾಕ್ಷಿ.

> ಇಡಿ ಮಧ್ಯ ಪ್ರವೇಶವಾದ ನಂತರ ಕೇವಲ ನೆಪ ಮಾತ್ರಕ್ಕೆ ವಿಚಾರಣೆಯ ನಾಟಕ ಮಾಡಿದ್ದು ಸುಳ್ಳಾ ಸಿದ್ದರಾಮಯ್ಯನವರೇ ವಿಚಾರಣೆಗೂ ಮುನ್ನ ಎಸ್‌ಐಟಿ ಮುಂದೆ ನೆಪ ಮಾತ್ರಕ್ಕೆ ಹೋಗಿ ಬಾ, ನಾನು ಅಧಿಕಾರಿಗಳಿಗೆ ಹೇಳಿಕೊಳ್ಳುತ್ತೇನೆ ಎಂದು ಪ್ರಭಾವಿ ನಾಯಕರೊಬ್ಬರು ನಾಗೇಂದ್ರ ಅವರಿಗೆ ಅಭಯ ಕೊಟ್ಟಿದ್ದು ಸುಳ್ಳೇ ಸಿದ್ದರಾಮಯ್ಯನವರೇ ಎಂದು ಆಶೋಕ್ ಪ್ರಶ್ನೆಗಳ ಮೇಲೆ ಪ್ರಶ್ನೆ ಮಾಡಿದ್ದಾರೆ.

ಸಿಬಿಐ, ಇಡಿ ಆದರೆ ನಮಗೆ ಜೈಲೇ ಗತಿ, ಎಸ್‌ಐಟಿ ಆದರೆ ನೋಡಿಕೊಳ್ಳಬಹುದು ಎಂದು ಪದನಾಭ್ ಹೇಳಿರುವುದು ಸತ್ಯವಲ್ಲವೇ ಸಿದ್ದರಾಮಯ್ಯನವರೇ ನಿಮ ಎಸ್‌ಐಟಿ ಎಷ್ಟು ನಿಷ್ಪಕ್ಷಪಾತಿ ಎಂದು ತಿಳಿಯಲು ಇದಕ್ಕಿಂತ ಪುರಾವೆ ಬೇಕೆ ಎಂದು ವ್ಯಂಗ್ಯವಾಡಿದ್ದಾರೆ.

ದೇವನಹಳ್ಳಿ ಬಳಿಯ ಖಾಸಗಿ ಹೋಟೆಲ್ ಒಂದರಲ್ಲಿ ಮಾಜಿ ಸಚಿವ ನಾಗೇಂದ್ರ, ಅವರು ನಿಗಮದ ಎಲ್ಲ ಅಧಿಕಾರಿಗಳನ್ನು ಕರೆದು, ಯಾವುದೇ ಕಾರಣಕ್ಕೂ ನನ್ನ ಹೆಸರನ್ನು ಎಲ್ಲಿಯೂ ಹೇಳಬೇಡಿ. ನಾನು ಅಧಿಕಾರದಲ್ಲಿ ಇದ್ದರೆ ಮಾತ್ರ ನಿಮನ್ನೆಲ್ಲ ಬಚಾವ್ ಮಾಡಲು ಸಾಧ್ಯ ಎಂದು ಎಚ್ಚರಿಕೆ ನೀಡಿದ್ದು ಸತ್ಯವಲ್ಲವೇ ಸಿದ್ದರಾಮಯ್ಯನವರೇ ಎಂದು ತರಾಟೆಗೆ ತೆಗೆದುಕೊಂಡಿದ್ದಾರೆ.

## ಜನಾಂದೋಲನ ಕಾರ್ಯಕ್ರಮ ಆಯೋಜನೆ.!

• ಉದಯವಾಹಿನಿ, ಬೆಂಗಳೂರು

ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ದೋಸ್ತಿ ಪಾದಯಾತ್ರೆಗೆ ಕಾಂಗ್ರೆಸ್ ಕೌಂಟರ್ ನೀಡಿದ್ದು, ಜನಾಂದೋಲನ ಕಾರ್ಯಕ್ರಮ ನಡೆಸಿದೆ. ಕನ್ನಡಿಗರಿಗೆ ಮಾಡುತ್ತಿರುವ ಅನ್ಯಾಯ ಖಂಡಿಸಿ ಮದ್ದೂರಿನಲ್ಲಿ ಜನಾಂದೋಲನ ಕೇಂದ್ರ ಬಿಜೆಪಿಯ ಷಡ್ಯಂತ್ರ ಹಾಗೂ ಕನ್ನಡಿಗರಿಗೆ ಮಾಡುತ್ತಿರುವ ಅನ್ಯಾಯ ಖಂಡಿಸಿ ಮದ್ದೂರಿನಲ್ಲಿ ಇಂದು ಹಮ್ಮಿಕೊಂಡಿದ್ದ ಜನಾಂದೋಲನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಜನರನ್ನು ಉದ್ದೇಶಿಸಿ ಡಿಸಿಎಂ ಡಿಕೆ ಶಿವಕುಮಾರ್ ಮಾತನಾಡಿದರು.

ಬಿಜೆಪಿಯವರು ಬೆಂಗಳೂರಿನಿಂದ ಮೈಸೂರಿಗೆ ಪಾದಯಾತ್ರೆ ಮಾಡ್ತಿದ್ದಾರೆ. ಅವರು ಮದ್ದೂರಿನ ಶಿವಪುರ ಸತ್ಯಾಗ್ರಹ ಸೌಧಕ್ಕೆ ಭೇಟಿ ನೀಡಬೇಕೆಂದು ಕೋರುತ್ತೇನೆ ಎಂದರು.

ಕಾಂಗ್ರೆಸ್ ಒಂದು ಸಂಘಟನೆಯಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಎಂತಹ ಮಹತ್ವದ ಪಾತ್ರ ವಹಿಸಿತು ಎಂಬುದು ಅರ್ಥವಾಗುತ್ತದೆ. ಆ ರಕ್ತಸಿಕ್ತ ಹೋರಾಟದ ಕತೆಯಲ್ಲಿ ಹಲವು ಕಾಂಗ್ರೆಸ್ ಕಾರ್ಯಕರ್ತರು ಮಡಿದಿದ್ದಾರೆ. ಆಗಸ್ಟ್ 9ರಂದು ಕ್ವಿಟ್ ಇಂಡಿಯಾ ಚಳುವಳಿ ದಿನ ಇದೆ. ಅದೇ ದಿನ ಮೈಸೂರಿನಲ್ಲಿ ಜನಾಂದೋಲನ ಕಾರ್ಯಕ್ರಮ ನಡೆಯಲಿದೆ.ಕಾಂಗ್ರೆಸ್ ಪಕ್ಷ ವಿಧಾನಸಭಾ ಚುನಾವಣೆಯಲ್ಲಿ ಗೆದ್ದ ನಂತರ ಅಧಿಕಾರಕ್ಕೆ ಬಂದಿದ್ದು ನಾವಲ್ಲ, ಈ ನಾಡಿನ ಜನತೆಯ ಕೈಗೆ ಅಧಿಕಾರ ಸಿಕ್ಕಿತು.

ಬಡವರಿಗಾಗಿ ನಾವು ಅನೇಕ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತಂದೆವು ಆದರೆ ಬಿಜೆಪಿಯವರು ಅವೆಲ್ಲವನ್ನೂ ನಿಲ್ಲಿಸುವ ಹುನ್ನಾರ ನಡೆಸಿದ್ದಾರೆ ಎಂದು ತಿಳಿಸಿದರು.

## ಗೃಹಲಕ್ಷ್ಮಿ ಹಣ ಬಿಡುಗಡೆ ಕುರಿತು ಸಿಎಂ ಹೇಳಿದ್ದೇನು..?

• ಉದಯವಾಹಿನಿ, ಬೆಂಗಳೂರು

ಮುಂದಿನ ವಾರ ಮತ್ತಷ್ಟು ಮಳೆಯಾಗುವ ಮುನ್ಸೂಚನೆಯಿದ್ದು, ಎಚ್ಚರಿಕೆ ವಹಿಸಲು ಹಲವು ಇಲಾಖೆಗಳಿಗೆ ಸೂಚನೆ ನೀಡಲಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಳಗಾವಿ ಜಿಲ್ಲೆಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಳೆಹಾನಿ ಕುರಿತು ಇಂದು ಜಿಲ್ಲೆಯ ವಿವಿಧ ಭಾಗಗಳಿಗೆ ತೆರಳಿ ಪರಿಶೀಲನೆ ನಡೆಸಲಾಗುವುದು ಎಂದು ತಿಳಿಸಿದರು.ಈ ಹಿಂದೆ ಮುಖ್ಯಮಂತ್ರಿಯಾಗಿದ್ದ ಬಿ.ಎಸ್ .ಯಡಿಯೂರಪ್ಪ ಅವರ ಕಾಲಾವಧಿಯಲ್ಲಿ ಪೂರ್ಣ ಮನೆ ಹಾಳಾಗಿದ್ದರೆ 5 ಲಕ್ಷ ರೂ. ಪರಿಹಾರ ನೀಡಬೇಕೆಂದು ನಿರ್ಣಯ ಮಾಡಲಾಗಿದ್ದು, ಅದು ದುರುಪಯೋಗವಾಗಿತ್ತು ಮತ್ತು ಎಲ್ಲರಿಗೂ ಪರಿಹಾರ ಸಿಗಲಿಲ್ಲ.

ಮೊದಲ ಎರಡು ಕಂತುಗಳ ಹಣ ಬಿಡುಗಡೆಯಾದರೆ ಮೂರನೇ ಕಂತಿನ ಹಣ ಬಿಡುಗಡೆಯಾಗಲಿಲ್ಲ ಎಂದರು. ಈಗ ನಮ ಸರ್ಕಾರ ಪೂರ್ಣ ಮನೆ ಹಾನಿಯಾಗಿದ್ದರೆ, 1,20,000 ರೂ. ಪರಿಹಾರದ ಜೊತೆಗೆ ಮನೆಯನ್ನು ಕಟ್ಟಿಸಿಕೊಡುತ್ತೇವೆ ಎಂದು ಹೇಳಿದರು.ರಾಜ್ಯದಲ್ಲಿ ಮೈಸೂರು, ಕೊಡಗು, ಹಾಸನ ಜಿಲ್ಲೆಗಳಲ್ಲಾಗಿರುವ ಮಳೆಹಾನಿಯನ್ನು ಪರಿಶೀಲನೆ ನಡೆಸಲಾಗಿದೆ.

ಮನೆ ಬಿದ್ದು ಹೋಗಿರುವುದು, ಜೀವಹಾನಿ, ವಿದ್ಯುತ್ ಕಂಬ ಬಿದ್ದಿರುವುದು, ವಿದ್ಯುತ್ತ ಕಂಬಗಳ ದುರಸ್ತಿ ಸೇರಿದಂತೆ ಹಲವು ರೀತಿಯ ಪರಿಹಾರ ಕಾರ್ಯಗಳನ್ನು ಆರಂಭಿಸಲಾಗಿದೆ ಎಂದರು.

# ಹಳದಿ ಮಾರ್ಗದಲ್ಲಿ ಮೆಟ್ರೋ ಸಂಚಾರ ವಿಳಂಬ

**■ ಹಳದಿ ಮಾರ್ಗದಲ್ಲಿ ಈಗಾಗಲೇ ಮೆಟ್ರೋ ರೈಲಿನ ಪ್ರಾಯೋಗಿಕ ಸಂಚಾರ ಆರಂಭ**

• ಉದಯವಾಹಿನಿ, ಬೆಂಗಳೂರು

ಉದ್ಯಾನ ನಗರಿ ಬೆಂಗಳೂರಿನಲ್ಲಿ ಬಹು ನಿರೀಕ್ಷೆ ಹುಟ್ಟಿಸಿರುವ ನಮ್ಮ ಮೆಟ್ರೋ ಮಾರ್ಗ ಆರ್. ವಿ. ರಸ್ತೆ-ಬೊಮ್ಮಸಂದ್ರ. ಹಳದಿ ಮಾರ್ಗದಲ್ಲಿ ಈಗಾಗಲೇ ಮೆಟ್ರೋ ರೈಲಿನ ಪ್ರಾಯೋಗಿಕ ಸಂಚಾರ ಆರಂಭವಾಗಿದೆ. ಆದರೆ ಮೆಟ್ರೋ ರೈಲುಗಳ ವಾಣಿಜ್ಯ ಸಂಚಾರ ವಿಳಂವಾಗಲಿದೆಯೇ ಎಂಬ ಪ್ರಶ್ನೆ ಹುಟ್ಟಿಕೊಂಡಿದೆ. ಬಿಎಂಆರ್‌ಸಿಎಲ್ ಈ ಮಾರ್ಗದಲ್ಲಿ ಚಾಲಕ ರಹಿತ ನಮ್ಮ ಮೆಟ್ರೋ ರೈಲುಗಳನ್ನು ಓಡಿಸಲಿದೆ.

18.82 ಕಿ. ಮೀ. ನಮ್ಮ ಮೆಟ್ರೋ ಹಳದಿ ಮಾರ್ಗ ಆರ್. ವಿ. ರಸ್ತೆ-ಬೊಮ್ಮಸಂದ್ರ ಟೆಕ್ಕಿಗಳಿಗೆ ಅನುಕೂಲಕರವಾಗಿದೆ. ಈ ಮಾರ್ಗದಲ್ಲಿ ಸಂಚಾರ ಆರಂಭವಾದರೆ ನಗರದ ಸಂಚಾರ ದಟ್ಟಣೆ ಸ್ವಲ್ಪ ಕಡಿಮೆಯಾಗಲಿದೆ ಎಂದು ಅಂದಾಜಿಸಲಾಗಿದೆ. ಸುಮಾರು 30ಕ್ಕೂ ಅಧಿಕ ಮಾದರಿ ಪ್ರಾಯೋಗಿಕ ಪರೀಕ್ಷೆಗಳು ಮುಗಿದ ಬಳಿಕ, ರೈಲ್ವೆ ಸುರಕ್ಷತಾ ಆಯುಕ್ತರು ಮಾರ್ಗವನ್ನು ಪರಿಶೀಲಿಸಲಿದ್ದಾರೆ. ಬಳಿಕ ವಾಣಿಜ್ಯ ಸಂಚಾರಕ್ಕೆ ಹಸಿರು ನಿಶಾನೆ ಸಿಗಲಿದೆ. 2017ರಲ್ಲಿ ಈ ಮಾರ್ಗದ ಕಾಮಗಾರಿ ಆರಂಭವಾಗಿತ್ತು. ನಿಲ್ದಾಣ ಸೇರಿದಂತೆ ವಿವಿಧ ಕಾಮಗಾರಿಗಳು ಅಂತಿಮ ಹಂತದಲ್ಲಿದೆ. ಈ ಮಾರ್ಗದಲ್ಲಿ ಚಾಲಕರ ರಹಿತ



ಉದಯವಾಹಿನಿ ಚಿತ್ರ

**ನಾಗಸಂದ್ರ ಮಾದವರ ನಡುವೆ ಮೆಟ್ರೋ ಸಂಚಾರ**

ನಮ್ಮ ಮೆಟ್ರೋ ರೈಲು ಓಡಿಸಲು ಬಿಎಂಆರ್ ಸಿಎಲ್ ಮುಂದಾಗಿದೆ. ಈಗಾಗಲೇ ಈ ಮಾದರಿಯ ಎರಡು ರೈಲುಗಳು ಚೀನಾದಿಂದ ಬಂದಿದ್ದು, ಸದ್ಯ ಪ್ರಾಯೋಗಿಕ ಸಂಚಾರ ಚಾಲಕ ಸಹಿತವಾಗಿಯೇ ನಡೆಯುತ್ತಿದೆ.

ಬೋಗಿಗಳ ಕೊರತೆ ಕಾಡುತ್ತಿದೆ: ಆರ್. ವಿ. ರಸ್ತೆ-ಬೊಮ್ಮಸಂದ್ರ ಮಾರ್ಗದಲ್ಲಿ ಪರೀಕ್ಷಾರ್ಥ ಸಂಚಾರ ಪೂರ್ಣಗೊಂಡರೂ ಸಹ ರೈಲು ಸಂಚಾರಕ್ಕೆ ಬೋಗಿಗಳ ಕೊರತೆ ಸಮಸ್ಯೆ ಇದೆ. ಈ ಮಾರ್ಗದಲ್ಲಿ ಸದ್ಯ ಎರಡು ರೈಲುಗಳಲ್ಲಿ ಪ್ರಾಯೋಗಿಕ ಸಂಚಾರ ಮಾಡಲಾಗುತ್ತಿದೆ. ಪೂರ್ಣ ಪ್ರಮಾಣದ ಪರೀಕ್ಷೆಗೆ ಇನ್ನೂ ಎರಡು ರೈಲುಗಳ ಅಗತ್ಯವಿದೆ. ಚಾಲಕ ರಹಿತ ನಮ್ಮ ಮೆಟ್ರೋ ರೈಲು ಬೋಗಿಗಳು ಇನ್ನೂ ನಿರ್ಮಾಣ ಹಂತದಲ್ಲಿದೆ. ಆದ್ದರಿಂದ

> ನಗರಕ್ಕೆ ಬರುವ 216 ಕೋಚ್‌ಗಳ ಪೈಕಿ ಬಿಎಂಆರ್‌ಸಿಎಲ್ 126 ಕೋಚ್‌ಗಳನ್ನು ನೇರಳೆ, ಹಸಿರು ಮಾರ್ಗಕ್ಕೆ ಮತ್ತು 90 ಬೋಗಿಗಳನ್ನು ಹಳದಿ ಮಾರ್ಗಕ್ಕೆ ನಿಯೋಜಿಸಬೇಕು ಎಂದು ಯೋಜನೆ ರೂಪಿಸಿದೆ. ಹಸಿರು ಮಾರ್ಗದಲ್ಲಿ ವಿಸ್ತರಿತ ಮಾರ್ಗವಾದ ನಾಗಸಂದ್ರ-ಮಾದವರ ನಡುವೆ ಮೆಟ್ರೋ ಸಂಚಾರ ನಡೆಸಬೇಕಿರುವ ಕಾರಣ ಹೆಚ್ಚಿನ ಬೋಗಿಯ ಅಗತ್ಯವಿದೆ.

ಪ್ರಾಯೋಗಿಕ ಸಂಚಾರ ಮುಗಿಸಿದ ಬಳಿಕ ವಾಣಿಜ್ಯ ಸಂಚಾರ ಆರಂಭವಾದರೂ ಸಹ ರೈಲುಗಳ ಕೊರತೆ ಎದುರಾಗಲಿದೆ. ಇನ್ನೂ 3-4 ರಿಂದ ತಿಂಗಳಲ್ಲಿ ಬೋಗಿಗಳು ಬರುವ ನಿರೀಕ್ಷೆ ಇದೆ. ಅವುಗಳ ಜೋಡಣೆ ಬಳಿಕ ಸಂಚಾರಕ್ಕೆ ಮುಕ್ತವಾಗಲಿವೆ. ಈ ಮಾರ್ಗದಲ್ಲಿ ವಾಣಿಜ್ಯ ಸಂಚಾರ ಆರಂಭವಾದರೆ 36 ಬೋಗಿಯ 6 ರೈಲುಗಳ ಅಗತ್ಯವಿದೆ ಎಂಬುದು ಸದ್ಯದ ಲೆಕ್ಕಾಚಾರವಾಗಿದೆ. ಸದ್ಯ ಎರಡು ರೈಲುಗಳಿವೆ. ಇನ್ನೂ ಎರಡು ರೈಲುಗಳು 2 ತಿಂಗಳಿನಲ್ಲಿ ಬೆಂಗಳೂರಿಗೆ ಆಗಮಿಸಬಹುದು ಎಂಬ ನಿರೀಕ್ಷೆ ಇದೆ.ಬಿಎಂಆರ್‌ಸಿಎಲ್ ಚೀನಾ ಮೂಲದ ಚೀನಾ ರೈಲ್ವೆ ರೋಲಿಂಗ್ ಸ್ಟಾಕ್ ಕಾರ್ಪೊರೇಷನ್ (ಸಿಆರ್‌ಆರ್‌ಸಿ)ಗೆ ಬೋಗಿ ತಯಾರಿಕಾ ಟೆಂಡರ್ ನೀಡಿದೆ. ಒಪ್ಪಂದದ ಅನ್ವಯ

> ಕೆಲವು ಐಟಿ ಕಂಪನಿಗಳ ಜೊತೆ ಒಪ್ಪಂದವನ್ನು ಮಾಡಿಕೊಂಡು ಬಿಎಂಆರ್‌ಸಿಎಲ್ ಅವುಗಳಿಗೆ ಅನುಕೂಲವಾಗುವ ಮಾದರಿಯಲ್ಲಿ ಮೆಟ್ರೋ ನಿಲ್ದಾಣವನ್ನು ನಿರ್ಮಾಣ ಮಾಡಿದೆ. ನಗರದಲ್ಲಿ ಕಾರ್ಯ ನಿರ್ವಹಣೆ ಮಾಡುವ ಸಾಫ್ಟ್‌ವೇರ್ ಉದ್ಯೋಗಿಗಳು ಈ ಮಾರ್ಗದಲ್ಲಿ ಮೆಟ್ರೋ ಸಂಚಾರಕ್ಕಾಗಿ ಕಾದು ಕುಳಿತಿದ್ದಾರೆ.

ಕಂಪನಿ ಭಾರತದ ತನ್ನ ಪಾಲುದಾರ ಕೋಲ್ಕತ್ತಾ ಮೂಲದ ಟಿಟಾಗರ್ ವ್ಯಾಗನ್ಸ್ ಮೂಲಕ 216 ಬೋಗಿಯನ್ನು ತಯಾರಿಸಿ ಪೂರೈಕೆ ಮಾಡಬೇಕಿದೆ.2023ರಲ್ಲಿಯೇ 6 ಬೋಗಿಯ ಎರಡು ಸೆಟ್ ರೈಲುಗಳನ್ನು ಪೂರೈಕೆ ಮಾಡುವುದಾಗಿ ತಿಳಿಸಿತ್ತು. ಸದ್ಯ ಒಂದು ಸೆಟ್ ಮಾತ್ರ ನಗರದಲ್ಲಿದ್ದು, ಪ್ರಾಯೋಗಿಕ ಸಂಚಾರ ನಡೆಯುತ್ತಿದೆ. ಒಂದು ಸೆಟ್ ಚೀನಾದಿಂದ, ಉಳಿದ 34 ರೈಲು ಕೋಲ್ಕತ್ತಾದಿಂದ ಬೆಂಗಳೂರಿಗೆ ಪೂರೈಕೆಯಾಗಬೇಕು.ಈ ಹಳದಿ ಮಾರ್ಗದಲ್ಲಿ ಬೊಮ್ಮಸಂದ್ರ, ಹೆಬ್ಬಗೋಡಿ, ಹಸ್ಕೂರ್ ರಸ್ತೆ, ಇನ್ಫೋಸಿಸ್ ಫೌಂಡೇಶನ್, ಎಲೆಕ್ಟ್ರಾನಿಕ್ ಸಿಟಿ, ಬಿರಿಟೆನ ಅಗ್ರಹಾರ, ಹೊಸರಸ್ತೆ, ಸಿಂಗಸಂದ್ರ, ಕೂಡ್ಲು ಗೇಟ್, ಹೊಂಗಸಂದ್ರ, ಬೊಮ್ಮನಹಳ್ಳಿ, ಸೆಂಟ್ರಲ್ ಸಿಲ್ಕ್ ಬೋರ್ಡ್, ಬಿಟಿಎಂ ಲೇಔಟ್, ಜಯದೇವ ಆಸ್ಪತ್ರೆ, ರಾಗಿಗುಡ್ಡ, ಆರ್. ವಿ. ರಸ್ತೆ ನಿಲ್ದಾಣಗಳಿವೆ.

# ಹುಟ್ಟಿದ ಎಲ್ಲಾ ಕರು ಬಸವ ಅಲ್ಲ, ಎಲ್ಲರೂ ರೈತನ ಮಗ ಆಗಲ್ಲ: ಡಿಕೆಶಿ

## ಬೆಂಗಳೂರು ದಕ್ಷಿಣ ಜಿಲ್ಲೆಯವರಾದ ನಾವು, ಚುನಾವಣೆಯಲ್ಲಿ ಕುಮಾರಸ್ವಾಮಿಗೆ ತಕ್ಕ ಉತ್ತರ ಕೊಡಬೇಕು

• ಉದಯವಾಹಿನಿ ಚನ್ನಪಟ್ಟಣ

ಹುಟ್ಟಿದ ಕರುಗಳೆಲ್ಲ ಬಸವ ಆಗಲ್ಲ. ಅದೇ ರೀತಿ ಎಲ್ಲರೂ ರೈತನ ಮಗ ಆಗುವುದಿಲ್ಲ ಎಂದು ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಎಚ್.ಡಿ. ಕುಮಾರಸ್ವಾಮಿ ವಿರುದ್ಧ ಪರೋಕ್ಷ ವಾಗ್ದಾಳಿ ನಡೆಸಿದರು.

ಚನ್ನಪಟ್ಟಣದ ಬಾಲಕರ ಪದವಿ ಪೂರ್ವ ಕಾಲೇಜು ಮೈದಾನದಲ್ಲಿ ನಡೆದ ಕಾಂಗ್ರೆಸ್ ಪಕ್ಷದ ಮೂರನೇ ದಿನದ ಜನಾಂದೋಲನ ಸಮಾವೇಶದಲ್ಲಿ ಅವರು ಮಾತನಾಡಿದರು.

ರೈತನ ಮಗ ಎಂದು ಹೇಳಿಕೊಳ್ಳುವ ಕುಮಾರಸ್ವಾಮಿ ಚನ್ನಪಟ್ಟಣದಲ್ಲಿ ಎಷ್ಟು ಜನರಿಗೆ ಬಗರ್ ಹುಕುಂ ಸಾಗುವಳಿ ಚೀಟಿ ಕೊಟ್ಟಿದ್ದಾರೆಂದು ಉತ್ತರಿಸಲಿ. ಕ್ಷೇತ್ರದಲ್ಲಿ ನಾನು ಜನಸ್ಪಂದನ ಸಭೆ ಮಾಡಿದಾಗ 22 ಸಾವಿರ ಜನ ವಿವಿಧ ಸಮಸ್ಯೆಗಳ ಕುರಿತು ಅಹವಾಲು ಅರ್ಜಿ ಕೊಟ್ಟಿದ್ದಾರೆ. ಹಾಗಾದರೆ, ಇವರು ಇಷ್ಟು ವರ್ಷ ಮಾಡಿದ್ದೇನು?' ಎಂದು ಪ್ರಶ್ನಿಸಿದರು. 'ಉಪ ಮುಖ್ಯಮಂತ್ರಿಯಾಗಿದ್ದರೂ ನಿಮ್ಮ ಶಾಸಕನಂತೆ ಇಲ್ಲಿಗೆ ಬಂದು ಕೆಲಸ ಮಾಡುವೆ. ಕ್ಷೇತ್ರದಲ್ಲಿ ಸೇವೆ ಮಾಡಲು ಅವಕಾಶ ಕೊಡಿ. ಬೆಂಗಳೂರು ದಕ್ಷಿಣ ಜಿಲ್ಲೆಯವರಾದ ನಾವು, ಚುನಾವಣೆಯಲ್ಲಿ ಕುಮಾರಸ್ವಾಮಿಗೆ ತಕ್ಕ ಉತ್ತರ ಕೊಡಬೇಕು' ಎಂದು ಹೇಳಿದರು. ಚನ್ನಪಟ್ಟಣ ಉಪ ಚುನಾವಣೆಯಲ್ಲಿ ನಾನು ಮತ್ತು ಸಿದ್ದರಾಮಯ್ಯನವರೇ ಅಭ್ಯರ್ಥಿ ಎಂದು ಭಾವಿಸಿ ಇಲ್ಲಿನ ಜನರು ಹಸ್ತದ ಗುರುತಿಗೆ ಮತ ಹಾಕಬೇಕು' ಎಂದು ಅವರು ಮನವಿ ಮಾಡಿದರು.

> ಪಾದಯಾತ್ರೆಗೆ ವಿರೋಧ ವ್ಯಕ್ತಪಡಿಸಿದ ಕುಮಾರಸ್ವಾಮಿ ಈಗ ಫೋಟೊದಲ್ಲಿ ಮುಂದಿದ್ದಾರೆ. ಪಟ್ಟು ಹಿಡಿದು ಪಾದಯಾತ್ರೆ ಮಾಡಿದ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಿಂದಿದ್ದಾರೆ
> -ಜಿ. ಪರಮೇಶ್ವರ, ಗೃಹ ಸಚಿವ


ಉದಯವಾಹಿನಿ ಚಿತ್ರ

**ಮೈತ್ರಿ ಸರ್ಕಾರದ ವಿರುದ್ಧ ಕಿಡಿ**

'ಹಿಂದೆ ಬಿಜೆಪಿ ನಾಯಕ ಬಿ.ಎಸ್. ಯಡಿಯೂರಪ್ಪ ಅವರನ್ನು ಜೈಲಿಗೆ ಕಳಿಸಿದ್ದ ಬ್ಲ್ಯಾಕ್‌ಮೇಲ್ ಮತ್ತು ಹಿಟ್ ಆಯಂಡ್ ರನ್ ಕುಮಾರಸ್ವಾಮಿ, ಈಗ ಅವರನ್ನೇ ತಬ್ಬಿ ಮುದ್ದಾಡುತ್ತಿದ್ದಾರೆ. ಪಾದಯಾತ್ರೆ ವಿರೋಧಿಸಿದ್ದವರು ಬಿಜೆಪಿಯವರನ್ನು ಸಹ ಬ್ಲ್ಯಾಕ್‌ಮೇಲ್ ಮಾಡಿ ಜೊತೆಯಲ್ಲಿ ಹೆಜ್ಜೆ ಹಾಕುತ್ತಿದ್ದಾರೆ' ಎಂದು ಶಿವಕುಮಾರ್ ವ್ಯಂಗ್ಯವಾಡಿ ದರು. ಅಪ್ಪ-ಮಗನನ್ನು ನಂಬಬೇಡಿ ಎಂದು ನನಗೆ ಕಿವಿಮಾತು ಹೇಳಿದ್ದ ಯಡಿಯೂರಪ್ಪನವರೇ, ನೀವ್ಯಾಕೆ ರಾಜೀನಾಮೆ ಕೊಟ್ಟು ಕಣ್ಣೀರು ಹಾಕಿದಿರಿ ಎಂಬುದಕ್ಕೆ ಉತ್ತರ ಕೊಡಿ. ನಿಮ್ಮ ಮತ್ತು ಬಸವರಾಜ ಬೊಮ್ಮಾಯಿ ಅವಧಿಯ ಹಗರಣಗಳ ಪಟ್ಟಿ ನಮ್ಮ ಬಳಿ ಇದೆ. ಅದೆಲ್ಲವನ್ನೂ ಜನರ ಮುಂದಿಡುವೆ. ನೀವು ಟೂರಿಂಗ್ ಟಾಕೀಸ್ ಮಾಡುತ್ತಾ ಇರಿ. ನಿಮ್ಮಿಬ್ಬರ ನವರಂಗಿ ಬಣ್ಣವನ್ನು ಜನರ ಮುಂದೆ ಬಯಲು ಮಾಡುವೆ' ಎಂದರು.

ಹೆಲ್ಮೆಟ್ ಧರಿಸಿ ಕಾರ್ಯಕರ್ತರೊಬ್ಬರ ಬೈಕ್ ಏರಿದ ಶಿವಕುಮಾರ್, ಅದರಲ್ಲೇ ವೇದಿಕೆ ಸ್ಥಳಕ್ಕೆ ಬಂದರು. ಹಿಂದಿನ ಎರಡೂ ದಿನವೂ ಬೈಕ್ ರ‍್ಯಾಲಿ ಮಾಡಿದ್ದ ಅವರು ಹೆಲ್ಮೆಟ್ ಧರಿಸಿರಲಿಲ್ಲ.

ಚನ್ನಪಟ್ಟಣದಲ್ಲಿ ನಡೆದ ಕಾಂಗ್ರೆಸ್ ಜನಾಂದೋಲನ ಸಮಾವೇಶದಲ್ಲಿ ಸರ್ಕಾರದ ಸಚಿವರ ಭಾಷಣದ ಸಂದರ್ಭದಲ್ಲಿ ಕಾರ್ಯಕರ್ತರು ಬಿಜೆಪಿ ಅವಧಿಯ ಹಗರಣಗಳ ಫಲಕಗಳನ್ನು ಪ್ರದರ್ಶಿಸಿದರು.

### ಯತ್ನಾಳ್ ಕೇಳುತ್ತಿರುವ ಪ್ರಶ್ನೆಗಳಿಗಾದರೂ ಉತ್ತರ ಕೊಡಿ

ಭ್ರಷ್ಟಾಚಾರದ ವಿರುದ್ಧ ಪಾದಯಾತ್ರೆ ಮಾಡುತ್ತಿರುವ ಭ್ರಷ್ಟಾಚಾರಿಗಳು ತಮ್ಮ ತಟ್ಟೆಯಲ್ಲಿ ಬಿದ್ದಿರುವ ಹೆಗ್ಗಣ ನೋಡಿಕೊಳ್ಳುವುದನ್ನು ಬಿಟ್ಟು ನಿಮ್ಮ ತಟ್ಟೆಯಲ್ಲಿ ನೊಣ ಬಿದಿದ್ದೆ ಎನ್ನುತ್ತಿದ್ದಾರೆ. ಅಧಿಕಾರದಲ್ಲಿದ್ದಾಗ ನೀವು ಮಾಡಿದ ಹಗರಣಗಳ ಕುರಿತ ನಮ್ಮ ಪ್ರಶ್ನೆಗೆ ಉತ್ತರಿಸಲಾಗದಿದ್ದರೆ ಕಡೆ ಪಕ್ಷ ನಿಮ್ಮದೇ ಪಕ್ಷದ ಶಾಸಕ ಬಸನಗೌಡ ಪಾಟೀಲ ಯತ್ನಾಳ ಕೇಳುತ್ತಿರುವ ಪ್ರಶ್ನೆಗಳಿಗಾದರೂ ಉತ್ತರ ಕೊಡಿ ವಿಜಯೇಂದ್ರ' ಎಂದು ವ್ಯಂಗ್ಯವಾಡಿದರು.

# ಪಾದಯಾತ್ರೆಯಲ್ಲಿ ಕೆಜಿಎಫ್ ಮಾಜಿ ಶಾಸಕ ವೈ.ಸಂಪಂಗಿ ಭಾಗಿ

• ಉದಯವಾಹಿನಿ ಬೇತಮಂಗಲ

ಕೆಜಿಎಫ್ ವಿಧಾನಸಭಾ ಕ್ಷೇತ್ರದ ಮಾಜಿ ಶಾಸಕ ವೈ.ಸಂಪಂಗಿ ಮುಡಾ ಮತ್ತು ವಾಲ್ಮೀಕಿ ನಿಗಮದ ಹಣ ಹಗರಣ, ಪರಿಶಿಷ್ಟ ಜಾತಿ ಹಾಗೂ ಪಂಗಡ ಸಮುದಾಯದ 25 ಸಾವಿರ ಕೋಟಿ ದುರುಪಯೋಗ ವಿರುದ್ಧ ರಾಜ್ಯ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದಿಂದ ಹಮ್ಮಿಕೊಂಡಿರುವ ಮೈಸೂರು ಚಲೋ ಪಾದಯಾತ್ರೆಯಲ್ಲಿ ತೊಡಗಿಸಿಕೊಂಡು ಕಾರ್ಯಕರ್ತರಂತೆ ಹೆಜ್ಜೆ ಹಾಕುವ ಮೂಲಕ ಕಾರ್ಯಕರ್ತರಿಗೆ ಉತ್ಸಾಹ ನೀಡಿದ್ದಾರೆ.

ಬೆಂಗಳೂರಿನಲ್ಲಿ ಜೆಡಿಎಸ್ ಪಕ್ಷದ ನಾಯಕರು ಹಾಗೂ ಬಿಜೆಪಿ ಪಕ್ಷದ ನಾಯಕರಿಂದ ಪಾದಯಾತ್ರೆಗೆ ಚಾಲನೆಯಲ್ಲಿ ಭಾಗವಹಿಸಿ ನಡೆಯುವ ಮೂಲಕ ಎರಡನೇ ದಿನವಾದ ಭಾನುವಾರವೂ ಸಹ ಪಾದಯಾತ್ರೆಯಲ್ಲಿ ಪಕ್ಷದ ನಾಯಕರೊಂದಿಗೆ ಹೆಜ್ಜೆ ಹಾಕಿದ್ದಾರೆ. ವಿಧಾನ ಪರಿಷತ್ತಿನ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಕೊಳ್ಳೇಗಾಲದ ಮಾಜಿ ಶಾಸಕ ಎನ್.ಮಹೇಶ್, ಮಾಲೂರು ಮಾಜಿ ಶಾಸಕ ಮಂಜುನಾಥಗೌಡ, ಕೆಜಿಎಫ್ ತಾಲ್ಲೂಕು ವ್ಯವಸಾಯೋತ್ಪನ್ನ ಮಾರಾಟ ಸಹಕಾರ ಸಂಘದ ಅಧ್ಯಕ್ಷ ಎಸ್.ಪ್ರವೀಣ್ ಕುಮಾರ್ ಹಾಗೂ ಕೆಜಿಎಫ್ ಗ್ರಾಮಾಂತರ ಅಧ್ಯಕ್ಷ ಲಕ್ಷ್ಮೀನಾರಾಯಣ್ ಬಿಜೆಪಿ ಜೆಡಿಎಸ್ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

# 8 ಟಿಎಂಸಿಗೆ ಇಳಿದ ಎತ್ತಿನಹೊಳೆ ನೀರಿನ ಇಳುವರಿ


• ಉದಯವಾಹಿನಿ ಚಿಕ್ಕಬಳ್ಳಾಪುರ

ಬಯಲು ಸೀಮೆಯ ಜಿಲ್ಲೆಗಳ ಜನರು ಕುಡಿಯುವ ನೀರು ಮತ್ತು ಅಂತರ್ಜಲ ಅಭಿವೃದ್ಧಿ ವಿಚಾರವಾಗಿ ಹೆಚ್ಚಿನ ನಿರೀಕ್ಷೆಗಳನ್ನು ಹೊಂದಿರುವ ಎತ್ತಿನಹೊಳೆ ಯೋಜನೆಯ ನೀರಿನ ಇಳುವರಿ ಪ್ರಮಾಣ ಭಾರಿ ಪ್ರಮಾಣದಲ್ಲಿ ಕುಗ್ಗಿದೆ. ಈ ಕುಗ್ಗುವಿಕೆಯು ಯೋಜನೆಯ ಕಟ್ಟಕಡೆಯ ಜಿಲ್ಲೆಗಳಿಗೆ ಹಂಚಿಕೆಯಾಗಿದ್ದಷ್ಟು ನೀರು ದೊರೆಯುತ್ತದೆಯೇ ಎನ್ನುವ ಬಗ್ಗೆ ಸಂಶಯಗಳನ್ನು ಮೂಡಿಸಿದೆ. ಯೋಜನೆಯ ವೆಚ್ಚ ಮೂರು ಪಟ್ಟು ಹೆಚ್ಚಳವಾಗಿದ್ದರೆ ಮತ್ತೊಂದು ಕಡೆ ನೀರು ತಿರುಗಿಸುವ ಪ್ರಮಾಣವು ಮೂರು ಪಟ್ಟು ಇಳಿಕೆಯಾಗಿದೆ.

ಕೋಲಾರ ಶಾಸಕ ಕೊತ್ತೂರು ಜಿ. ಮಂಜುನಾಥ್ ಕಳೆದ ತಿಂಗಳು ನಡೆದ ವಿಧಾನಸಭೆ ಅಧಿವೇಶನದಲ್ಲಿ ಎತ್ತಿನಹೊಳೆ ನೀರಾವರಿ ಯೋಜನೆಯ ಬಗ್ಗೆ ಮಾಹಿತಿ ಕೇಳಿದ್ದರು. ಜಲಸಂಪನ್ಮೂಲ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ನೀರಿನ ಇಳುವರಿ, ವೆಚ್ಚದ ಬಗ್ಗೆ ಸಮಗ್ರ ಮಾಹಿತಿ ನೀಡಿದ್ದಾರೆ. ಈ ಮಾಹಿತಿಯಲ್ಲಿ ಬಳಕೆಗೆ ಲಭ್ಯವಿರುವ ನೀರಿನ ಪ್ರಮಾಣ ಇಳಿಕೆ ಆಗಿದೆ ಎನ್ನುವುದನ್ನು ತಿಳಿಸಿದ್ದಾರೆ.

172 ಚದುರ ಕಿ.ಮೀ ವ್ಯಾಪ್ತಿಯ ಪಶ್ಚಿಮ ಘಟ್ಟ ಜಲಾನಯನ ಪ್ರದೇಶದಲ್ಲಿ ಮುಂಗಾರು ಅವಧಿಯಲ್ಲಿ ಅಂದಾಜು 34.26 ಟಿಎಂಸಿ ಅಡಿ ನೀರಿನ ಇಳುವರಿ ದೊರೆಯುತ್ತದೆ. ಈ ಪೈಕಿ 24.01 ಟಿಎಂಸಿ ಅಡಿಯನ್ನು ತಿರುಗಿಸಬಹುದಾದ ನೀರು ಎಂದು ಪರಿಗಣಿಸಲಾಗಿದೆ.

ಹೀಗೆ ತಿರುಗಿಸಬಹುದಾದ ನೀರೇ ಎತ್ತಿನಹೊಳೆ ಯೋಜನೆಗೆ ಆಧಾರ. ಯೋಜನೆ ವರದಿ ತಯಾರಿಸುವ ಸಂದರ್ಭದಲ್ಲಿ ಇಳುವರಿಗೆ ಸಂಬಂಧಿಸಿದಂತೆ ಭಾರತೀಯ ವಿಜ್ಞಾನ ಸಂಸ್ಥೆಯ ನಿವೃತ್ತ ವಿಜ್ಞಾನಿ ಪ್ರೊ.ರಾಮಪ್ರಸಾದ್ ಅವರಿಂದ ಪರಿಶೀಲಿಸಲಾಗಿದೆ. ಕೇಂದ್ರೀಯ ಜಲ ಆಯೋಗ, ರಾಷ್ಟ್ರೀಯ ಜಲವಿಜ್ಞಾನ ಸಂಸ್ಥೆ ಮತ್ತು ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದಿಂದಲೂ ಅಭಿಪ್ರಾಯ ಪಡೆಯಲಾಗಿದೆ.


ಉದಯವಾಹಿನಿ ಚಿತ್ರ

**ನೀರು ತಿರುಗಿಸುವ ಪ್ರಮಾಣ 3 ಪಟ್ಟು ಇಳಿಕೆ**

# ಭಕ್ತರನ್ನು ಸ್ವಾಗತಿಸುವ ಕಸದ ರಾಶಿ: ಸ್ವಚ್ಛತೆ ಇಲ್ಲದೆ ಆಡಳಿತ ಮಂಡಳಿ ನಿರ್ಲಕ್ಷ್ಯ

• ಉದಯವಾಹಿನಿ ಮಾಲೂರು

ಶ್ರಾವಣ ಮಾಸ ಸೋಮವಾರದಿಂದ ಆರಂಭವಾಗಲಿದೆ. ಚಿಕ್ಕತಿರುಪತಿ ವೆಂಕಟರಮಣಸ್ವಾಮಿ ದೇವಾಲಯದ ಆವರಣದಲ್ಲಿ ಸ್ವಚ್ಛತೆ ಇಲ್ಲದೆ ಆಡಳಿತ ಮಂಡಳಿ ನಿರ್ಲಕ್ಷ್ಯ ವಹಿಸಿದೆ ಎನ್ನುವುದು ಭಕ್ತರ ಆರೋಪ. ತಾಲ್ಲೂಕಿನ ಪ್ರಸಿದ್ಧ ಯಾತ್ರ ಸ್ಥಳವಾದ ಚಿಕ್ಕತಿರುಪತಿ ವೆಂಕಟರಮಣಸ್ವಾಮಿ ದೇಗುಲ ಮುಜರಾಯಿ ಇಲಾಖೆಗೆ ಒಳಪಡುತ್ತದೆ. ಶ್ರಾವಣ ಮಾಸದಲ್ಲಿ ದೇವರ ದರ್ಶನಕ್ಕೆ ಬರುವ ಭಕ್ತರಿಗೆ ಮೂಲ ಸೌಕರ್ಯ ಕೊರತೆ ಎದುರಾಗಿದೆ.

ತಮಿಳುನಾಡು ಸೇರಿದಂತೆ ಬೆಂಗಳೂರು ಹಾಗೂ ಚಿಕ್ಕತಿರುಪತಿ ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಭಕ್ತರು ದೇವರ ದರ್ಶನಕ್ಕೆ ಭೇಟಿ ಕೊಡುತ್ತಾರೆ. ದೇವಾಲಯ ಆವರಣ ಬಳಿ ಚರಂಡಿ ಸ್ವಚ್ಛತೆ ಇಲ್ಲದೆ ಗಿಡಗಂಟಿ ಬೆಳದು ಕೊಳಚೆ ನೀರು ಹರಿಯಲು ಅವಕಾಶ ಇಲ್ಲದೆ ನಿಂತಿರುವುದರಿಂದ ಸೊಳ್ಳೆಗಳ ಕಾಟ ಹೆಚ್ಚಾಗಿದೆ. ದೇವಾಲಯ ಆವರಣದಲ್ಲಿ ಸ್ವಚ್ಛತೆ ಇಲ್ಲದೆ ಕಸದ ರಾಶಿ ಭಕ್ತರನ್ನು ಸ್ವಾಗತಿಸುತ್ತದೆ. ವೆಂಕಟೇಶ್ವರನಿಗೆ ಪ್ರಿಯವಾದ ಶ್ರಾವಣ ಮಾಸದಲ್ಲಿ ಭಕ್ತರು ಸಾಗರೋಪಾದಿಯಲ್ಲಿ ದೇವಾಲಯಕ್ಕೆ ಭೇಟಿ ಕೊಡುತ್ತಾರೆ. ದೇವಾಲಯ ಆವರಣದಲ್ಲಿ ಪಂಚಾಯಿತಿಯಿಂದ ನಿರ್ಮಾಣ ಮಾಡಿರುವ ಪುರುಷರ ಶೌಚಾಲಯದಲ್ಲಿ ನೀರಿನ ನಲ್ಲಿಗಳು ಹಾಳಾಗಿವೆ.

ದೇವಾಲಯ ಆಡಳಿತ ಮಂಡಳಿ ಇದರ ಬಗ್ಗೆ ನಿರ್ಲಕ್ಷ್ಯ ವಹಿಸಿದೆ ಎಂದು ಗ್ರಾಮಸ್ಥರು ದೂರುತ್ತಾರೆ. ಹರಿಕೆ ಹೊತ್ತು ಮುಡಿ ಕೊಡುವ ಭಕ್ತರಿಗೆ ಬಿಸಿ ನೀರಿನ ವ್ಯವಸ್ಥೆ ಇಲ್ಲ. ಹಣ ನೀಡಿ ಬಕೆಟ್ ಲೆಕ್ಕದಲ್ಲಿ ಖರೀದಿಸಿ ಮಕ್ಕಳಿಗೆ ಸ್ನಾನ ಮಾಡಿಸುವ ಪರಿಸ್ಥಿತಿ ಇದೆ.

ವೆಂಕಟರಮಣ ದೇವಾಲಯ ಆವರಣದಲ್ಲಿರುವ ಯಾತ್ರಿ ನಿವಾಸ ಕಟ್ಟಡ ಪೂರ್ಣಗೊಳ್ಳದೆ ಅಕ್ರಮ ಚಟುವಟಿಕೆಗಳ ತಾಣವಾಗಿದೆ. 1 ಕೋಟಿ ವೆಚ್ಚದಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ 2019-20ರಲ್ಲಿ ಕಟ್ಟಡ ಕಾಮಗಾರಿ ಆರಂಭವಾಗಿದ್ದು, ಇಲ್ಲಿವರೆಗೂ ಪೂರ್ಣಗೊಂಡಿಲ್ಲ. ದೇವಾಲಯ ಆಡಳಿತ ಮಂಡಳಿ ಕಟ್ಟಡಕ್ಕೂ ಮತ್ತು ಮಂಡಳಿಗೂ ಯಾವುದೇ ಸಂಬಂಧ ಇಲ್ಲದಂತೆ ಕಣ್ಣು ಮುಚ್ಚಿ ಕುಳಿತಿದೆ ಎಂದು ಭಕ್ತರು ಆರೋಪಿಸುತ್ತಾರೆ.


ಉದಯವಾಹಿನಿ ಚಿತ್ರ

> ಬೆಂಗಳೂರಿನಿಂದ ಚಿಕ್ಕತಿರುಪತಿ ವೆಂಕಟರಮಣಸ್ವಾಮಿ ದೇಗುಲ ದರ್ಶನಕ್ಕಾಗಿ ಬಂದಿದ್ದೇನೆ. ದೇವಾಲಯ ಆವರಣದಲ್ಲಿ ಸ್ವಚ್ಛತೆ ಇಲ್ಲ. ಭಕ್ತರಿಗೆ ಯಾವುದೇ ರೀತಿಯ ಮೂಲ ಸೌಕರ್ಯ ಇಲ್ಲ -ಗುರುರಾಜು, ಬೆಂಗಳೂರು ನಿವಾಸಿ

> ಯಾತ್ರಿ ನಿವಾಸ್ ಕಟ್ಟಡ ನಿರ್ಮಾಣದ ಬಗ್ಗೆ ಯಾವುದೇ ಮಾಹಿತಿ ಲಭ್ಯವಿಲ್ಲ. ದೇವಾಲಯದಿಂದ ಯಾತ್ರಿ ನಿವಾಸ್ ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ನೀಡಿಲ್ಲ -ಸ್ವಲ್ಪಮಣಿ, ದೇವಾಲಯ ಕಾರ್ಯನಿರ್ವಹಣಾಧಿಕಾರಿ ಅಧಿಕಾರಿ

> ಭಕ್ತರಿಗೆ ಮೂಲ ಸೌಕರ್ಯ ಇಲ್ಲ. ಶೌಚಾಲಯದಲ್ಲಿ ನೀರು ಬರುತ್ತಿಲ್ಲ. ಪತ್ರಿದಿನ ಭಕ್ತರಿಗೆ ನೀಡುತ್ತಿದ್ದ ಅನ್ನಪ್ರಸಾದ ನಿಲ್ಲಿಸಲಾಗಿದೆ -ಚಂದ್ರಪ್ಪ, ಭಕ್ತ

# 2,995 ಕುಟುಂಬಗಳ ಸ್ಥಳಾಂತರಕ್ಕೆ ಸಿದ್ಧತೆ

• ಉದಯವಾಹಿನಿ ಮಡಿಕೇರಿ

ಕೇರಳ ರಾಜ್ಯದ ವಯನಾಡಿನಲ್ಲಿ ಸಂಭವಿಸಿದ ಜಲಸ್ಫೋಟ-ಗುಡ್ಡ ಕುಸಿತ ಬೆನ್ನಲ್ಲೇ ಎಚ್ಚೆತ್ತುಕೊಂಡಿರುವ ರಾಜ್ಯ ಸರ್ಕಾರ ಕೊಡಗಿನಲ್ಲಿ 104 ಸಂಭವನೀಯ ಭೂಕುಸಿತ-ಪ್ರವಾಹ ಪ್ರದೇಶಗಳನ್ನು ಗುರುತು ಮಾಡಿದ್ದು, 2,995 ಕುಟುಂಬಗಳ ಸ್ಥಳಾಂತರ ಮಾಡಲು ಕ್ರಮ ಕೈಗೊಳ್ಳುತ್ತಿದೆ ಎಂದು ತಿಳಿದು ಬಂದಿದೆ.

ಭಾರತೀಯ ಭೂಗರ್ಭ ಇಲಾಖೆ ಸಲ್ಲಿಸಿದ ವರದಿಯನ್ನು ಆಧರಿಸಿ ಈ ಪ್ರದೇಶಗಳನ್ನು ಗುರುತಿ ಸಲಾಗಿದ್ದು, ಈ ತಿಂಗಳು ಭಾರೀ ಮಳೆಯಾಗುವ ನಿರೀಕ್ಷೆ ಇರುವುದರಿಂದ ಜಿಲ್ಲಾಡಳಿತವು ಸಂಭಾವ್ಯ ಭೂಕುಸಿತದ ಪ್ರದೇಶಗಳಲ್ಲಿ ನೆಲೆಗೊಂಡಿರುವ 2,995 ಕುಟುಂಬಗಳಿಗೆ ಸುರಕ್ಷಿತ ಪ್ರದೇಶಗಳಿಗೆ ತೆರಳಲು ನೋಟಿಸ್ ನೀಡಿದೆ.

ಈ ಹಿಂದಿನ ವಿಪತ್ತು ವರದಿಗಳು ಮತ್ತು ಸಮೀಕ್ಷೆಗಳ ಆಧಾರದ ಮೇಲೆ ಈ ಪ್ರದೇಶಗಳನ್ನು ಗುರುತಿಸಲಾಗಿದೆ.

ಸೂಕ್ಷ್ಮ ಮತ್ತು ಅತಿ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸ್ಥಳಾಂತರಿಸಬೇಕಾದ ಕುಟುಂಬಗಳನ್ನು ಅಂತಿಮಗೊಳಿಸಲಾಗಿದೆ ಎಂದು ಮೂಲಗಳು ತಿಳಿಸಿವೆ. ಜಿಲ್ಲಾಡಳಿತ ಸದ್ಯ 14 ಪರಿಹಾರ ಕೇಂದ್ರಗಳನ್ನು ಸ್ಥಾಪಿಸಿದೆ. ಅಲ್ಲಿ 200ಕ್ಕೂ ಹೆಚ್ಚು ನಿವಾಸಿಗಳು ಆಶ್ರಯ ಪಡೆದಿದ್ದಾರೆ. ಅಲ್ಲದೆ, ವಿಪತ್ತಿನ ಆತಂಕ ಎದುರಿಸುತ್ತಿರುವ ಪ್ರದೇಶಗಳಲ್ಲಿ 95 ಪರಿಹಾರ ಕೇಂದ್ರಗಳನ್ನು ತೆರೆಯಲು ಸ್ಥಳಗಳನ್ನು ಗುರುತಿಸಲಾಗಿದೆ. ಮಳೆಯ ಮುನ್ಸೂಚನೆಯನ್ನು ಆಧರಿಸಿ ಭೂಕುಸಿತ ಸಾಧ್ಯತೆ ಇರುವ ಪ್ರದೇಶಗಳಿಂದ ನಿವಾಸಿಗಳನ್ನು ಸ್ಥಳಾಂತರಿಸಲು ಕ್ರಮಕೈಗೊಳ್ಳಲಾಗುವುದು ಎಂದು ಡಿಸಿ ವೆಂಕಟ್ ರಾಜಾ ತಿಳಿಸಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಈ ವರ್ಷ ಶೇ 24ರಷ್ಟು ಅಧಿಕ ಮಳೆಯಾಗಿದ್ದು, ಈ ತಿಂಗಳು ಹೆಚ್ಚಿನ ಮಳೆಯಾಗುವ ನಿರೀಕ್ಷೆ ಇದೆ.


ಉದಯವಾಹಿನಿ ಚಿತ್ರ

**ಎಚ್ಚೆತ್ತ ಸರ್ಕಾರ**

# ಪಾದಯಾತ್ರೆಯಲ್ಲಿ ಅಪ್ಪ-ಮಕ್ಕಳ ಜುಗಲ್ಬಂದಿ

• ಉದಯವಾಹಿನಿ ರಾಮನಗರ

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ-ಜೆಡಿಎಸ್ ಮೈತ್ರಿಕೂಟ ಬೆಂಗಳೂರಿನಿಂದ ಮೈಸೂರಿನವರೆಗೆ ಹಮ್ಮಿಕೊಂಡಿರುವ ಪಾದಯಾತ್ರೆಯು ಎರಡೂ ಪಕ್ಷಗಳ ಅಪ್ಪ-ಮಕ್ಕಳ ಜುಗಲ್‌ಬಂದಿಗೂ ಕಾರಣವಾಗಿದೆ.

ಇಬ್ಬರು ಮಾಜಿ ಮುಖ್ಯಮಂತ್ರಿಗಳು ಮತ್ತು ಅವರ ಮಕ್ಕಳು ಸರ್ಕಾರದ ವಿರುದ್ಧ ಹೋರಾಟಕ್ಕೆ ಇಳಿಯಲು ಈ ಪಾದಯಾತ್ರೆ ವೇದಿಕೆ ಒದಗಿಸಿದೆ. ಒಂದೆಡೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಅವರ ಪುತ್ರ ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹಾಗೂ ಮತ್ತೊಂದೆಡೆ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮತ್ತು ಅವರ ಪುತ್ರ ನಿಖಿಲ್ ಕುಮಾರಸ್ವಾಮಿ ಜೋಡೆತ್ತುಗಳಂತೆ ಪಾದಯಾತ್ರೆ ಮುನ್ನಡೆಸುತ್ತಿದ್ದಾರೆ. ರಾಜ್ಯದಲ್ಲಿ ಎರಡೆರಡು ಸಲ ಮುಖ್ಯಮಂತ್ರಿ ಹುದ್ದೆಗೇರಿದ ಬಿಎಸ್‌ವೈ ಮತ್ತು ಎಚ್‌ಡಿಕೆ ಇಬ್ಬರೂ ಐದು ವರ್ಷ ಅವಧಿ ಪೂರ್ಣಗೊಳಿಸಲಾಗದೆ ಅನಿವಾರ್ಯ ಕಾರಣಕ್ಕೆ ಕೆಳಗಿಳಿದವರು. ಒಮ್ಮೆ ಇಬ್ಬರೂ ಸೇರಿ ಸರ್ಕಾರ ರಚಿಸಿ ಕಿತ್ತಾಡಿಕೊಂಡು ಬೇರೆಯಾಗಿ, ಬದಲಾದ ರಾಜಕೀಯ ಸನ್ನಿವೇಶದಲ್ಲಿ ತಮ್ಮ ಅಸ್ತಿತ್ವಕ್ಕೆ ಒಂದಾಗಿದ್ದಾರೆ. ಹಳೆಯದೆಲ್ಲವನ್ನು ಮರೆತಂತಿರುವ ಇಬ್ಬರೂ ತಮ್ಮ ರಾಜಕೀಯ ವಾರಸುದಾರರಾಗಿರುವ ಪುತ್ರರನ್ನು ನಾಯಕರನ್ನಾಗಿ ಪ್ರತಿಷ್ಠಾಪಿಸಿ ದಡ ಸೇರಿಸುವುದಕ್ಕೆ ಪಣ ತೊಟ್ಟಿದ್ದಾರೆ. ಮಕ್ಕಳ ನೇತೃತ್ವದಲ್ಲಿ ನಡೆಯುತ್ತಿರುವ ಸರ್ಕಾರದ ವಿರುದ್ಧದ ಪಾದಯಾತ್ರೆಯಲ್ಲಿ ಕಾಣಿಸಿಕೊಳ್ಳುತ್ತಾ, ಅವರ ನಾಯಕತ್ವಕ್ಕಾಗಿ ತಮ್ಮೆಲ್ಲಾ ಶಕ್ತಿಯನ್ನು ಧಾರೆ ಎರೆಯುತ್ತಿದ್ದಾರೆ.

ಪಾದಯಾತ್ರೆ ಮಾರ್ಗದಲ್ಲಿ ಭಾಷಣ ಮಾಡುವಾಗ ಬಿಎಸ್‌ವೈ ಮತ್ತು ಎಚ್‌ಡಿಕೆ ಒಬ್ಬರನ್ನೊಬ್ಬರು ಹೊಗಳಿಕೊಳ್ಳುತ್ತಲೇ, ತಮ್ಮ ಮಕ್ಕಳಿಗೆ ಮತ್ತು ಅವರ ನೇತೃತ್ವದ ಪಾದಯಾತ್ರೆಯನ್ನು ಬಾಯ್ತುಂಬಾ ಹೊಗಳುತ್ತಿದ್ದಾರೆ. ಉಭಯ ನಾಯಕರ ವಾರುಸುದಾರರು ಸಹ ತಮ್ಮ ತಂದೆಯ ಹೋರಾಟ ಮತ್ತು ಸಾಧನೆಗಳನ್ನು ಮೆಲುಕು ಹಾಕುತ್ತಾ ಅದರಡಿ ತಮ್ಮ ನಾಯಕತ್ವ ಪ್ರತಿಷ್ಠಾಪಿಸಿಕೊಳ್ಳಲು ಪ್ರಯತ್ನಿಸುತ್ತಿದ್ದಾರೆ.


ಉದಯವಾಹಿನಿ ಚಿತ್ರ

# ಮುಡಾ ಹಗರಣ ಸಾಬೀತಾದರೆ, ಬೊಮ್ಮಾಯಿ ಜೈಲಿಗೆ ಹೋಗಬೇಕಾಗುತ್ತದೆ

• ಉದಯವಾಹಿನಿ ಮಂಡ್ಯ

ಮೈಸೂರಿನ 'ಮುಡಾ' ಹಗರಣಕ್ಕೂ ಸಿದ್ದರಾಮಯ್ಯನವರಿಗೂ ಸಂಬಂಧವೇ ಇಲ್ಲ. ಹಗರಣ ನಡೆದಿರುವುದು ಸಾಬೀತಾದರೆ ಅಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಮತ್ತು ಅಂದಿನ ಮುಡಾ ಅಧ್ಯಕ್ಷ ಮೊದಲು ಜೈಲಿಗೆ ಹೋಗಬೇಕಾಗುತ್ತದೆ' ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದರು. ಆ.6ರಂದು ನಡೆಯಲಿರುವ ಕಾಂಗ್ರೆಸ್ ಜನಾಂದೋಲನ ಸಮಾವೇಶದ ಸ್ಥಳ ಪರಿಶೀಲನೆಯನ್ನು ಸೋಮವಾರ ನಡೆಸಿದ ಸಂದರ್ಭ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು.

135 ಸ್ಥಾನಗಳನ್ನು ಗೆದ್ದು, ಜನರಿಂದ ಆಯ್ಕೆಯಾಗಿ ಬಂದಿರುವ ಕಾಂಗ್ರೆಸ್ ಸರ್ಕಾರವನ್ನು ತೆಗೀತೀವಿ' ಎಂದು ಬಿಜೆಪಿ-ಜೆಡಿಎಸ್ ನಾಯಕರು ಹೇಳಿಕೆ ಕೊಡುತ್ತಿದ್ದಾರೆ. ಹೀಗ ಹೇಳುವುದೇ ಕ್ರಿಮಿನಲ್ ಅಪರಾಧ. ಈ ಆರೋಪದಡಿ ಇವರನ್ನು ಜೈಲಿಗೆ ಹಾಕಬಹುದು. ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡುತ್ತಿದ್ದಾರೆ ಎಂದು ಕಿಡಿಕಾರಿದರು.

ಡಿ.ಕೆ.ಶಿವಕುಮಾರ್ ಅವರು ರಾಜಕಾರಣಕ್ಕೂ ಬರುವ ಮುಂಚೆಯೇ ಬ್ಯುಸಿನೆಸ್ ಮಾಡುತ್ತಿದ್ದರು. ಅವರು ಗಳಿಸಿರುವ ಆಸ್ತಿಗೆ 'ಲೀಗಲ್ ಡಾಕ್ಯುಮೆಂಟ್' ಇವೆ. ಆದರೆ, ಎಚ್.ಡಿ.ಕುಮಾರಸ್ವಾಮಿ ಯಾವುದೇ ಬ್ಯುಸಿನೆಸ್ ಇಲ್ಲದೇ ಏರ್‌ಪೋರ್ಟ್ ರಸ್ತೆ, ನೆಲಮಂಗಲ ರಸ್ತೆ, ಕೆಂಗೇರಿ ರಸ್ತೆಗಳಲ್ಲಿ ಅಪಾರ ಆಸ್ತಿ ಮಾಡಿದ್ದಾರೆ. ಸಿನಿಮಾ ರಂಗದಿಂದ ಇಷ್ಟೊಂದು ಆಸ್ತಿ ಮಾಡಲು ಸಾಧ್ಯವೇ? ಕುಮಾರಸ್ವಾಮಿ ಸಿನಿಮಾ ರಂಗದಲ್ಲಿ ದುಡ್ಡು ಮಾಡಿದ್ದರೆ ಲೆಕ್ಕ ತೋರಿಸಲಿ ಎಂದು ಸವಾಲು ಹಾಕಿದರು. ಕುಮಾರಸ್ವಾಮಿ ಮಳೆ ಮತ್ತು ನೆರೆಯಿಂದ ಹಾನಿಯಾದ ಪ್ರದೇಶಗಳಿಗೆ ಭೇಟಿ ಕೊಡುವುದು ದೊಡ್ಡಸ್ತಿಕೆ ಅಲ್ಲ. ಕೇಂದ್ರ ಸರ್ಕಾರದಿಂದ ಎನ್‌ಡಿಆರ್‌ಎಫ್ ಅಡಿ ಪರಿಹಾರ ಕೊಡಿಸಬೇಕು. ರಾಜಕೀಯ ಕೆಸರೆರಚಾಟ ನಿಲ್ಲಿಸಿ, ಅಭಿವೃದ್ಧಿ ಬಗ್ಗೆ ಗಮನಹರಿಸಲಿ ಎಂದು ತಿರುಗೇಟು ನೀಡಿದರು.

ಕೆಆರ್‌ಎಸ್ ಅಣೆಕಟ್ಟೆ ಭರ್ತಿಯಾಗಿರುವುದರಿಂದ ಜುಲೈ 10ರಿಂದ ನಾಲೆಗಳಿಗೆ ನಿರಂತರವಾಗಿ ನೀರು ಹರಿಸುತ್ತಿದ್ದೇವೆ. ಭತ್ತದ ನಾಟಿ ಕಾರ್ಯಕ್ಕೆ ತೊಂದರೆಯಾಗದಂತೆ ನೀರು ಬಿಡುತ್ತೇವೆ. ರೈತರು ಆತಂಕ ಪಡುವ ಅಗತ್ಯವಿಲ್ಲ ಎಂದು ಸಚಿವ ಎನ್. ಚಲುವರಾಯಸ್ವಾಮಿ ಹೇಳಿದರು. ಎರಡನೇ ಬೆಳೆಗೂ ನೀರು ಕೊಡಬೇಕು ಅನ್ನೋದು ನಮ್ಮ ನಿರ್ಧಾರ. ಹೀಗಾಗಿ ಕಟ್ಟು ಪದ್ಧತಿಯಲ್ಲಿ ನೀರು ಹರಿಸುವುದರಿಂದ ಕೃಷಿ ಚಟುವಟಿಕೆಗೆ ಯಾವುದೇ ರೀತಿ ತೊಂದರೆಯಾಗುವುದಿಲ್ಲ ಎಂದರು.


ಉದಯವಾಹಿನಿ ಚಿತ್ರ

> ಸಚಿವರಿಗೆ ಕೋಕ್ ಕೊಡುವ ಬಗ್ಗೆ ಮಾಧ್ಯಮದವರು ಕೇಳಿದ ಪ್ರಶ್ನೆಗೆ, 'ಸಚಿವರು ಇನ್ನೂ ಉತ್ತಮವಾಗಿ ಕೆಲಸ ಮಾಡಬೇಕು ಎಂದು ವರಿಷ್ಠರು ಸೂಚಿಸಿದ್ದಾರೆ. ಯಾವುದೇ ಸಚಿವರನ್ನು ಬದಲಾವಣೆ ಮಾಡುವ ಬಗ್ಗೆ ಚರ್ಚೆಯಾಗಿಲ್ಲ. ಸಚಿವ ಸಂಪುಟ ವಿಸ್ತರಣೆ ಬಗ್ಗೆ ವರಿಷ್ಠರು ನಿರ್ಧಾರ ಕೈಗೊಳ್ಳುತ್ತಾರೆ
> -ಎನ್.ಚಲುವರಾಯಸ್ವಾಮಿ, ಸಚಿವ

# ಬಿಜೆಪಿ-ಜೆಡಿಎಸ್ ಪಕ್ಷಗಳ ನಡೆಯ ವಿರುದ್ಧ ಪ್ರತಿಭಟನೆ

## ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧವು ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು ಪಿತೂರಿ ನಡೆಸುತ್ತಿದೆ: ಜಿಲ್ಲಾ ಕಾಂಗ್ರೆಸ್

• ಉದಯವಾಹಿನಿ, ಕೋಲಾರ

ರಾಜ್ಯದಲ್ಲಿನ ಕಾಂಗ್ರೆಸ್ ಸರಕಾರದ ಜನಪ್ರಿಯ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧವು ಕೇಂದ್ರದ ಬಿಜೆಪಿ ನೇತೃತ್ವದ ಸರ್ಕಾರವು ಪಿತೂರಿ ನಡೆಸುತ್ತಿದೆ ಎಂದು ಆರೋಪಿಸಿ ಜಿಲ್ಲಾ ಕಾಂಗ್ರೆಸ್ ಪಕ್ಷ ಮತ್ತು ಹಿಂದುಳಿದ ವರ್ಗದಿಂದ ಸೋಮವಾರ ನಗರದ ಹೊಸ ಬಸ್ ನಿಲ್ದಾಣದಲ್ಲಿ ಪ್ರತಿಭಟನೆ ನಡೆಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎಂ.ಎಲ್ ಅನಿಲ್ ಕುಮಾರ್ ರವರು ಸುದ್ದಿಗಾರರೊಂದಿಗೆ ಮಾತನಾಡಿ ರಾಜ್ಯದಲ್ಲಿ ಸಂವಿಧಾನದ ಬದ್ಧವಾಗಿ 136 ಶಾಸಕರಿಂದ ಅಧಿಕಾರಕ್ಕೆ ಬಂದಿರುವ ಕಾಂಗ್ರೆಸ್ ಸರಕಾರವನ್ನು ಅಸ್ಥಿರಗೊಳಿಸಲು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಮುಂದಾಗಿದ್ದಾರೆ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವ ಅಮಿತ್ ಶಾ, ಅವರ ಅಣತಿಯಂತೆ ಕರ್ನಾಟಕದ ರಾಜ್ಯಪಾಲರು ಕೇಂದ್ರದ ಕೈಗೊಂಬೆಯಂತೆ ವರ್ತಿಸುತ್ತಿದ್ದಾರೆ ಯಾವುದೇ ತನಿಖಾ ತಂಡಕ್ಕೆ ದೂರು ಬಂದಿಲ್ಲ ಆದರೆ ಯಾರೋ ಒಬ್ಬ ಸಾಮಾನ್ಯ ವ್ಯಕ್ತಿ ದೂರು ಕೊಟ್ಟ ಕೆಲವೇ ಗಂಟೆಗಳಲ್ಲಿ ಸಿಎಂಗೆ ನೋಟೀಸ್ ಕೊಡತ್ತಾರೆ ಎಂದರೆ ರಾಜ್ಯಪಾಲರು ಯಾರ ಪರವಾಗಿದ್ದಾರೆ ಎಂಬುದು ಅರ್ಥವಾಗುತ್ತದೆ ಹಿಂದೆ ಯಡಿಯೂರಪ್ಪ ಸರಕಾರದ ವಿರುದ್ಧ ಕಾಂಗ್ರೆಸ್ ಪಕ್ಷವು ಕೊಟ್ಟ ದೂರುಗಳಿಗೆ ಯಾಕೆ ತನಿಖೆ ಮಾಡಲಿಲ್ಲ ಎಂದು ಪ್ರಶ್ನಿಸಿದರು.

ಮುಡಾದಲ್ಲಿ ಯಾವುದೇ ಭ್ರಷ್ಟಾಚಾರವಿಲ್ಲದ ಪ್ರಕರಣವನ್ನು ಬಳಸಿಕೊಂಡು ಸಿದ್ದರಾಮಯ್ಯ ಅವರನ್ನು ಹತ್ತಿಕ್ಕಲು ಮುಂದಾಗಿರುವ ಕೇಂದ್ರ ಸರ್ಕಾರದ ಅಣತಿಯಂತೆ ಹಮ್ಮಿಕೊಂಡಿರುವ ಮೈಸೂರು ಪಾದಯಾತ್ರೆ, ಆಂದೋಲನವು ಅರ್ಥಹೀನವಾಗಿದೆ ಇದೇ ರೀತಿ ಕಾಂಗ್ರೆಸ್ ವಿರುದ್ಧದ ಆರೋಪಗಳು ಮುಂದುವರೆದರೆ ಜಿಲ್ಲೆಯಾದ್ಯಂತ ಉಸ್ತುವಾರಿ ಸಚಿವ ಬೈರತಿ ಸುರೇಶ್, ಸೇರಿದಂತೆ ಶಾಸಕರ ನೇತೃತ್ವದಲ್ಲಿ ಉಗ್ರವಾದ ಹೋರಾಟವನ್ನು ಹಮ್ಮಿಕೊಳ್ಳಲಾಗುತ್ತದೆ ಎಚ್ಚರಿಸಿದರು.

ಕೇಂದ್ರದಲ್ಲಿ ಮೂರು ಬಾರಿ ಅಧಿಕಾರಕ್ಕೆ ಬಂದಿರುವ ಬಿಜೆಪಿ ಪಕ್ಷಕ್ಕೆ ದಕ್ಷಿಣ ಭಾರತದಲ್ಲಿ ಅಧಿಕಾರ ಹಿಡಿಯಲು ಅವಕಾಶವಿರುವ ಕರ್ನಾಟಕದಲ್ಲಿ ಅಧಿಕಾರ ಸಿಗಲಿಲ್ಲ ಹೇಗಾದರೂ ಮಾಡಿ ಅಧಿಕಾರ ಪಡೆಯಬೇಕು ಎಂಬ ಉದ್ದೇಶದಿಂದ ಸುಳ್ಳು ಆರೋಪವನ್ನು ಮುಖ್ಯಮಂತ್ರಿ ಮೇಲೆ ಮಾಡಲಾಗುತ್ತಿದೆ. ಅವರ ಹೆಸರಿಗೆ ಮಸಿ ಬಳಿಯಲು ನಾವು ಬಿಡುವುದಿಲ್ಲ ಎಂದು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳಿಗೆ ಎಚ್ಚರಿಕೆ ನೀಡಿದರು.

ಈ ಪ್ರತಿಭಟನೆಯ ನೇತೃತ್ವವನ್ನು ಜಿಲ್ಲಾ ಕಾಂಗ್ರೆಸ್ ಕಾರ್ಯಾಧ್ಯಕ್ಷ ಊರಬಾಗಿಲು ಶ್ರೀನಿವಾಸ್, ವಕ್ತಾರ ಎಲ್.ಎ ಮಂಜುನಾಥ್, ಬ್ಲಾಕ್ ಅಧ್ಯಕ್ಷರಾದ ಸೀಸಂದ್ರ ಗೋಪಾಲಗೌಡ, ಪ್ರಸಾದ್ ಬಾಬು, ಗ್ಯಾರಂಟಿ ಪ್ರಾಧಿಕಾರದ ಅಧ್ಯಕ್ಷ ವೈ ಶಿವಕುಮಾರ್, ಕೆಯುಡಿಎ ಅಧ್ಯಕ್ಷ ಮಹಮ್ಮದ್ ಹನೀಫ್, ಕೋಚಿಮುಲ್ ನಿರ್ದೇಶಕ ಷಂಷೀರ್, ಪಿಎಲ್ಡಿ ಬ್ಯಾಂಕ್ ಮಾಜಿ ಅಧ್ಯಕ್ಷ ಚಂಜಿಮಲೆ ರಮೇಶ್, ಮುಖಂಡರಾದ ಅಂಜನಿ ಸೋಮಣ್ಣ, ಅಂಬರೀಷ್, ಕೆ.ಜಯದೇವ್, ಒಬಿಸಿ ಮಂಜುನಾಥ್, ಮೈಲಾಂಡಹಳ್ಳಿ ಮುರಳಿ, ಜನಪನಹಳ್ಳಿ ನವೀನ್ ಕುಮಾರ್, ರತ್ನಮ್ಮ, ಮುಂತಾದವರು ಇದ್ದರು.


ಉದಯವಾಹಿನಿ ಚಿತ್ರ

**ಮೈಸೂರು ಪಾದಯಾತ್ರೆ ಆಂದೋಲನವು ಅರ್ಥಹೀನ**

### ವಾಮಮಾರ್ಗದ ಮೂಲಕ ಅಧಿಕಾರ ಪಡೆಯುವ ಯತ್ನ

ರಾಜ್ಯದಲ್ಲಿನ ಮುಡಾ ಮತ್ತು ವಾಲ್ಮೀಕಿ ಪ್ರಕರಣದ ಬಗ್ಗೆ ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ವಿಧಾನಸಭಾ ಅಧಿವೇಶನದಲ್ಲಿ ಚರ್ಚೆಗೆ ಅವಕಾಶವು ಕೊಟ್ಟಿಲ್ಲ ಬಿಜೆಪಿಯಿಂದ ಅಧಿಕಾರ ಕೈತಪ್ಪಿ ಹೋದ ಕಡೆಗಳಲ್ಲಿ ವಾಮಮಾರ್ಗದ ಮೂಲಕ ಅಧಿಕಾರ ಪಡೆಯುವ ಯತ್ನ ನಡೆಸಲು ಹೊರಟಿದ್ದಾರೆ ಬಿಜೆಪಿ ವಿರುದ್ಧ ದನಿ ಎತ್ತಿದರೆ ಅವರ ವಿರುದ್ಧ ಪಿತೂರಿ ನಡೆಸಿ ಪ್ರಕರಣ ದಾಖಲಿಸುವ ಪ್ರವೃತ್ತಿ ಹೊಂದಿರುವ ಕೇಂದ್ರ ಸರ್ಕಾರವು ಕರ್ನಾಟಕದ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಇ.ಡಿ., ಸಿಬಿಐ ಅನ್ನು ದುರ್ಬಳಕೆ ಮಾಡಿಕೊಂಡು ಹತ್ತಿಕ್ಕುವ ಪ್ರಯತ್ನ ನಡಸುತ್ತಿರುವುದು ಖಂಡನೀಯವಾಗಿದೆ ಎಂದರು.

> ಅಹಿಂದ ವರ್ಗದ ನಾಯಕ ಸಿದ್ದರಾಮಯ್ಯ ಅವರನ್ನು ರಾಜಕೀಯವಾಗಿ ಮುಗಿಸಲು ಕೇಂದ್ರ ಸರ್ಕಾರವು ರಾಜ್ಯಪಾಲರನ್ನು ದುರ್ಬಳಕೆ ಮಾಡಿಕೊಳ್ಳಲು ಮುಂದಾಗಿದೆ. ಇದು ಪ್ರಜಾಪ್ರಭುತ್ವ ವ್ಯವಸ್ಥೆಗೆ ಮಾರಕವಾದ ಬೆಳವಣಿಗೆ ಆಗಿದೆ ಕುತಂತ್ರದ ರಾಜಕೀಯ ಮಾಡಲಾಗುತ್ತಿದೆ. ಹಿಂದುಳಿದವರು ಯಾವುದೇ ಕಾರಣಕ್ಕೂ ಅಧಿಕಾರದಲ್ಲಿ ಇರಬಾರದು ಎಂಬುದು ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ರಾಜಕೀಯ ಮಾಡುತ್ತಿದ್ದಾರೆ
> -ಕೆ.ವಿ ಗೌತಮ್

# ಮಿನಿ ನ್ಯೂಸ್

## ಮುಚ್ಚಿದ ಕಟ್ಟೆ ತೆರವಿಗೆ ಸೂಚನೆ

• ಉದಯವಾಹಿನಿ ಬಿಡದಿ

ಪಟ್ಟಣದ ಕೆಂಚನಗುಪ್ಪೆ ಗ್ರಾಮದಲ್ಲಿ ಮುಚ್ಚಿ ಹೋಗಿದ್ದ ಕುಂಬಾರ ಕಟ್ಟೆಯನ್ನು ಕೂಡಲೇ ಯಥಾಸ್ಥಿತಿಗೆ ತಂದು ಉಪಯೋಗಕ್ಕೆ ಮುಕ್ತಗೊಳಿಸಬೇಕೆಂದು ರಾಮನಗರ ತಹಶೀಲ್ದಾರ್ ತೇಜಸ್ವಿನಿ ಸೂಚನೆ ನೀಡಿದ್ದಾರೆ. ವರ್ಷಗಳಿಂದ ಕುಂಬಾರ ಕಟ್ಟೆಯನ್ನು ಜಾನುವಾರಗಳ ಕುಡಿಯುವ ನೀರಿಗಾಗಿ ಬಳಸಲಾಗುತ್ತಿತ್ತು.

ಆದರೆ, ಸ್ಥಳೀಯ ಕೆಲ ಮುಖಂಡರು ಇತ್ತೀಚೆಗೆ ಕೆಂಚನಗುಪ್ಪೆ ಗ್ರಾಮದ ಕುಂಬಾರ ಕಟ್ಟೆಯನ್ನು ಮುಚ್ಚಿ ಹಾಕಿ, ಒಡಾವಣೆ ಮಾಡಿದ್ದರು. ಇದರ ಸುತ್ತಲೂ ಇದ್ದ ಜಮೀನನ್ನು ನಿವೇಶನ ಮಾಡಲು ಸಂಸ್ಥೆಯೊಂದು ಕಾಮಗಾರಿ ಆರಂಭಿಸಿತ್ತು. ಇದರಿಂದಾಗಿ ಜಾನುವಾರುಗಳಿಗೆ ಕುಡಿಯುವ ನೀರಿಲ್ಲದೆ ತೊಂದರೆಯಾಗಿತ್ತು.

ಈ ಎಲ್ಲಾ ವಿಚಾರವನ್ನು ಕೆಂಚನಕುಪ್ಪೆ ಗ್ರಾಮಸ್ಥರು ತಹಶೀಲ್ದಾರ್ ಅವರ ಗಮನಕ್ಕೆ ತಂದಿದ್ದರು. ಕೂಡಲೇ ಸ್ಪಂದಿಸಿದ ತಹಶೀಲ್ದಾರ್ ತೇಜಸ್ವಿನಿ ಬುಧವಾರ ಕೆಂಚನಕುಪ್ಪೆ ಗ್ರಾಮಕ್ಕೆ ಉಪ ತಹಶೀಲ್ದಾರ ಮಲ್ಲೇಶ ಮತ್ತು ಸರ್ವೆ ಅಧಿಕಾರಿಗಳನ್ನು ಕಳುಹಿಸಿದರು. ಸ್ಥಳ ಪರಿಶೀಲನೆ ಮಾಡಿದ ಅಧಿಕಾರಿಗಳು, ಮುಚ್ಚಿ ಹೋಗಿದ್ದ ಕುಂಬಾರ ಕಟ್ಟೆಯನ್ನು ಸರಿಪಡಿಸಿ, ಯಥಾಸ್ಥಿತಿ ಕಾಪಾಡುವಂತೆ ಸ್ಥಳೀಯ ಮುಖಂಡರಿಗೆ ಮತ್ತು ಸಂಸ್ಥೆಯವರಿಗೆ ತಿಳಿಹೇಳಿದರು. ಈ ಸಂದರ್ಭದಲ್ಲಿ ಕೆಂಚನಕುಪ್ಪೆ ಗ್ರಾಮಸ್ಥರು ಸ್ಥಳೀಯ ಮುಖಂಡರು ಹಾಗೂ ಉಪ ತಹಶೀಲ್ದಾರ ಮತ್ತು ಸರ್ವೆ ಅಧಿಕಾರಿಗಳು ಇದ್ದರು.

## ನ್ಯೂಸ್ ಫಸ್ಟ್ ಸಿಬ್ಬಂದಿ ಮೇಲೆ ಹಲ್ಲೆ

• ಉದಯವಾಹಿನಿ ರಾಮನಗರ

ಮೈಸೂರಿಗೆ ಬಿಜೆಪಿ-ಜೆಡಿಎಸ್ ನಡೆಸುತ್ತಿದ್ದ ಪಾದಯಾತ್ರೆ ವೇಳೆ ಬಿಜೆಪಿ ಕಾರ್ಯಕರ್ತರು ನ್ಯೂಸ್ ಫಸ್ಟ್ ಸಿಬ್ಬಂದಿ ಮೇಲೆ ಹಲ್ಲೆ ನಡೆಸಿದ್ದಾರೆ. ಶಾಸಕ ಹರೀಶ್ ಪೂಂಜಾ ಬೆಂಬಲಿಗರಿಂದ ಹಲ್ಲೆ ನಡೆದಿದೆ. ವರದಿಗಾರರಾದ ಜಿ.ಮಂಜುನಾಥ, ಮೋಹನ್, ಕ್ಯಾಮೆರಾ ಮೆನ್ ಅವಿರಾಜ್, ಚಾಲಕ ಆನಂದ್ ಮೇಲೆ ಹಲ್ಲೆಯಾಗಿದೆ. ವರದಿ ಮಾಡಲು ತೆರಳುತ್ತಿದ್ದ ವೇಳೆ ಕಾರು ಅಡ್ಡಗಟ್ಟಿ ಕತ್ತು ಹಿಸುಕಿ ಕಾಲಿಂದ ಒದ್ದು ಬಿಜೆಪಿ ಕಾರ್ಯಕರ್ತರು ಹಲ್ಲೆ ಮಾಡಿದ್ದಾರೆ. ಈ ವೇಳೆ ಶಾಸಕ ಹರೀಶ್ ಪೂಂಜಾ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ತಿಳಿದುಬಂದಿದೆ.

## ವಿಭಿನ್ನ ಕಣ್ಣುಗಳ ಚಿರತೆ ಪ್ರತ್ಯಕ್ಷ

• ಉದಯವಾಹಿನಿ ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ಬಂಡೀಪುರ ಹುಲಿ ಸಂರಕ್ಷಿತ ಅಭಯಾರಣ್ಯದಲ್ಲಿ ಚಿರತೆಯ ಎರಡು ಕಣ್ಣುಗಳು ವಿಭಿನ್ನ ಬಣ್ಣ ಹೊಂದಿರುವುದನ್ನು ವನ್ಯಜೀವಿ ಛಾಯಾಗ್ರಾಹಕ ಧ್ರುವ್ ಪಾಟೀಲ್ ಕ್ಯಾಮೆರಾದಲ್ಲಿ ಸೆರೆ ಹಿಡಿದಿದ್ದಾರೆ.

ಧ್ರುವ್ ಪಾಟೀಲ್ ಸಫಾರಿಗೆ ತೆರಳಿದ್ದ ವೇಳೆ ಹೆಣ್ಣು ಚಿರತೆಯೊಂದು ಮರದ ಮೇಲೆ ವಿರಮಿಸುವ ಚಿತ್ರ ಸೆರೆ ಹಿಡಿದಿದ್ದರು. ಅದರ ಎರಡು ಕಣ್ಣುಗಳು ಕೂಡ ಬೇರೆ ಬಣ್ಣದ್ದಾಗಿದೆ. ಚಿರತೆಯ ಎಡಗಣ್ಣು ಕಂದು ಬಣ್ಣ ಹಾಗೂ ಬಲಗಣ್ಣು ನೀಲಿ ಹಸಿರಿನಿಂದ ಕೂಡಿದೆ. ಕಣ್ಣುಗಳ ಬಣ್ಣಕ್ಕೆ ಹೆಟ್ರೋಕ್ರೋಮಿಯಾ ಎಂಬುದು ಕಾರಣವಾಗಿದ್ದು, ಭಾರತದಲ್ಲಿ ಈ ರೀತಿಯ ವಿಭಿನ್ನ ಕಣ್ಣುಗಳು ಹೊಂದಿರುವ ಚಿರತೆ ದಾಖಲಾಗಿಲ್ಲ ಎಂದು ತಿಳಿದುಬಂದಿದೆ. ಒಟ್ಟಿನಲ್ಲಿ ಬಂಡೀಪುರದಲ್ಲಿ ಅಪರೂಪದ, ವಿಶೇಷವಾದ, ವಿಭಿನ್ನವಾದ ಚಿರತೆ ಕ್ಯಾಮೆರಾ ಕಣ್ಣಿಗೆ ಸೆರೆಯಾಗಿದೆ. ಚಿತ್ರ ನೋಡಿ ವನ್ಯಜೀವಿ ಪ್ರೇಮಿಗಳು ಅಶ್ಚರ್ಯ ವ್ಯಕ್ತಪಡಿಸಿದ್ದಾರೆ.

## ಕುಡಿದ ಮತ್ತಿನಲ್ಲಿ ಪೊಲೀಸರ ಮೇಲೆ ಹಲ್ಲೆ: ಬಿಎಂಟಿಸಿ ಚಾಲಕ ಬಂಧನ

• ಉದಯವಾಹಿನಿ ಯಳಂದೂರು

ತಾಲ್ಲೂಕಿನ ಕಂದಹಳ್ಳಿ ಮಾದಪ್ಪನ ಜಾತ್ರೆಯ ನಿಮಿತ್ತ ಬಸ್ ನಿಲ್ದಾಣದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಪೊಲೀಸರ ಮೇಲೆ ಮದ್ಯಪಾನ ಮಾಡಿದ್ದ ವ್ಯಕ್ತಿಯೊಬ್ಬರು ಹಲ್ಲೆ ಮಾಡಿದ್ದಾರೆ.

ಜನ್ನೂರು ಹೊಸೂರು ಗ್ರಾಮದ ಬಿಎಂಟಿಸಿ ಚಾಲಕ ಮಹೇಶ್ ಕುಮಾರ್ ಹಲ್ಲೆ ಮಾಡಿ ಬಂಧಿತ ವ್ಯಕ್ತಿ.

ಕುಡಿದು ಸಾರ್ವಜನಿಕರೊಂದಿಗೆ ರಂಪಾಟ ಮಾಡುತ್ತಿದ್ದ ಮಹೇಶ್‌ಗೆ ಪೊಲೀಸರು ಬುದ್ಧಿವಾದ ಹೇಳಿ ಮನೆಗೆ ಹೋಗುವಂತೆ ತಿಳಿಸಿದ್ದರು. ಇದರಿಂದ ಕೆರಳಿದ ಮಹೇಶ್ ಪೊಲೀಸರ ಕೊರಳುಪಟ್ಟಿ ಹಿಡಿದು ಚಪ್ಪಲಿಯಿಂದ ಹಲ್ಲೆಗೆ ಮುಂದಾದರು.

ಆಗ ಸಾರ್ವಜನಿಕರು ಮತ್ತು ಪೊಲೀಸರ ರಕ್ಷಣೆಗೆ ಬಂದ ಕಾನ್‌ಸ್ಟೇಬಲ್ ಒಬ್ಬರು ಗಾಯಗೊಂಡರು. ಅವರನ್ನು ಚಿಕಿತ್ಸೆಗಾಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಮಹೇಶ್‌ನನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ. ಈ ಬಗ್ಗೆ ಪಟ್ಟಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮದುವೆಗೆ ಒಪ್ಪದ ತಾಯಿಗೆ ಮಗಳ ಅಶ್ಲೀಲ ಫೋಟೊ ಕಳಿಸಿದ ಪ್ರಿಯತಮ

• ಉದಯವಾಹಿನಿ ಮೈಸೂರು

ಯುವಕನ ದುರ್ವತನೆಗೆ ಬೇಸತ್ತು ಮದುವೆ ನಿರಾಕರಿಸಿದ ಹಿನ್ನೆಲೆಯಲ್ಲಿ ಪ್ರಿಯಕರ ತನ್ನ ಪ್ರಿಯತಮೆಯ ಅಶ್ಲೀಲ ಫೋಟೊಗಳನ್ನು ಯುವತಿಯ ತಾಯಿಗೆ ರವಾನಿಸಿ ಸೇಡು ತೀರಿಸಿಕೊಂಡ ಘಟನೆ ನಗರದ ಎನ್.ಆರ್.ಮೊಹಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯ ನಾಯ್ಡು ನಗರದಲ್ಲಿ ನಡೆದಿದೆ.

ಕಲ್ಯಾಣಗಿರಿ ನಿವಾಸಿ ಮಹಮದ್ ವಾಸಿಂ ಹಾಗೂ ನೊಂದ ಯುವತಿ ಒಂದೇ ಮಾಲ್‌ನಲ್ಲಿ ಕೆಲಸ ಮಾಡುತ್ತಿದ್ದು, ಇವರ ನಡುವೆ ಸ್ನೇಹ ಬೆಳೆದಿತ್ತು. ಯುವತಿಯನ್ನು ಮದುವೆಯಾಗುವುದಾಗಿ ಪ್ರಸ್ತಾಪ ಮಾಡಿ, ಈ ಬಗ್ಗೆ ಯುವತಿಯ ತಾಯಿಯೊಂದಿಗೆ ಚರ್ಚಿಸಿದ್ದ. ಆದರೆ ಪ್ರಾರಂಭದಲ್ಲಿ ಮದುವೆಗೆ ಯುವತಿಯ ಮನೆಯವರು ನಿರಾಕರಿಸಿದ್ದರು.

ತದನಂತರ ಯುವಕನ ಮನೆಯವರ ಒತ್ತಡಕ್ಕೆ ಮಣಿದು ಮದುವೆಗೆ ಒಪ್ಪಿ ನಿಶ್ಚಿತಾರ್ಥ ಕೂಡ ಮಾಡಿದ್ದರು. ಕೆಲದಿನಗಳ ನಂತರ ಇಬ್ಬರೂ ಸುತ್ತಾಡಿದ್ದಾರೆ. ಈ ವೇಳೆ ಯುವತಿಯ ಅಶ್ಲೀಲ ಫೋಟೊ ಪಡೆದು ವಿಚಿತ್ರವಾಗಿ ವರ್ತಿಸುತ್ತಿದ್ದ. ಇದರಿಂದ ಬೇಸರಗೊಂಡು ಯುವತಿಯ ತಾಯಿ ಮದುವೆಗೆ ನಿರಾಕರಿಸಿದ್ದಾರೆ.

ಆದರೆ ಪಟ್ಟು ಬಿಡದ ಮಹಮದ್ ವಾಸಿಂ ಮದುವೆ ಮಾಡಿಕೊಡಿ, ಇಲ್ಲವಾದರೆ ನಿಮ ಮಗಳ ಅಶ್ಲೀಲ ಫೋಟೊಗಳನ್ನು ಸಾಮಾಜಿಕ ಜಾಲತಾಣದಲ್ಲಿ ಹರಿಬಿಡುವುದಾಗಿ ಬೆದರಿಕೆ ಹಾಕಿದ್ದಾನೆ.

ಬೆದರಿಕೆಗೆ ಮಣಿಯದಿದ್ದಾಗ ಯುವತಿಯ ತಾಯಿಗೆ ಅಶ್ಲೀಲ ಫೋಟೊ ಕಳುಹಿಸಿ ಸೇಡು ತೀರಿಸಿಕೊಂಡಿದ್ದಾನೆ. ಈ ಸಂಬಂಧ ಆರೋಪಿಯ ವಿರುದ್ಧ ಕ್ರಮ ಕೈಗೊಳ್ಳುವಂತೆ ನೊಂದ ತಾಯಿ ಎನ್.ಆರ್.ಮೊಹಲ್ಲಾ ಠಾಣೆಗೆ ದೂರು ನೀಡಿದ್ದಾರೆ.

ಅಂತರಾಳದಿಂದ... EDITORIAL

# ಉಳ್ಳವರ ತಟ್ಟೆಯ ತುಪ್ಪವೂ, ಶೋಷಿತರ ತಟ್ಟೆಯ ಕೆನೆಯೂ...

ಒಳಮೀಸಲಾತಿಗೆ ಸಂಬಂಧಿಸಿದಂತೆ ಸುಪ್ರೀಂಕೋರ್ಟ್‌ನಿಂದ ಐತಿಹಾಸಿಕ ತೀರ್ಪು ಹೊರ ಬಿದ್ದಿದೆ. ಪರಿಶಿಷ್ಟ ಸಮುದಾಯದ ಬಹುದಿನಗಳ ಬೇಡಿಕೆಯಾಗಿರುವ ಒಳ ಮೀಸಲಾತಿಗೆ ಸಂಬಂಧಿಸಿ ಉಪ ವರ್ಗೀಕರಣ ಮಾಡಲು ರಾಜ್ಯಗಳಿಗೆ ಅನುಮತಿ ನೀಡಬಹುದಾಗಿದೆ ಎಂದು ಮುಖ್ಯ ನ್ಯಾಯಾಧೀಶ ಡಿ. ವೈ. ಚಂದ್ರಚೂಡ್ ನೇತೃತ್ವದ ಏಳು ಸದಸ್ಯರ ಸಂವಿಧಾನ ಪೀಠವು ಬಹುಮತದ ತೀರ್ಪಿನಲ್ಲಿ ತಿಳಿಸಿದೆ. ಸುದೀರ್ಘ ಮೂರು ದಶಕಗಳ ಹೋರಾಟಕ್ಕೆ ಈ ಮೂಲಕ ಜಯ ಸಿಕ್ಕಂತಾಗಿದೆ. ತಮಿಳುನಾಡು, ಆಂಧ್ರ, ಕರ್ನಾಟಕ ಈ ಹೋರಾಟದ ಮುಂಚೂಣಿಯಲ್ಲಿದ್ದ ರಾಜ್ಯಗಳಾಗಿದ್ದವು. ಪರಿಶಿಷ್ಟ ಸಮುದಾಯದಲ್ಲಿರುವ ತೀರಾ ಬಲಾಢ್ಯ ಜಾತಿಗಳೇ ಮೀಸಲಾತಿಯ ಎಲ್ಲಾ ಸೌಲಭ್ಯಗಳನ್ನು ಕಬಳಿಸುತ್ತಿರುವ ಹೊತ್ತಿಗೆ, ಮುಂದಿನ ದಿನಗಳಲ್ಲಿ ಪರಿಶಿಷ್ಟ ಸಮುದಾಯದಲ್ಲಿ ಉಪವರ್ಗೀಕರಣಗಳನ್ನು ಮಾಡಿ ಮೀಸಲಾತಿಯನ್ನು ಇನ್ನಷ್ಟು ತಳಸ್ತರಕ್ಕೆ ತಲುಪುವಂತೆ ಪರಿಣಾಕಾರಿಯಾಗಿ ಹಂಚುವ ಹೊಣೆಗಾರಿಕೆ ರಾಜ್ಯ ಸರಕಾರಗಳದ್ದು. ಈಗಾಗಲೇ ಈ ತೀರ್ಪನ್ನು ರಾಜ್ಯದ ಸಿದ್ದರಾಮಯ್ಯ ಸ್ವಾಗತಿಸಿದ್ದಾರೆ. ಮುಂದಿನ ದಿನಗಳಲ್ಲಿ ಒಳಮೀಸಲಾತಿಯ ವಿಷಯ ಬಂದಾಗ ಚೆಂಡನ್ನು ಕೇಂದ್ರಸರಕಾರಕ್ಕೆ ಅಥವಾ ಸುಪ್ರೀಂಕೋರ್ಟ್ ಕಡೆಗೆ ಒದೆಯುವ ರಾಜ್ಯ ಸರಕಾರಗಳ ವರ್ತನೆಗೆ ಈ ತೀರ್ಪಿನಿಂದ ಕಡಿವಾಣ ಬಿದ್ದಿದೆ. ಜೊತೆಗೆ ಈ ಮೂಲಕ ದೇಶದ ಪರಿಶಿಷ್ಟ ಸಮುದಾಯದ ಆಮೂಲಾಗ್ರ ಅಭಿವೃದ್ಧಿಗೆ ಸಾಧ್ಯತೆಯೊಂದು ತೆರೆದುಕೊಂಡಿದೆ.

**ದಲಿತರೆನ್ನುವ ಕಾರಣಕ್ಕಾಗಿ ಇಂದಿಗೂ ಅವರಿಗೆ ರಾಜ್ಯದ ದೇವಸ್ಥಾನಗಳಲ್ಲಿ ಪ್ರವೇಶವಿಲ್ಲ. ಮೇಲ್‌ಜಾತಿಯ ಜನರ ಭಾವನೆಗಳಿಗೆ ನೋವಾಗುತ್ತದೆಯೆನ್ನುವ ಕಾರಣಕ್ಕಾಗಿ, ದೇವಸ್ಥಾನದ ಹೊರಗೆ ನಿಂತು ಪ್ರಸಾದವನ್ನು ಸ್ವೀಕರಿಸುತ್ತಿದ್ದಾರೆ. 'ತಾನು ದಲಿತನಾಗಿರುವ ಕಾರಣದಿಂದಲೇ ತನಗೆ ಕೇಂದ್ರದಲ್ಲಿ ಸಚಿವ ಸ್ಥಾನವನ್ನು ನಿರಾಕರಿಸಲಾಗಿದೆ' ಎಂದು ಇತ್ತೀಚೆಗಷ್ಟೇ ಮಾಧ್ಯಮಗಳಲ್ಲಿ ಹೇಳಿಕೆ ನೀಡಿದ್ದರು.**

ಪರಿಶಿಷ್ಟ ಸಮುದಾಯದೊಳಗೂ ಇರುವ ಕೀಳು ಮೇಲುಗಳನ್ನು ಸರಿಪಡಿಸುವುದಕ್ಕೆ ದಲಿತ ನಾಯಕರು ಇದನ್ನು ಒಂದು ಅವಕಾಶವಾಗಿ ಬಳಸಿಕೊಳ್ಳಬೇಕಾಗಿದೆ. ದಲಿತ ಸಮುದಾಯದಲ್ಲಿ ತುಸು ಮೇಲ್ಪದರದಲ್ಲಿರುವ ಜಾತಿಗಳು ಸಾಮಾಜಿಕವಾಗಿ ಕೆಳಸ್ತರದಲ್ಲಿರುವ ದಲಿತ ಸಮುದಾಯವನ್ನು ಕೀಳಾಗಿ ನೋಡುವ ಮನಸ್ಥಿತಿ ಇನ್ನೂ ಉಳಿದುಕೊಂಡಿದೆ. ಜಾತಿ ಅಸಮಾನತೆಯ ಸಂತ್ರಸ್ತರೇ ತಮ್ಮ ಸರದಿ ಬಂದಾಗ ತಮಗಿಂತ ಕೆಳಸ್ತರದಲ್ಲಿರುವ ಜನರ ಶೋಷಣೆಗೆ ಇಳಿಯಲು ಹಿಂದೆ ಮುಂದೆ ನೋಡದೇ ಇರುವುದು ದಲಿತರ ಬದುಕನ್ನು ಇನ್ನಷ್ಟು ಶೋಚನೀಯವಾಗಿಸಿದೆ. ಪರಿಶಿಷ್ಟ ಸಮುದಾಯ ತಮಗೆ ಸಿಕ್ಕಿರುವ ಹಕ್ಕುಗಳನ್ನು ಪೂರ್ಣವಾಗಿ ಬಳಸಿಕೊಂಡು ಜಾತೀಯತೆಯ ವಿರುದ್ಧ ನಿಲ್ಲುವ ಶಕ್ತಿ ಪಡೆದುಕೊಳ್ಳಬೇಕಾದರೆ ಮೊದಲು ತಮ್ಮೊಳಗಿರುವ ಸಾಮಾಜಿಕ ಅಸಮಾನತೆಯನ್ನು ಇಲ್ಲವಾಗಿಸಿಕೊಳ್ಳಬೇಕು. ಪರಿಶಿಷ್ಟ ಸಮುದಾಯದಲ್ಲಿ ಉಪವರ್ಗೀಕರಣವಾಗಿ ಮೀಸಲಾತಿಯ ಸಮಪಾಲು ದಲಿತರನ್ನೆಲ್ಲ ಸಮಾನ ಪಂಕ್ತಿಗೆ ತಂದದ್ದೇ ಆದರೆ, ಮುಂದಿನ ದಿನಗಳಲ್ಲಿ ದಲಿತರು ಸಂಘಟಿತವಾಗಿ ರಾಜಕೀಯ ಶಕ್ತಿಯಾಗಿ ಬೆಳೆಯಲು ಸಾಧ್ಯವಾಗುತ್ತದೆ. ಪರಿಶಿಷ್ಟ ಸಮುದಾಯದೊಳಗಿರುವ ಕ್ರೀಮಿಲೇಯರ್‌ನ್ನು ಗುರುತಿಸಬೇಕು ಎಂದು ಸುಪ್ರೀಂಕೋರ್ಟ್ ಹೇಳಿರುವುದು ಭಿನ್ನಾಭಿಪ್ರಾಯಗಳಿಗೆ ಕಾರಣವಾಗಿದೆ. ಪರಿಶಿಷ್ಟ ಜಾತಿ ಮತ್ತು ಪಂಗಡಗಳಲ್ಲಿರುವ ಕೆನೆಪದರವನ್ನು ಗುರುತಿಸಿ ಮೀಸಲಾತಿ ಸೌಲಭ್ಯದಿಂದ ಹೊರಗಿಡಬೇಕು ಎಂದು ಸುಪ್ರೀಂಕೋರ್ಟ್ ತೀರ್ಪು ನೀಡುವ ಸಂದರ್ಭದಲ್ಲಿ ಅಭಿಪ್ರಾಯ ವ್ಯಕ್ತಪಡಿಸಿದೆ. 'ಪರಿಶಿಷ್ಟ ಜಾತಿಗಳು ಪರಿಶಿಷ್ಟ ಪಂಗಡಗಳಲ್ಲಿರುವ ಕೆನೆಪದರವನ್ನು ಗುರುತಿಸಲು ಸರಕಾರವು ನೀತಿಯೊಂದನ್ನು ರೂಪಿಸಬೇಕು ಮತ್ತು ಅವರನ್ನು ಮೀಸಲಾತಿ ವ್ಯಾಪ್ತಿಯಿಂದ ಹೊರಗಿಡಬೇಕು. ಸಂವಿಧಾನದಲ್ಲಿ ಪ್ರಸ್ತಾವಿಸಲಾಗಿರುವ ನೈಜ ಸಮಾನತೆಯನ್ನು ಸಾಧಿಸಲು ಇದು ಏಕೈಕ ವಿಧಾನವಾಗಿದೆ' ಸುಪ್ರೀಂಕೋರ್ಟ್ ಹೇಳಿದೆ. ಹಲವು ಗೊಂದಲಗಳನ್ನು, ಅನುಮಾನಗಳನ್ನು, ಆತಂಕಗಳನ್ನು ದಲಿತ ಸಮುದಾಯದೊಳಗೆ ಹುಟ್ಟಿಸಿ ಹಾಕಿದೆ. ಕ್ರೀಮಿಲೇಯರ್ ಹೆಸರಿನಲ್ಲಿ ಹಂತಹಂತವಾಗಿ ದಲಿತರ ಮೀಸಲಾತಿಯನ್ನು ಕಿತ್ತುಕೊಳ್ಳುವ ದುರುದ್ದೇಶ ಇದರ ಹಿಂದಿದೆ ಎಂದು ಕೆಲವರು ಆರೋಪಿಸಿದ್ದಾರೆ. ಇದರ ಜೊತೆಗೇ, ಕೇಂದ್ರ ಸರಕಾರದ ಭಾಗವಾಗಿರುವ ಕೆಲವು ದಲಿತ ನಾಯಕರೇ ಒಳಮೀಸಲಾತಿ ತೀರ್ಪಿನ ವಿರುದ್ಧ ಕತ್ತಿ ಮಸೆಯುತ್ತಿದ್ದಾರೆ. ಕಳೆದ ವರ್ಷ ನವೆಂಬರ್ ತಿಂಗಳಲ್ಲಿ ಹೈದರಾಬಾದ್‌ನಲ್ಲಿ ಪರಿಶಿಷ್ಟ ಸಮುದಾಯದ ತಳಸ್ತರದ ಜನರು ಒಳಮೀಸಲಾತಿಗಾಗಿ ಬೃಹತ್ ಸಮಾವೇಶ ನಡೆಸಿದ್ದರು. ಪ್ರಧಾನಿ ಮೋದಿಯವರು ಭಾಗವಹಿಸಿರುವುದೂ ವಿಶೇಷವಾಗಿತ್ತು. ಸಮಾವೇಶದಲ್ಲಿ ಮಾದಿಗ ದಂಡೋರಾದ ಅಧ್ಯಕ್ಷ ಕೃಷ್ಣ ಮಾದಿಗ ಅವರು ಭಾವುಕರಾಗಿ ಕಣ್ಣೀರು ಹಾಕಿದಾಗ ಅವರನ್ನು ಪ್ರಧಾನಿ ಮೋದಿ ತಬ್ಬಿಕೊಂಡು ಸಂತೈಸಿದ್ದರು. ಬರೇ ಒಂದು ಪ್ರಹಸನವಾಗಿತ್ತು. ಯಾಕೆಂದರೆ 10 ವರ್ಷಗಳಿಂದ ಕೇಂದ್ರದಲ್ಲಿ ಅಧಿಕಾರ ಹಿಡಿದಿರುವ ಮೋದಿ ನೇತೃತ್ವದ ಸರಕಾರಕ್ಕೆ ಮನಸ್ಸು ಮಾಡಿದ್ದರೆ ಒಳಮೀಸಲಾತಿ ಅನುಷ್ಠಾನಕ್ಕೆ ಬೇಕಾದ ಕ್ರಮವನ್ನು ಎಂದೋ ತೆಗೆದುಕೊಳ್ಳಬಹುದಿತ್ತು. ಸುಪ್ರೀಂಕೋರ್ಟ್ ತೀರ್ಪಿನ ಬಳಿಕವೂ ಎನ್‌ಡಿಎ ಸರಕಾರ ಒಳಮೀಸಲಾತಿ ಅನುಷ್ಠಾನದ ಬಗ್ಗೆ ವಿಶೇಷ ಆಸಕ್ತಿಯನ್ನು ಪ್ರದರ್ಶಿಸುತ್ತಿಲ್ಲ. ರಾಮದಾಸ್ ಆಠವಳೆ, ಚಿರಾಗ್ ಪಾಸ್ವಾನ್‌ರಂತಹ ಪ್ರಮುಖ ದಲಿತ ನಾಯಕರು ಸುಪ್ರೀಂಕೋರ್ಟ್ ತೀರ್ಪಿನ ವಿರುದ್ಧ ಈಗಾಗಲೇ ಅಸಮಾಧಾನವನ್ನು ಹೊರಹಾಕಿದ್ದಾರೆ. ಕೇಂದ್ರ ಸಚಿವ ಚಿರಾಗ್ ಪಾಸ್ವಾನ್ 1ಹೆಜ್ಜೆ ಮುಂದೆ ಹೋಗಿ, ಒಳ ಮೀಸಲಾತಿಯ ತೀರ್ಪಿನ ವಿರುದ್ಧವೇ ಮನವಿ ಸಲ್ಲಿಸುವುದಾಗಿ ಹೇಳಿದ್ದಾರೆ. ಪರಿಶಿಷ್ಟರ ಮೀಸಲಾತಿಯಲ್ಲಿ, ಈಗಾಗಲೇ ಬಲಾಢ್ಯವಾಗಿರುವ ಸಮುದಾಯಗಳು ರಾಜಕೀಯವಾಗಿ ಹೆಚ್ಚು ಪ್ರಾತಿನಿಧ್ಯಗಳನ್ನು ಪಡೆದು, ಸ್ಥಾನಮಾನಗಳನ್ನು ಅನುಭವಿಸುತ್ತಿವೆ. ಇವರ ಕಾರಣದಿಂದಾಗಿಯೇ ಒಳಮೀಸಲಾತಿ ಇನ್ನೂ ಜಾರಿಗೊಳ್ಳದೆ ಉಳಿದಿದೆ. ಇದೀಗ ಇವರಿಗೆ ಈ ತೀರ್ಪಿನಿಂದ ಅಸಮಾಧಾನವಾಗಿದ್ದರೆ ಅದರಲ್ಲಿ ಅಚ್ಚರಿಯೇನೂ ಇಲ್ಲ. ಕೆನೆಪದರದ ಕುರಿತಂತೆ ದಲಿತ ನಾಯಕರು ಹೊಂದಿರುವ ಆತಂಕ ಸಹಜವಾದದ್ದೇ ಆಗಿದೆ. ಕೆಲವೊಮ್ಮೆ ದಲಿತರು ಮೀಸಲಾತಿಯ ಅನುಕೂಲಗಳನ್ನು ಪಡೆದು ಶ್ರೀಮಂತರಾಗಬಹುದು, ರಾಜಕೀಯವಾಗಿ ಪ್ರಬಲ ನಾಯಕರಾಗಿಯೂ ರೂಪುಗೊಳ್ಳಬಹುದು. ಆದರೆ 'ಅಸ್ಪೃಶ್ಯ'ತೆಯ ಕಳಂಕದಿಂದ ಅವರು ಪಾರಾಗುವುದಿಲ್ಲ. ಇದಕ್ಕೆ ಅತ್ಯುತ್ತಮ ಉದಾಹರಣೆಯೆಂದರೆ, ಬಿಜೆಪಿ ಸಂಸದರು, ಮಾಜಿ ಸಚಿವರಾಗಿರುವ ರಮೇಶ್ ಜಿಗಜಿಣಗಿ.



## ಮಹಾಭಾರತ
### ಶಾಂತಿಪರ್ವ

• ಹಿಂದಿನ ಸಂಚಿಕೆಯಿಂದ

ರೂಪವಂತರೂ, ಉತ್ಕೃಷ್ಟ ನಡತೆಯುಳ್ಳವರೂ ಆಗಿದ್ದು ರಾಜಭಕ್ತರಾಗಿರಬೇಕು. ''ರಾಜನ ಮಂತ್ರಿಮಂಡಲದಲ್ಲಿ ಉತ್ತಮ ಚಾರಿತ್ರದ, ಸ್ನಾತಕರಾಗಿ ವಿಶೇಷ ಸನ್ಮಾನಿತರಾದ, ವೇದವಿದರಾದ ನಾಲ್ಕು ಜನ ಬ್ರಾಹ್ಮಣರು; ಆಯುಧಗಳನ್ನು ಚೆನ್ನಾಗಿ ಬಲ್ಲ, ಉತ್ತಮ ಅಂಗ ಸೌಷ್ಠವವುಳ್ಳ ಎಂಟು ಜನ ಕ್ಷತ್ರಿಯರು; ಶ್ರೀಮಂತರಾದ ಇಪ್ಪತ್ತೊಂದು ವೈಶ್ಯರು; ವಿನಯಶೀಲರೂ ಶುದ್ಧನಡತೆಯುಳ್ಳವರೂ ಆದ ಮೂರು ಜನ ಶೂದ್ರರು; ಮತ್ತು ಒಬ್ಬ ಸೂತ–ಹೀಗೆ ಮೂವತ್ತೇಳು ಜನರಿರಬೇಕು. ಎಲ್ಲರೂ ಐವತ್ತಕ್ಕೆ ಮೇಲ್ಪಟ್ಟ ವಯಸ್ಸಿನವರಾಗಿರಬೇಕು.

ವಿಧಿಸುವ ಶಿಕ್ಷೆಯು ಅಪರಾಧದ ತೀವ್ರತೆಗೆ ಅನುಗುಣವಾಗಿರಬೇಕು. ಶ್ರೀಮಂತ ಅಪರಾಧಿಗೆ ದಂಡ ವಿಧಿಸಬೇಕು ಅಥವಾ ಅವನ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಳ್ಳಬೇಕು; ಬಡವನಾಗಿದ್ದರೆ, ಸ್ವಾತಂತ್ರ ಹರಣವೇ ಅವನ ಶಿಕ್ಷೆಯಾಗಬೇಕು. ಕೆಟ್ಟ ನಡತೆಗೆ, ಪ್ರಾಣಕ್ಕೆ ಸಂಚಕಾರ ಬಾರದಂತೆ, ದೈಹಿಕವಾಗಿ ಶಿಕ್ಷೆ ವಿಧಿಸಬೇಕು. ರಾಜನು ವಿಧಿಸುವ ತೆರಿಗೆಯು ಪ್ರಜೆಗಳಿಗೆ ಭಾರವಾಗದಂತೆ ನೋಡಿಕೊಳ್ಳಬೇಕು. ಪ್ರಜೆಗಳೆಂಬ ಹಸುವಿನ ಹಾಲನ್ನು ಕರೆದುಕೊಳ್ಳುವ ಕಲೆ ರಾಜನಿಗೆ ತಿಳಿದಿರಬೇಕು. ಜೇನು ಹೂಗಳಿಂದ ಮಕರಂದವನ್ನು ಹೀರುವಂತೆ, ಜಿಗಣೆಯು ಅರಿವಿಗೇ ಬಾರದ ಹಾಗೆ ರಕ್ತವನ್ನು ಹೀರುವಂತೆ. ರಾಜನು ತೆರಿಗೆಯನ್ನು ಸಂಗ್ರಹಿಸಬೇಕು. ಹುಲಿಯು ತನ್ನ ಮರಿಗಳನ್ನು ಹೇಗೋ ಹಾಗೆ ರಾಜನು ಪ್ರಜೆಗಳನ್ನು ನೋಡಿಕೊಳ್ಳುಬೇಕು: ಮರಿಗಳನ್ನು ಹುಲಿ ಕಚ್ಚಿ ಹಿಡಿದರೂ ಅವುಗಳಿಗೆ ನೋವಾಗದಂತೆ ಹಿಡಿಯುವುದು.''

ಯುಧಿಷ್ಠಿರ: ರಾಜನಾದವನು ಹೇಗೆ ನಡೆದುಕೊಳ್ಳಬೇಕು''

ಭೀಷ್ಮ:ಋಜುತ್ವವೇ ರಾಜನನ್ನು ಯಾವಾಗಲೂ ರಕ್ಷಿಸುವುದು. ಅದಕ್ಕಿಂತ ದೊಡ್ಡದು ಈ ಲೋಕದಲ್ಲಿ ಬೇರಾವುದೂ ಇಲ್ಲ. ಧರ್ಮಿಷ್ಠನಾದ ರಾಜನು ಲೋಕವನ್ನೇ ಜಯಿಸುವನು. ಅವನ ಸಲಹೆಗಾರರೆಲ್ಲ ಶುದ್ಧಾಂತಃಕರಣವುಳ್ಳವರಾಗಿರಬೇಕು. ಹಗೆಸಾಧನೆಗೆ ರಾಜನ

ದಯದಲ್ಲಿ ಸ್ಥಳವಿರಬಾರದು. ರಾಜನು ಜಿತೇಂದ್ರಿಯನಾಗಿರಬೇಕು. ಸ್ವಬುದ್ಧಿಯನ್ನುಪಯೋಗಿಸುವ ರಾಜನು ಸಾವಿರಾರು ನದಿಗಳು ಬಂದು ಸೇರುವಮಹಾಸಮುದ್ರದಂತೆ ಮಹಾನ್ ಆಗುವನು. ಯುಧಿಷ್ಠಿರ:ಕರ್ತವ್ಯಪಥವು ಬಹಳ ಉದ್ದವಾದುದು; ಅದಕ್ಕೆ ನೂರಾರು ಶಾಖೆಗಳಿರುವುದು. ರಾಜನಾದವನು ಅನುಸರಿಸಬೇಕಾದ ಕರ್ತವ್ಯಗಳನ್ನು ಕುರಿತು ಹೇಳು ಭೀಷ್ಮ:''ತಾಯಿತಂದೆಗಳನ್ನೂ ಗುರುವನ್ನೂ ಪೂಜಿಸುವುದು ಮುಖ್ಯವಾದ ಕರ್ತವ್ಯ. ಈ ಕರ್ತವ್ಯಗಳನ್ನು ಮಾಡಿದವನು ಕೀರ್ತಿವಂತನಾಗುವುದಲ್ಲದೆ ಸ್ವರ್ಗವನ್ನೂ ಪಡೆಯುವನು. ಈ ಮೂವರನ್ನು ಪೂಜಿಸುವುದಲ್ಲದೆ, ವಿಧೇಯನಾಗಿ ಅವರ ಆಣತಿಯನ್ನು ಚಾಚೂತಪ್ಪದೆ ನಡೆಸಬೇಕು. ಅವರು ನಿತ್ಯವೂ ಪೂಜಿಸತಕ್ಕ ತ್ರೇತಾಗ್ನಿಗಳಂತೆ. ತಂದೆಯನ್ನು ಸೇವಿಸುವುದರಿಂದ ಈ ಲೋಕವನ್ನು ದಾಟುವನು; ತಾಯಿಯ ಸೇವೆಯಿಂದ ಸ್ವರ್ಗವನ್ನು ಪಡೆಯುವನು; ಗುರುವನ್ನು ಸೇವಿಸುವುದರಿಂದ ಬ್ರಹ್ಮಲೋಕವನ್ನು ಹೊಂದುವನು.

**ಮುಂದುವರಿಯುವುದು...**

# ಖಾಲಿ ನಿವೇಶನಗಳಿಗೆ ನೋಟಿಸ್ ನೀಡಿ ದಂಡ ವಿಧಿಸಿ

■ ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಪಾಲಿಕೆ ಕೇಂದ್ರ ಕಛೇರಿಯಲ್ಲಿ ನಡೆದ ಸಭೆ

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಬಿಬಿಎಂಪಿ ವ್ಯಾಪ್ತಿಯಲ್ಲಿ ಸ್ವಚ್ಛತೆ ಕಾಪಾಡದ ಖಾಲಿ ನಿವೇಶನಗಳನ್ನು ಗುರುತಿಸಿ ಮಾಲೀಕರಿಗೆ ನೋಟೀಸ್ ನೀಡಿ ದಂಡ ವಿಧಿಸಬೇಕೆಂದು ಮುಖ್ಯ ಆಯುಕ್ತರಾದ ಶ್ರೀ ತುಷಾರ್ ಗಿರಿನಾಥ್ ರವರು ರವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಬಿಬಿಎಂಪಿ ವ್ಯಾಪ್ತಿಯಲ್ಲಿ ವಿವಿಧ ವಿಷಯಗಳಿಗೆ ಸಂಬಂಧಿಸಿದಂತೆ ಪಾಲಿಕೆ ಕೇಂದ್ರ ಕಛೇರಿಯಲ್ಲಿ ನಡೆದ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಪಾಲಿಕೆ ವ್ಯಾಪ್ತಿಯ ಆಯಾ ವಲಯ ವ್ಯಾಪ್ತಿಯಲ್ಲಿ ಖಾಲಿ ನಿವೇಶನಗಳನ್ನು ಪಟ್ಟಿ ಮಾಡಬೇಕು. ನಂತರ ಸ್ವಚ್ಛತೆ ಕಾಪಾಡದ ಖಾಲಿ ನಿವೇಶನಗಳ ಮಾಲೀಕರಿಗೆ ನೋಟೀಸ್ ಜಾರಿಗೊಳಿಸಿ ಸ್ವಚ್ಛತೆ ಮಾಡಿ ದಂಡ ವಿಧಿಸುವುದರ ಜೊತೆಗೆ ಮತ್ತೆ ಈ ರೀತಿ ಮರುಕಳಿಸದಂತೆ ಎಚ್ಚರಿಕೆ ನೀಡಬೇಕೆಂದು ಸೂಚಿಸಿದರು. ಖಾಲಿ ನಿವೇಶನ/ಪ್ರದೇಶಗಳು ಆಸ್ತಿ ತೆರಿಗೆ ವ್ಯಾಪ್ತಿಗೆ ಬಂದಿದೆಯೇ ಅಥವಾ ಇಲ್ಲವೇ ಎಂಬುದನ್ನು ಪರಿಶಿಲಿಸಿ, ಆಸ್ತಿ ತೆರಿಗೆ ವ್ಯಾಪ್ತಿಗೆ ಬರದಿದ್ದಲ್ಲಿ ಕೂಡಲೆ ಆಸ್ತಿ ತೆರಿಗೆ ವ್ಯಾಪ್ತಿಗೆ ತರಲು ಸೂಕ್ತ ಕ್ರಮಗಳನ್ನು ಕೈಗೊಳ್ಳಬೇಕಂದು ಸೂಚಿಸಲಾಯಿತು.

**ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸಿ**

**ಪಾಲಿಕೆ ವ್ಯಾಪ್ತಿಯಲ್ಲಿ ಸರಾಸರಿ 160 ರಿಂದ 170 ಪ್ರಕರಣಗಳು ಕಂಡುಬರುತ್ತಿದೆ. ಡೆಂಘೀ ಕುರಿತು ಪರೀಕ್ಷಾ ಪ್ರಮಾಣವನ್ನು ಹೆಚ್ಚಳ ಮಾಡಲಾಗಿದೆ. 600 ಫಾಗಿಂಗ್ ಯಂತ್ರ ಹಾಗೂ 618 ಸ್ಪ್ರೇಯರ್‌ಗಳ ಮೂಲಕ ಸೊಳ್ಳೆ ಉತ್ಪತ್ತಿ ತಾಣಗಳನ್ನು ನಾಶಪಡಿಸಲಾಗುತ್ತಿದೆ ಎಂದು ತಿಳಿಸಿದರು.**

**ಅನಧಿಕೃತ ಜಾಹೀರಾತು ಅಳವಡಿಸುವವರ ಮೇಲೆ** **ಕಾನೂನು ಕ್ರಮ:** ಪಾಲಿಕೆ ವ್ಯಾಪ್ತಿಯಲ್ಲಿ ಅನಧಿಕೃತ ಜಾಹೀರಾತುಗಳಿಗೆ ಕಡಿವಾಣ ಹಾಕುವ ಉದ್ದೇಶದಿಂದ ಆಯಾ ವಲಯ ವ್ಯಾಪ್ತಿಯಲ್ಲಿರುವ ಮುದ್ರಣಾಲಯಗಳಿಗೆ ನೋಟೀಸ್ ನೀಡಿ ಯಾವುದೇ ಅನಧಿಕೃತ ಜಾಹೀರಾತು ಹಾಗೂ ಪರಿಸರ ಸಂರಕ್ಷಣಾ ಕಾಯ್ದೆ ಉಲ್ಲಂಘನೆ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಬೇಕು. ಉಲ್ಲಂಘಣೆ ಮಾಡುವವರ ಮೇಲೆ ಕಾನೂನು ಕ್ರಮ ಜರುಗಿಸಬೇಕು. ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಿಯೂ ಅನಧಿಕೃತ ಜಾಹೀರಾತುಗಳು ಅಳವಡಿಸದಂತೆ ಕಟ್ಟೆಚ್ಚರ ವಹಿಸಬೇಕೆಂದು ಸೂಚಿಸಿದರು.

**ಬೀದಿ ದೀಪಗಳ ನಿರ್ವಹಣೆ ಸರಿಯಾಗಿರಲಿ**

**ನಗರದಲ್ಲಿ ಬೀದಿ ದೀಪಗಳು ಸರಿಯಾಗಿ ನಿರ್ವಹಣೆ ಮಾಡಬೇಕು. ವಿದ್ಯುತ್ ವಿಭಾಗದಲ್ಲಿ ಕಾರ್ಯನಿರ್ವಹಿಸುವವರಿಗೆ ಬೆಳಗ್ಗೆ 10 ರಿಂದ ಮಧ್ಯಾಹ್ನ 2 ಹಾಗೂ ಸಂಜೆ 5 ರಿಂದ ರಾತ್ರಿ 8.30 ಗಂಟೆಯವರೆಗೆ ಕಾರ್ಯನಿರ್ವಹಿಸಬೇಕಿದೆ. ಈ ಸಂಬಂಧ, ನಾಗರೀಕರು 'ಸಹಾಯದಲ್ಲಿ ನೀಡುವ ದೂರುಗಳನ್ನು ಕೂಡಲೆ ಸ್ಪಂದಿಸಿ ಬಗೆಹರಿಸಬೇಕು. ಬೀದಿ ದೀಪಗಳಿಲ್ಲದಿರುವ ಕಡೆ ಕೂಡಲೆ ಬೀದಿ ದೀಪಗಳನ್ನು ಅಳವಡಿಸಬೇಕೆಂದು ಅಧಿಕಾರಿಗಳಿಗೆ ಸೂಚಿಸಿದದರು**

**ಕಟ್ಟುನಿಟ್ಟಿನ ಕಾನೂನು ಕ್ರಮ**

**ವೈಟ್ ಟಾಪಿಂಗ್ ಕಾಮಗಾರಿ ಕೂಡಲೆ ಪ್ರಾರಂಭಿಸಿ:** ನರದಲ್ಲಿ ಹೊಸದಾಗಿ ಕೈಗೆತ್ತಿಕೊಳ್ಳುತ್ತಿರುವ ವೈಟ್ ಟಾಪಿಂಗ್ ಕಾಮಗಾರಿಗಳನ್ನು ತ್ವರಿತವಾಗಿ ಪ್ರಾರಂಭಿಸಬೇಕು. ಸಂಚಾರಿ ಪೊಲೀಸ್ ಅಧಿಕಾರಿಗಳ ಸಹಯೋಗದೊಂದಿಗೆ ಕಾಮಗಾರಿಗಳ್ನು ಪ್ರಾರಂಭಿಸಿ ನಿಗದಿತ ಸಮಯದಲ್ಲಿ ಕಾಮಗಾರಿಯನ್ನು ಪೂರ್ಣ ಗೊಳಿಸಬೇಕೆಂದು ಸೂಚಿಸಿ ದರು.

ಈ ವೇಳೆ ವಿಶೇಷ ಆಯುಕ್ತರುಗಳಾದ ಮುನೀಶ್ ಮೌದ್ಗಿಲ್, ಡಾ. ಕೆ. ಹರೀಶ್ ಕುಮಾರ್, ಸುರಳ್ಕರ್ ವಿಕಾಸ್ ಕಿಶೋರ್, ಶಿವಾನಂದ್ ಕಲ್ಕೆರೆ, ಅವಿನಾಶ್ ಮೆನನ್ ರಾಜೇಂದ್ರನ್, ವಲಯ ಆಯುಕ್ತರುಗಳಾದ ರಮೇಶ್, ಶಿವಾನಂದ್ ಕಪಾಶಿ, ಕರೀಗೌಡ, ರಮ್ಯಾ, ವಿನೋತ್ ಪ್ರಿಯಾ, ಪ್ರೀತಿ ಗೆಹ್ಲೋಟ್, ಪ್ರಧಾನ ಅಭಿಯಂತರರು, ವಲಯ ಮುಖ್ಯ ಅಭಿಯಂತರರು ಸೇರಿದಂತೆ ಇನ್ನಿತರೆ ಸಂಬಂಧಪಟ್ಟ ಅಧಿಕಾರಿಗಳು ಉಪಸ್ಥಿತರಿದ್ದರು.



**ಕಲಾ ಸಾಹಿತ್ಯ**

**ವೈ.ಕೆ. ಸಂಧ್ಯಾ ಶರ್ಮ**
ಲೇಖಕರು
ರಂಗಕರ್ಮಿ ಹಾಗೂ ನೃತ್ಯ ನಾಟಕಗಳ ವಿಮರ್ಶಕರು

# ಭರವಸೆಯ ಕಲಾಪ್ರತಿಭೆ ಕು. ಎಂ. ವರ್ಷಾ ರಂಗಪ್ರವೇಶ

**ಉದಯವಾಹಿನಿ, ವಿಶೇಷ**

ಖ್ಯಾತ ''ಉಷಾಸ್ ಫೌಂಡೇಶನ್ ' ನೃತ್ಯಸಂಸ್ಥೆಯ ಕಲಾತ್ಮಕ ನಿರ್ದೇಶಕಿ, ಗುರು ಕಲೈಮಾಮಣಿ ಡಾ. ಸಂಗೀತಾ ಕಪಿಲನ್ ಅವರ ನುರಿತ ಗರಡಿಯಲ್ಲಿ ರೂಪುಗೊಂಡ ನೃತ್ಯ ಕಲಾಶಿಲ್ಪ ಕು. ಎಂ. ವರ್ಷಾ ಭರವಸೆಯ ಉದಯೋನ್ಮುಖ ನೃತ್ಯ ಕಲಾವಿದೆ, ಕಳೆದ ಹತ್ತುವರ್ಷಗಳಿಂದ ಅತ್ಯಂತ ಪರಿಶ್ರಮ-ನಿಷ್ಠೆಯಿಂದ ಅವರಲ್ಲಿ ನೃತ್ಯಾಭ್ಯಾಸ ಮಾಡುತ್ತಿದ್ದಾಳೆ. ಪರಿಣತ ಅಭಿನಯ- ಹರಿತ ನೃತ್ತ ಪಾಂಡಿತ್ಯದಲ್ಲಿ ಪಂದನಲ್ಲೂರು ಬಾನಿಯಲ್ಲಿ ಹೆಸರು ಮಾಡಿರುವ ಗುರು ಸಂಗೀತಾ ಅವರ ಮಾರ್ಗದರ್ಶನದಲ್ಲಿ, ನೃತ್ಯ ಸಂಯೋಜನೆಯಲ್ಲಿ ವರ್ಷಾ, ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಗಳಿಸಿದ್ದಾಳೆ. ಶ್ರೀ ಮಣಿಕಂಠನ್ ಅಚ್ಯುತನ್ ಮತ್ತು ಮಹೇಶ್ವರಿಯವರ ಪುತ್ರಿಯಾದ ವರ್ಷಾ, ಇದೇ ಆಗಸ್ಟ್ ತಿಂಗಳ 10 ಶನಿವಾರದಂದು ಮಲ್ಲೇಶ್ವರದ 'ಸೇವಾಸದನ'ದಲ್ಲಿ ಬೆಳಗ್ಗೆ 10 ಗಂಟೆಗೆ ತನ್ನ ನೃತ್ಯದ ಕಲಾಸೊಬಗನ್ನು ಪ್ರದರ್ಶಿಸಲು ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಆಕೆಯ ನೃತ್ಯ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಎಲ್ಲಾ ಕಲಾರಸಿಕರಿಗೂ ಆದರದ ಸುಸ್ವಾಗತ.

ಕು. ವರ್ಷಾ ಬಾಲಪ್ರತಿಭೆ. ಐದುವರ್ಷದ ಮಗಳ ಹೆಜ್ಜೆಗಳ ತಾಳ-ಲಯಜ್ಞಾನ ಹಾಗೂ ಅವಳ ನೃತ್ಯ ಪ್ರತಿಭೆಯನ್ನು ಗುರುತಿಸಿದ ಹೆತ್ತವರು, ಅವಳ ಪ್ರತಿಭಾ ಪೋಷಣೆಗೆ ಮುಂದಾದರು. ಶಾಸ್ತ್ರೀಯವಾಗಿ ಭರತನಾಟ್ಯವನ್ನು ಕಲಿಯಲು ಪ್ರಸಿದ್ಧ ಗುರುಗಳಾದ ಡಾ. ಸಂಗೀತಾ ಕಪಿಲನ್ ಅವರಲ್ಲಿ ಸೇರಿಸಿದರು. ಅಲ್ಲಿಂದ ವರ್ಷಳಿಗೆ ಕ್ರಮಬದ್ಧ ಉತ್ತಮ ನೃತ್ಯಶಿಕ್ಷಣ ದೊರೆಯತೊಡಗಿತು. ವರ್ಷಾ, ಅಷ್ಟೇ ಆಸಕ್ತಿಯಿಂದ ನೃತ್ಯಾರ್ಜನೆ ಮಾಡಿಕೊಳ್ಳತೊಡಗಿದಳು. ಕಳೆದ ಹತ್ತುವರ್ಷಗಳಿಂದ ಏಕಗುರು ನಿಷ್ಠೆಯಲ್ಲಿ ಸಂಗೀತಾ ಅವರ ಬಳಿಯೇ ಪಂದನಲ್ಲೂರು ಶೈಲಿಯ ಭರತನಾಟ್ಯವನ್ನು ಅತ್ಯಂತ ಆಸಕ್ತಿ-ಪರಿಶ್ರಮಗಳಿಂದ ಕಲಿಯುತ್ತ 'ಉಷಾಸ್ ಫೌಂಡೇಶನ್' ನೃತ್ಯಶಾಲೆಯ ಎಲ್ಲಾ ಕಾರ್ಯಕ್ರಮಗಳಲ್ಲಿ, ನಾಡಿನ ಅನೇಕ ವೇದಿಕೆಗಳ ಮೇಲೆ ನರ್ತಿಸಿದ್ದಾಳೆ.



**ಹೆಜ್ಜೆಗಳ ತಾಳ-ಲಯಜ್ಞಾನ**

ಶಾಲಾ- ಕಾಲೇಜಿನ ಎಲ್ಲಾ ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ವರ್ಷಾ ಮುಂದು. ಅಂತರ್ಶಾಲೆ ಮತ್ತು ಕಾಲೇಜು ನೃತ್ಯಸ್ಪರ್ಧೆಗಳಲ್ಲಿ ಬಹುಮಾನಗಳ ಸೂರೆ. ಸದಾ ಲವಲವಿಕೆಯಿಂದಿರುವ ವರ್ಷಾ ನಾಯಕತ್ವದ ಗುಣ ಹೊಂದಿದ್ದು, ಓದಿನಲ್ಲೂ ಬುದ್ಧಿವಂತಿಕೆ ಮೆರೆದಿರುವುದು ಅವಳ ಅಗ್ಗಳಿಕೆ. ಪ್ರಸ್ತುತ ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್ ನಲ್ಲಿ ಬಯೋಟೆಕ್ನಾಲಜಿಯಲ್ಲಿ ಬಿ .ಎಸ್ಸಿ (ಆನರ್ಸ್) ವಿದ್ಯಾಭ್ಯಾಸ ನಡೆಸುತ್ತಿದ್ದಾಳೆ. ಪಾಕ ಪ್ರವೀಣೆಯಾದ ವರ್ಷಳ ಇನ್ನಿತರ ಅಚ್ಚುಮೆಚ್ಚಿನ ಹವ್ಯಾಸಗಳೆಂದರೆ ಚಿತ್ರಕಲೆ ಮತ್ತು ಸಂಗೀತ. ಚಂಡೀಘರ್ ನ ಪ್ರಾಚೀನ ಕಲಾಕೇಂದ್ರದಿಂದ ಡ್ರಾಯಿಂಗ್ ಕಲೆಯಲ್ಲಿ ಡಿಸ್ಟಿಂಕ್ಷನ್ ಮತ್ತು ಕಲ್ಕತ್ತಾದ ರವೀಂದ್ರ ಭಾರತೀ ಯುನಿವರ್ಸಿಟಿಯಿಂದ ಸಂಗೀತ ಪ್ರತಿಭೆ-ಸಾಧನೆಗಾಗಿ ಡಿಸ್ಟಿಂಕ್ಷನ್ ಪಡೆದಿರುವುದು ವರ್ಷಳ ವೈಶಿಷ್ಟ್ಯ. ತಾನು ನೃತ್ಯ ಕಲಿಯುತ್ತಿರುವ ಉಷಾಸ್ ಫೌಂಡೇಶನ್‌ನ ವಿವಿಧ ನೃತ್ಯ ಪ್ರದರ್ಶನ ಕಾರ್ಯಕ್ರಮದ ಸಂದರ್ಭದಲ್ಲಿ ವರ್ಷಳಿಗೆ ವಿಪುಲ ಅವಕಾಶಗಳು ದೊರೆತಿವೆ. ವಿವಿಧ ನಾಟ್ಯಾಂಜಲಿ ನೃತ್ಯೋತ್ಸವಗಳು, ದೆಹಲಿ ಕರ್ನಾಟಕ ಸಂಘದಲ್ಲಿ ರಾಜ್ಯೋತ್ಸವ ಸಮಾರಂಭ, ತಿರುನೆಲ್ವೇಲಿ, ಇಸ್ಕಾನ್ ಮುಂತಾದೆಡೆ ನೃತ್ಯ ಪ್ರದರ್ಶನ ನವರಾತ್ರಿ, ವಾಲ್ಮೀಕಿ ಜಯಂತಿ ಮುಂತಾದ ನೃತ್ಯೋತ್ಸವಗಳಲ್ಲಿ ವರ್ಷಾ ನರ್ತಿಸುವ ಅವಕಾಶ ಪಡೆದು ಕಲಾರಸಿಕರಿಂದ ಮನ್ನಣೆ-ಮೆಚ್ಚುಗೆ ಗಳಿಸಿದ್ದಾಳೆ.

# ಮಹಿಳಾ ಪಿಜಿಗಳಿಗೆ ಬಂತು ಹೊಸ ರೂಲ್ಸ್

• **ಉದಯವಾಹಿನಿ, ಬೆಂಗಳೂರು**

ನಗರದಲ್ಲಿರುವ ಮಹಿಳಾ ಪಿಜಿಗಳಿಗೆ ಕಟ್ಟುನಿಟ್ಟಿನ ರೂಲ್‌ಸ ಜಾರಿ ಮಾಡಲು ಬಿಬಿಎಂಪಿ ಹಾಗೂ ಪೊಲೀಸ್ ಇಲಾಖೆ ನಿರ್ಧರಿಸಿವೆ.ಕೆಲ ದಿನಗಳ ಹಿಂದೆ ಕೋರಮಂಗಲದಲ್ಲಿರುವ ಮಹಿಳಾ ಪಿಜಿಗೆ ವ್ಯಕ್ತಿಯೊಬ್ಬ ನುಗ್ಗಿ ಯುವತಿಯೊಬ್ಬರನ್ನು ಕೊಲೆ ಮಾಡಿ ಪರಾರಿಯಾಗಿದ್ದ ಘಟನೆಯನ್ನು ಗಂಭೀರವಾಗಿ ಪರಿಗಣಿಸಿ ಈ ನಿರ್ಧಾರಕ್ಕೆ ಬರಲಾಗಿದೆ.ಹೊಸ ರೂಲ್‌ಸ ಪ್ರಕಾರ ನಗರದಲ್ಲಿರುವ



ಉದಯವಾಹಿನಿ ಚಿತ್ರ

ಪಿಜಿಗಳು ಇನ್ನು ಮುಂದೆ ಕಡ್ಡಾಯವಾಗಿ ಪಾಲಿಕೆ ಪರವಾನಿಗಿಯನ್ನು ಪಡೆದುಕೊಳ್ಳಬೇಕಿದೆ. ಪಿಜಿಗೆ ಬರುವ ಎಲ್ಲಾ ವ್ಯಕ್ತಿಗಳ ಗುರುತಿನ ಚೀಟಿ, ಇತ್ತೀಚಿನ ಭಾವಚಿತ್ರ ಪಡೆಯಬೇಕು. ರಕ್ತ ಸಂಬಂಧಿಕರು, ಸ್ನೇಹಿತರ ವಿವರಗಳು ಹಾಗೂ ಮೊಬೈಲ್ ಸಂಖ್ಯೆಗಳನ್ನೂ ಪಡೆದುಕೊಳ್ಳುವುದನ್ನು ಕಡ್ಡಾಯ ಮಾಡಲಾಗಿದೆ. ಪಿಜಿಗೆ ಭೇಟಿ ನೀಡಲು ಬರುವ ಸಂಬಂಧಿಕರು, ಸ್ನೇಹಿತರು ಸೇರಿದಂತೆ ಯಾರೇ ಬಂದರು ಅವರ ಎಲ್ಲಾ ವಿವರಗಳನ್ನು ಪ್ರತ್ಯೇಕವಾಗಿ ಪಡೆಯಬೇಕು ಎಂದು ಸೂಚಿಸಲಾಗಿದೆ. ಕಡ್ಡಾಯವಾಗಿ ಸಿಸಿ ಕ್ಯಾಮರಾಗಳನ್ನು ಅಳವಡಿಕೆ ಮಾಡಬೇಕು. ಅಗ್ನಿ ಅನಾಹುತದ ಕುರಿತಂತೆ ಅಗತ್ಯ ಸುರಕ್ಷತೆ ಕ್ರಮಗಳನ್ನು ಅನುಸರಿಸಬೇಕು. ಮಾದಕ ವಸ್ತುಗಳ ಸೇವನೆ ಮತ್ತು ಸಂಗ್ರಹಣೆ. ಕಾನೂನು ಬಾಹಿರ ಇಂತಹದಕ್ಕೆ ಪಿಜಿ ಒಳಗೆ ಅವಕಾಶ ನೀಡಬಾರದು.. ಸ್ಥಳೀಯ ಪೊಲೀಸ್ ಠಾಣೆ, ತುರ್ತು ಸ್ಪಂದನೆಯ-112, ವೈದ್ಯಕೀಯ ಸೇವೆಯ-103, ಮತ್ತು ಸೈಬರ್ ಅಪರಾಧಕ್ಕೆ ಸಂಬಂಧಪಟ್ಟ - 1930 ಮುಂತಾದ ಅಗತ್ಯ ಸೇವೆಗಳ ದೂರವಾಣಿ ಸಂಖ್ಯೆಗಳನ್ನು ಎಲ್ಲರಿಗೂ ಕಾಣುವಂತೆ ಹಾಕಬೇಕು. ಪ್ರಥಮ ಚಿಕಿತ್ಸೆ ಸಲಕರಣೆಗಳನ್ನು ಇಟ್ಟುಕೊಳ್ಳುವುದು.

# ಅಪರ್ಣ ನಾದಾರ್ಪಣ ಕಾರ್ಯಕ್ರಮ

• **ಉದಯವಾಹಿನಿ, ಬೆಂಗಳೂರು**

ನಗರದ ಇನ್ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಆಡಿಟೋರಿಯಂ ನಲ್ಲಿ ನಡೆದ ಅಪರ್ಣ ನಾದಾರ್ಪಣ ಕಾರ್ಯಕ್ರಮ ಬಹಳ ಅದ್ದೂರಿಯಾಗಿ ನಡೆಯಿತು ವೀಣಾ ವಾರುಣಿ ಕಲ್ಚರಲ್ ಫೌಂಡೇಶನ್ ಬಿಎನ್‌ಎಂ ವಿದ್ಯಾಸಂಸ್ಥೆಗಳ ಸಹಯೋಗ ಸಾರ್ಯ ಕ್ರಿಯೇಷನ್ ಸಹಕಾರದೊಂದಿಗೆ ನಡೆದ ನಾದ ಭಾವ ನಮನ ಕಾರ್ಯ ಕ್ರಮದಲ್ಲಿ ಕನ್ನಡ ಹಳೆಯ ಚಿತ್ರಗೀ ತೆಗಳು ರಾರಾಜಿಸಿದವು .ಅಲ್ಲದೆ ಅಪರ್ಣ ಅವರು ನಡೆದು ಬಂದ ಹಾದಿಯನ್ನು ನೆರೆದಂತಹ ಎಲ್ಲರೂ ನೆನೆದರು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಾಗರಾಜ ವಸ್ತಾರೆ, ಡಾಕ್ಟರ್‌ನ ಸೋಮಶೇಖರ್, ಶ್ರೀ ನಾರಾಯಣ್ ರಾವ್ ಆರ್ ,ವಿ ಮನೋಹರ್, ವಿ ವಿ ಗೋಪಾಲ್, ಶ್ರೀಮತಿ ರೇವತಿ ಕಾಮತ್ ,ಗಿರಿಜಾ ಲೋಕೇಶ್, ರಾ ಸೂ ವೆಂಕಟೇಶ್ ಇವರೆಲ್ಲರೂ ಭಾಗಿಯಾಗಿ ಅಪರ್ಣ ರಿಗೆ ನುಡಿ ನಮನ ಸಲ್ಲಿಸಿದರು. ಗಾನ ನಮನ ಸಲ್ಲಿಸಿದ ಜೋಗಿ ಸುನಿತಾ, ಮೋಹನ್ ಕೃಷ್ಣ, ಅರ್ಚನಾ ಉಡುಪ, ಮಂಗಳಾರವಿ ಪಂಚಮ ಹಳಿಬಂಡಿ, ರೆಮೋ, ಕೀರ್ತನ ನಾಗರಂಜಿನಿ, ಅಯ್ಯಪ್ಪ, ಮದ್ವೇಶ್ ಇವರೆಲ್ಲರೂ ಹಳೆಯ ಕನ್ನಡ ಹಾಗೂ ಹಿಂದಿ ಚಿತ್ರಗೀತೆಗಳಿಗೆ ದನಿಯಾದರು. ವೀಣಾ ವಾದನದಲ್ಲಿ ವಿದುಷಿ ವೀಣಾ ವಾರುಣಿಯವರು ನಾದ ನಮನ ಕಾರ್ಯ ಕ್ರಮದಲ್ಲಿ ಶಾರದೆ ದಯ ತೋರಿದೆ, ನೀಲ ಮೇಘ ಶಾಮ, ಒಲುಮೆಪೂಜೆಗೆಂದೇ, ಐಗಿರಿ ನಂದಿನಿ, ಮುಕ್ತ ಮುಕ್ತ ಮುಕ್ತ, ಈ ಹಸಿರು ಸಿರಿಯಲಿ ಮನಸು ಮರೆಯಲಿ,ವಿಠ್ಠಲ, ಹೀಗೆ ಹಳೆಯ ಚಿತ್ರ ಗೀತೆಗಳನ್ನು ಭಕ್ತಿ ಭಾವಗೀತೆಗಳನ್ನು ನುಡಿಸಿ ನೆರೆದಂತಹ ಸಾವಿರಾರು ಅಪರ್ಣ ಅಭಿಮಾನಿಗಳನ್ನು ಮಂತ್ರಮುಗ್ಧಗೊಳಿಸಿದರು. ಕಾರ್ಯಕ್ರಮಕ್ಕೆ ಡಾ. ರೋಹಿಣಿ ಮೋಹನ್, ಶ್ರೀಮತಿ ಸಂಧ್ಯಾ ಭಟ್ ನಿರೂಪಣೆ ಮಾಡಿದರು. ಈ ಮೂಲಕ ನಮ್ಮನ್ನಗಲಿದ ಅಪರ್ಣ ಅವರಿಗೆ ಭಾವಪೂರ್ಣ ನಾದಾರ್ಪಣೆಯನ್ನು ಸಲ್ಲಿಸಲಾಯಿತು.



# ನೀಲ ಪ್ರತಿಮಾನ ಮಂಜು 2 ಕೃತಿ ಲೋಕಾರ್ಪಣೆ



ಉದಯವಾಹಿನಿ ಚಿತ್ರ

• **ಉದಯವಾಹಿನಿ, ಬೆಂಗಳೂರು**

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು. ವಿಜಯನಗರ ಮೈಸೂರು. ಕವಿ ಕಾವ್ಯ ಕಥಾ ಸಂಗಮ ಎಂಬ ಕಾರ್ಯಕ್ರಮದಲ್ಲಿ ಪ್ರತಿಮಾ ಸಾಮಾಜಿಕ ಸಾಂಸ್ಕೃತಿಕ ಅಭಿವೃದ್ಧಿ ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷರಾದಂತಹ ಹಾಸನ ನಗರದ ಸಮಾಜ ಸೇವಕಿ, ಸಾಹಿತಿ, ಲೇಖಕಿ, ಅಂಕಣಗಾರ್ತಿ, ಶಿಕ್ಷಕಿ, ಸಾಮಾಜಿಕ ಚಿಂತಕಿ ಯಾದ ಶ್ರೀಮತಿ ಹೆಚ್. ಎಸ್. ಪ್ರತಿಮಾ ಹಾಸನ್ ರವರ ಅಂತರಾಳದ ಪ್ರತಿರವ ಮುಕ್ತಕಗಳು ಭಾವಾರ್ಥ ಸಹಿತದೊಂದಿಗೆ ನೀಲ ಪ್ರತಿಮಾನ ಮಂಜು ಕವನ ಸಂಕಲನವು ಅಕ್ಷರ ಪಬ್ಲಿಕೇಶನ್ ವತಿಯಿಂದ ಅದ್ದೂರಿಯಾಗಿ ಎರಡು ಕೃತಿಯು ಬಿಡುಗಡೆಯಾಯಿತು.

**ಕವಿ ಕಾವ್ಯ ಕಥಾ ಸಂಗಮ**

ಈ ಕೃತಿಯಲ್ಲಿ ಮುದ್ರಣಗೊಂಡಿರುವ ಮುಕ್ತಕಗಳು ಮತ್ತು ಕವನಗಳು ಪ್ರಸಿದ್ಧ ಜನಪ್ರಿಯ ಪತ್ರಿಕೆಗಳಲ್ಲಿ ಪ್ರಕಟಗೊಂಡಿದೆ. ಸಮಾರಂಭದಲ್ಲಿ ಶ್ರೀಮತಿ ಹೆಚ್. ಎಸ್. ಪ್ರತಿಮಾ ಹಾಸನ್ ರವರಿಗೆ ರಾಜ್ಯಮಟ್ಟದ ಅಕ್ಷರನಾದ ಹೆಮ್ಮೆಯ ಕನ್ನಡತಿ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಉದ್ಘಾಟಕರಾಗಿ ಶ್ರೀ ಅರವಿಂದ ಮಾಲಗತ್ತಿರವರು, ಶ್ರೀ ಮಡ್ಡಿಗೆರೆ ಗೋಪಾಲ್ ಸ್ಥಾಪ ಅಧ್ಯಕ್ಷರು ಶ್ರುತಿ ಮಧುಸೂದನ್, ಪದ್ಮನಾಭ. ಡಿ. ತಾರಾ, ಪದ್ಮ ಮೂರ್ತಿ, ಆನಂದ್ ಕಾಳೇನಹಳ್ಳಿ, ಇನ್ನು ಹಲವಾರು ಗಣ್ಯಾತಿ ಗಣ್ಯರು ವೇದಿಕೆಯಲ್ಲಿ ಉಪಸ್ಥಿತರಿದ್ದರು.

# ಸಾಧಕ ಕ್ರೀಡಾಪಟುಗಳಿಗೆ ಶೀಘ್ರದಲ್ಲೇ ಸರ್ಕಾರಿ ಉದ್ಯೋಗ: ಸಿಎಂ

• **ಉದಯವಾಹಿನಿ, ಬೆಂಗಳೂರು**

ಒಲಿಂಪಿಕ್ಸ್, ಪ್ಯಾರಾಲಿಂಪಿಕ್ಸ್, ಏಷ್ಯನ್ ಗೇಮ್ಸ್, ಪ್ಯಾರಾ ಏಷ್ಯನ್ ಗೇಮ್ಸ್ ಕಾಮನ್ ವೆಲ್ತ್ ಗೇಮ್ಸ್‌ನಲ್ಲಿ ಪದಕ ಗೆದ್ದ ರಾಜ್ಯದ 12 ಕ್ರೀಡಾಪಟುಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವಿಧ ಇಲಾಖೆಗಳಲ್ಲಿ ಗ್ರೂಪ್ ಎ, ಬಿ, ಇತರ ಹುದ್ದೆಗಳಿಗೆ ನೇಮಕಾತಿಗೆ ಆಫರ್ ಲೆಟರ್ ವಿತರಿಸಿದರು. ಗೃಹ ಕಚೇರಿ ಕೃಷ್ಣಾದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಸಿದ್ದರಾಮಯ್ಯ 12 ಮಂದಿ ಕ್ರೀಡಾ ಪಟುಗಳಿಗೆ ಅವಕಾಶ ಪತ್ರ (ಆಫರ್ ಲೆಟರ್) ವಿತರಿಸಿದರು. ಈ ಮಾತನಾಡಿದ ಸಿಎಂ, ಪದಕ ಪಡೆದವರಿಗೆ ರಾಜ್ಯ ಸರ್ಕಾರ ನೆರವಾಗಲಿದೆ. ಕ್ರೀಡಾಪಟುಗಳಿಗೆ ಸರ್ಕಾರಿ ಉದ್ಯೋಗ ನೀಡಲು ತೀರ್ಮಾನಿಸಿದ್ದೇವೆ. ಸುಮಾರು 12 ಜನರಿಗೆ ನೇರ ನೇಮಕಾತಿಗೆ ಅವಕಾಶ ಪತ್ರ ನೀಡುತ್ತಿದ್ದೇವೆ. 2016-17 ಒಲಿಂಪಿಕ್ಸ್ ಅಸೋಸಿಯೇಷನ್ ಏರ್ಪಾಡು ಮಾಡಿದ್ದ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದೆ. ಆಗ ಸಾಧನೆ, ಪದಕ ಪಡೆದವರಿಗೆ ಸರ್ಕಾರದಲ್ಲಿ ಆದ್ಯತೆ ಮೇಲೆ ಕೆಲಸ ನೀಡುವ ಬಗ್ಗೆ ಘೋಷಣೆ ಮಾಡಿದ್ದೆ ಎಂದು ಹೇಳಿದರು.

# ಅಕ್ಟೋಬರ್‌ನಲ್ಲಿ ಸಂಪುಟ ಪುನಾರಚನೆ ಸಾಧ್ಯತೆ

■ ಕಾರ್ಯವೈಖರಿ ಬದಲಾಯಿಸಿಕೊಳ್ಳದಿದ್ದರೆ ತಲೆದಂಡ; ಕೈ ಕಮಾಂಡ್ ಎಚ್ಚರಿಕೆ!

• **ಉದಯವಾಹಿನಿ, ಬೆಂಗಳೂರು**



ಉದಯವಾಹಿನಿ ಚಿತ್ರ

ಅಕ್ಟೋಬರ್ ತಿಂಗಳಿನಲ್ಲಿ ಸಚಿವ ಸಂಪುಟ ಪುನಾರಚನೆಯಾಗುವ ಸಾಧ್ಯತೆಗಳಿದ್ದು, ಇನ್ನೆರಡು ತಿಂಗಳುಗಳಲ್ಲಿ ತಮ್ಮ ಕಾರ್ಯವೈಖರಿ ಬದಲಾಯಿಸಿಕೊಳ್ಳದಿದ್ದರೆ ತಲೆದಂಡಕ್ಕೆ ಗುರಿಯಾಗಬೇಕಾಗುತ್ತದೆ ಎಂದು ಸಚಿವರಿಗೆ ಕಾಂಗ್ರೆಸ್ ಹೈಕಮಾಂಡ್ ಎಚ್ಚರಿಕೆ ನೀಡಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಂದೀಪ್ ಸಿಂಗ್ ಸುರ್ಜೇವಾಲಾ, ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿಕೆ. ಶಿವಕುಮಾರ್ ಜೊತೆಗೆ ಮುಖ್ಯಮಂತ್ರಿಗಳ ಅಧಿಕೃತ ನಿವಾಸದಲ್ಲಿ ಸಚಿವರ ಜೊತೆಗೆ ಮಹತ್ವದ ಸಬೆ ನಡೆಸಿದ ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್ ಅವರು ಈ ಸಂದೇಶ ರವಾನಿಸಿದ್ದಾರೆಂದು ತಿಳಿದುಬಂದಿದೆ. ಇತ್ತೀಚೆಗೆ ನಡೆದ ಲೋಕಸಭೆ ಚುನಾವಣೆಯ ಸತ್ಯಶೋಧನಾ ಸಮಿತಿಯ ವರದಿ ಮತ್ತು ಗುಪ್ತಚರ ವರದಿಯನ್ನು ಆಧರಿಸಿ, ವೇಣುಗೋಪಾಲ್ ಮತ್ತು ಸುರ್ಜೇವಾಲಾ ಅವರು ಸಚಿವರಿಗೆ ಎಚ್ಚರಿಕೆ ನೀಡಿದ್ದಾರೆಂದು ಮೂಲಗಳು ತಿಳಿಸಿವೆ. ಸಚಿವರು ಪ್ರಾಮಾಣಿಕವಾಗಿ ಪ್ರಯತ್ನ ನಡೆಸಿದ್ದರೆ ಪಕ್ಷ 15 ಲೋಕಸಭಾ ಸ್ಥಾನಗಳನ್ನು ಗೆಲ್ಲುತ್ತಿತ್ತು ಎಂದು ವೇಣುಗೋಪಾಲ್ ಹೇಳಿದ್ದಾರೆಂದು ವರದಿಗಳು ತಿಳಿಸಿವೆ. ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ ಎಚ್ ಮುನಿಯಪ್ಪ, ಉನ್ನತ ಶಿಕ್ಷಣ ಸಚಿವ ಡಾ ಎಂ ಸಿ ಸುಧಾಕರ್, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಸಹಕಾರ ಸಚಿವ ಕೆ ಎನ್ ರಾಜಣ್ಣ ಸೇರಿದಂತೆ ಹತ್ತು ಶಾಸಕರು ವಿವಿಧ ಕಾರಣಗಳಿಗಾಗಿ ಎಚ್ಚರಿಕೆ ಪಡೆದಿದ್ದಾರೆಂದು ಮೂಲಗಳು ತಿಳಿಸಿವೆ.

**ಕಾಂಗ್ರೆಸ್‌ಗೆ ಹೈಕಮಾಂಡ್ ಎಚ್ಚರಿಕೆ**

ಆಡಳಿತದಲ್ಲಿನ ಕಳಪೆ ಪ್ರದರ್ಶನ ಸೇರಿದಂತೆ ಲೋಕಸಭೆ ಚುನಾವಣೆ ವೇಳೆ ಪಕ್ಷ ವಿರೋಧಿ ಚಟುವಟಿಕೆ, ಹೈಕಮಾಂಡ್ ಆದೇಶದ ವಿರುದ್ಧ ಹೇಳಿಕೆ ನೀಡಿರುವುದರ ಕುರಿತು ಎಚ್ಚರಿಕೆ ನೀಡಿದ್ದಾರೆಂದು ತಿಳಿದುವೆ.

**ನಿಮ್ಮ ಬಳಿಕೆ ಬರುವ ಶಾಸಕರು ಹಾಗೂ ಕಾರ್ಯಕರ್ತರ ಕಷ್ಟಗಳಿಗೆ ಸ್ಪಂದಿಸದಿದ್ದರೆ ರಾಜ್ಯದ ಜನರ ಸಮಸ್ಯೆಗೆ ಹೇಗೆ ಸ್ಪಂದಿಸುತ್ತೀರಿ ಮೊದಲು ಪಕ್ಷದ ಸೂಚನೆಗಳನ್ನು ಚಾಚೂ ತಪ್ಪದೆ ಪಾಲಿಸಿ, ರಾಜ್ಯ ಪ್ರವಾಸ ಮಾಡಿ, ಇಲಾಖೆ ಸುಧಾರಣೆ ತಂದು ಸರ್ಕಾಪಕ್ಕೆ ಜನರಲ್ಲಿ ಉತ್ತಮ ಹೆಸರು ತರುವಂತೆ ಕೆಲಸ ಮಾಡಿ. ನೀವು ಸರಿಯಾಗಿ ಕೆಲಸ ಮಾಡಿದ್ದರೆ ಲೋಕಸಭೆಯಲ್ಲಿ ಕನಿಷ್ಟ 15 ಸ್ಥಾನ ಗೆಲ್ಲುತ್ತಿದ್ದೆವು ಎಂದು ಹೇಳಿದರು ಎಂದು ತಿಳಿದುಬಂದಿದೆ.**

ಹಲವಾರು ಸಚಿವರ ಬಗ್ಗೆ ನಿರಂತರವಾಗಿ ದೂರುಗಳು ಕೇಳಿ ಬರುತ್ತಿವೆ.

ಪ್ರತಿಯೊಬ್ಬ ಸಚಿವರ ಬಗ್ಗೆಯೂ ವೈಯಕ್ತಿಕ ಮೌಲ್ಯಮಾಪನಾ ವರದಿ ನಮ್ಮ ಬಳಿ ಇದೆ. ಸಚಿವರ ಕೆಲಸ ತವರು ಕ್ಷೇತ್ರ ಮತ್ತು ಉಸ್ತುವಾರಿ ಜಿಲ್ಲೆಗಷ್ಟೇ ಸೀಮಿತವಾಗಿದೆ. ಪಕ್ಷದ ಶಾಸಕರು ಹಾಗೂ ಕಾರ್ಯಕರ್ತರ ಅವವಾಲಿಗೆ ಸ್ಪಂದಿಸಲೂ ಕೆಲ ಸಚಿವರು ದರ್ಪ ತೋರುತ್ತಿದ್ದಾರೆ. ಇದನ್ನು ಪಕ್ಷ ಸಹಿಸುವುದಿಲ್ಲ.

# ಅಮೆರಿಕದ ಫ್ಲೋರಿಡಾ ರಾಜ್ಯಕ್ಕೆ ಅಪ್ಪಳಿಸಿದ ಭೀಕರ ಡೆಬ್ಬಿ ಚಂಡಮಾರುತ

## ಫ್ಲೋರಿಡಾ ರಾಜ್ಯದ ಬಿಗ್ ಬೆಂಡ್ ಪ್ರದೇಶಕ್ಕೆ ಚಂಡ ಮಾರುತ ಅಪ್ಪಳಿಸಿದೆ, ಗಾಳಿಯ ವೇಗ ಗಂಟೆಗೆ 80 ಮೈಲು ಇತ್ತು ಎಂದು ತಜ್ಞರ ಮಾಹಿತಿ

**ಅಮೆರಿಕ:** ಡೆಬ್ಬಿ ಚಂಡಮಾರುತ ಅಮೆರಿಕದ ಫ್ಲೋರಿಡಾ ರಾಜ್ಯಕ್ಕೆ ಅಪ್ಪಳಿಸಿದೆ. ಫ್ಲೋರಿಡಾ ರಾಜ್ಯದ ಬಿಗ್ ಬೆಂಡ್ ಪ್ರದೇಶಕ್ಕೆ ಚಂಡ ಮಾರುತ ಅಪ್ಪಳಿಸಿದೆ.

ಅಮೆರಿಕದ ಸ್ಥಳೀಯ ಕಾಲಮಾನ ಸೋಮವಾರ ಬೆಳಗ್ಗೆ 5 ಗಂಟೆಗೆ ಚಂಡಮಾರುತ ಅಪ್ಪಳಿಸಿದೆ. ಚಂಡ ಮಾರುತವು ಫ್ಲೋರಿಡಾ ರಾಜ್ಯದ ಕರಾವಳಿಗೆ ಅಪ್ಪಳಿಸಿದ ಸಂದರ್ಭದಲ್ಲಿ ಗಾಳಿಯ ವೇಗ ಗಂಟೆಗೆ 80 ಮೈಲು ಇತ್ತು ಎಂದು ರಾಷ್ಟ್ರೀಯ ಚಂಡಮಾರುತ ಕೇಂದ್ರ ಮಾಹಿತಿ ನೀಡಿದೆ. ರಾತ್ರೋರಾತ್ರಿ ಚಂಡಮಾರುತದ ವೇಳೆ ದುಪ್ಪಟ್ಟಾಗಿದೆ ಎಂದೂ ತಜ್ಞರು ಮಾಹಿತಿ ನೀಡಿದ್ದಾರೆ.

ಅಮೆರಿಕ ಕರಾವಳಿಗೆ ಅಪ್ಪಳಿಸುವ ಮುನ್ನ ಸೀಡರ್ ಕೀ ಎಂಬಲ್ಲಿ ಚಂಡಮಾರುತದ ವೇಗ ಗಂಟೆಗೆ 12 ಮೈಲು ಇತ್ತು. ಬಳಿಕ ತನ್ನ ವೇಗವನ್ನು ಭಾರೀ ಪ್ರಮಾಣದಲ್ಲಿ ಹೆಚ್ಚಿಸಿಕೊಂಡಿದೆ.

**18 ಇಂಚು ಮಳೆ ಸಾಧ್ಯತೆ**



**ಫ್ಲೋರಿಡಾದಲ್ಲಿ ಪ್ರವಾಹದ ಅಬ್ಬರ:** ಚಂಡಮಾರುತದ ಪ್ರಭಾವದಿಂದಾಗಿ ಫ್ಲೋರಿಡಾ ಕೊಲ್ಲಿಯ ಕರಾವಳಿ ತೀರದಲ್ಲಿ ಭಾರೀ ಪ್ರವಾಹ ಪರಿಸ್ಥಿತಿ ಉಂಟಾಗಿದೆ.

ಸಮುದ್ರದ ಅಲೆಗಳು ಕರಾವಳಿ ತೀರದಲ್ಲಿ ಸುಮಾರು 10 ಅಡಿಗಳಷ್ಟು ಮೇಲೆದ್ದಿವೆ. ತಂಪಾ ಕಡಲ ತೀರದಲ್ಲಿ 3 ರಿಂದ 5 ಅಡಿ ಎತ್ತರಕ್ಕೆ ಅಲೆಗಳು ಎದ್ದಿದ್ದು, ಅಲೆಗಳ ಅಬ್ಬರ ಇನ್ನಷ್ಟು ಹೆಚ್ಚುವ ಭೀತಿ ಎದುರಾಗಿದೆ. ಡೆಬ್ಬಿ ಚಂಡಮಾರುತ ಕರಾವಳಿಗೆ ಅಪ್ಪಳಿಸಿದ ಬಳಿಕ ನಿಧಾನವಾಗಿ ಫ್ಲೋರಿಡಾ ರಾಜ್ಯದ ಉತ್ತರ ದಿಕ್ಕಿಗೆ ಪ್ರಯಾಣಿಸಲಿದೆ. ಬಳಿಕ ದಕ್ಷಿಣ ಜಾರ್ಜಿಯಾ ರಾಜ್ಯದಲ್ಲಿ ಹಾವಳಿ ಇಡಲಿದೆ. ಸೋಮವಾರ ಸಂಜೆ ಅಥವಾ ಮಂಗಳವಾರದ ವೇಳೆ ಜಾರ್ಜಿಯಾ ಕರಾವಳಿಯನ್ನು ಚಂಡ ಮಾರುತ ತಲುಪುವ ನಿರೀಕ್ಷೆ ಇದೆ. ಇದಾದ ಬಳಿಕ ಚಂಡ ಮಾರುತದ ದಿಕ್ಕು ಬದಲಾಗಬಹುದಾದ ನಿರೀಕ್ಷೆ ಇದೆ. ಮಂಗಳವಾರ ರಾತ್ರಿ ವೇಳೆ ಚಂಡ ಮಾರುತ ತನ್ನ ತೀವ್ರತೆ ಕಳೆದುಕೊಳ್ಳಲಿದೆ.

**ಅಮೆರಿಕ ದೇಶದ ಆಗ್ನೇಯ ಕರಾವಳಿ ತೀರದಲ್ಲಿ ಇರುವ ಫ್ಲೋರಿಡಾ ರಾಜ್ಯಕ್ಕೆ ಡೆಬ್ಬಿ ಚಂಡಮಾರುತ ಅಪ್ಪಳಿಸಿದೆ. ಗಂಟೆಗೆ 80 ಮೈಲು ವೇಗದಲ್ಲಿ ಬಿರುಗಾಳಿ ಸಮೇತ ಚಂಡಮಾರುತ ಫ್ಲೋರಿಡಾ ರಾಜ್ಯಕ್ಕೆ ಅಪ್ಪಳಿಸಿದೆ. ಇದರ ಪರಿಣಾಮದಿಂದ ಭಾರೀ ಮಳೆ ಆಗುತ್ತಿದೆ. ಮುಂದಿನ 24 ಗಂಟೆಗಳ ಕಾಲ ಚಂಡಮಾರುತದ ತೀವ್ರತೆ ಇರಬಹುದಾಗಿದೆ ಎಂದು ಹವಾಮಾನ ಇಲಾಖೆ ಹೇಳಿದೆ. ಚಂಡಮಾರುತ ಅಪ್ಪಳಿಸುವ ಮುನ್ನೆಚ್ಚರಿಕೆ ಸಿಕ್ಕಿದ್ದ ಕಾರಣ ಸರ್ಕಾರ ಸೂಕ್ತ ಮುನ್ನೆಚ್ಚರಿಕೆ ಕೈಗೊಂಡಿತ್ತು.**

### ಫ್ಲೋರಿಡಾ ರಾಜ್ಯಾದ್ಯಂತ ಕಟ್ಟೆಚ್ಚರ

- ಫ್ಲೋರಿಡಾ ರಾಜ್ಯದ ತಾಂಪಾ ಕಡಲ ತೀರದಲ್ಲಿ ಭಾರೀ ಪ್ರಮಾಣದಲ್ಲಿ ಅಲೆಗಳು ಏಳುವ ಎಚ್ಚರಿಕೆ ನೀಡಲಾಗಿದೆ.
- ಜಾರ್ಜಿಯಾ, ದಕ್ಷಿಣ ಕೆರೋಲಿನಾ ರಾಜ್ಯಗಳಲ್ಲಿ ನದಿಗಳ ನೀರಿನ ಮಟ್ಟ ಏರಿಕೆ ಆಗುವ ಭೀತಿ ಇದೆ.
- ಫ್ಲೋರಿಡಾ ರಾಜ್ಯದ ಕರಾವಳಿ ತೀರ ದುದ್ದಕ್ಕೂ ಯಾಂಕೀ ಟೌನ್‌ನಿಂದ ಇಂಡಿಯನ್ ಪಾಸ್‌ವರೆಗೆ ಚಂಡಮಾರುತದ ಮುನ್ನೆಚ್ಚರಿಕೆ ನೀಡಲಾಗಿದೆ.


ಸದ್ಯದ ಮಟ್ಟಿಗೆ ಫ್ಲೋರಿಡಾ ರಾಜ್ಯದಲ್ಲಿ 6 ರಿಂದ 12 ಇಂಚು ಮಳೆ ಆಗುತ್ತಿದೆ. ಕೆಲವೆಡೆ ಬರೋಬ್ಬರಿ 18 ಇಂಚು ಮಳೆ ಕೂಡಾ ಆಗುತ್ತಿದೆ. ಫ್ಲೋರಿಡಾ ರಾಜ್ಯದ ಕೇಂದ್ರ ಭಾಗ ಹಾಗೂ ಉತ್ತರ ಭಾಗದಲ್ಲಿ ಗಾಳಿ, ಮಳೆಯ ಆರ್ಭಟ ಹೆಚ್ಚಾಗಿದೆ. ಇದಲ್ಲದೆ ಉತ್ತರ ಕೆರೋಲಿನಾ ರಾಜ್ಯದಲ್ಲೂ ಮಳೆಯ ಆರ್ಭಟ ಇದೆ. ಚಂಡಮಾರುತ ಅಪ್ಪಳಿಸಲಿದೆ ಎಂಬ ಮಾಹಿತಿಯನ್ನ ಅಮೆರಿಕದ ಹವಾಮಾನ ಇಲಾಖೆ ಎರಡು ದಿನಗಳ ಮುನ್ನವೇ ಸರ್ಕಾರಕ್ಕೆ ರವಾನೆ ಮಾಡಿತ್ತು.

ಈ ಹಿನ್ನೆಲೆಯಲ್ಲಿ ಫ್ಲೋರಿಡಾ ಗವರ್ನರ್ ಶನಿವಾರವೇ ಸೂಕ್ತ ಮುನ್ನೆಚ್ಚರಿಕಾ ಕ್ರಮಗಳನ್ನ ಕೈಗೊಳ್ಳಲು ಸೂಚನೆ ನೀಡಿದ್ದರು. 3 ಸಾವಿರಕ್ಕೂ ಹೆಚ್ಚು ರಾಷ್ಟ್ರೀಯ ಪಡೆ ಯೋಧರನ್ನ ಸ್ಥಳೀಯಾಡಳಿತ ರಕ್ಷಣಾ ಕಾರ್ಯಗಳಿಗೆ ನಿಯೋಜನೆ ಮಾಡಿತ್ತು. ಚಂಡಮಾರುತ ಅಪ್ಪಳಿಸುವ ಮುನ್ನವೇ ಆಯಕಟ್ಟಿನ ಸ್ಥಳಗಳಲ್ಲಿ ಇರುವ ಹಾಗೂ ಸಂಭಾವ್ಯ ಅಪಾಯಕ್ಕೆ ಸಿಲುಕಬಹುದಾದ ಜನರನ್ನು ಸುರಕ್ಷಿತ ಸ್ಥಳಗಳಿಗೆ ತುರ್ತಾಗಿ ರವಾನೆ ಮಾಡಲಾಗಿತ್ತು.

# ಕ್ಷಿಪಣಿ ಉತ್ಪಾದನೆಗೆ ಭಾರತೀಯ ವಾಯುಪಡೆ ಅನುಮತಿ

**ನವದೆಹಲಿ:** ಸ್ವದೇಶಿ ಕ್ಷಿಪಣಿ ತಯಾರಿಕಾ ಸಾಮರ್ಥ್ಯಗಳಿಗೆ ಉತ್ತೇಜನ ನೀಡುವ ಸಲುವಾಗಿ, ಭಾರತೀಯ ವಾಯುಪಡೆಯು ಸಾರ್ವಜನಿಕ ವಲಯದ ಭಾರತ್ ಡೈನಾಮಿಕ್ಸ್ ಲಿಮಿಟೆಡ್‌ಗೆ 200 ಅಸ್ಟ್ರಾ ಮಾರ್ಕ್ 1 ಏರ್-ಟು-ಏರ್ ಕ್ಷಿಪಣಿಗಳ ಉತ್ಪಾದನೆಗೆ ಅನುಮತಿ ನೀಡಿದೆ. ಅಸ್ಟ್ರಾ ಮಾರ್ಕ್ 1 ಕ್ಷಿಪಣಿಗಳನ್ನು ರಕ್ಷಣಾ ಸಂಶೋಧನೆ, ಅಭಿವೃದ್ಧಿ ಸಂಸ್ಥೆಯು ಬಿಡಿಎಲ್ ಅನ್ನು ತನ್ನ ಉತ್ಪಾದನಾ ಏಜೆನ್ಸಿಯಾಗಿ ಅಭಿವೃದ್ಧಿಪಡಿಸಿದೆ.

ಭಾರತೀಯ ವಾಯುಪಡೆಯ ಉಪ ಮುಖ್ಯಸ್ಥ ಏರ್ ಮಾರ್ಷಲ್ ಅಶುತೋಷ್ ದೀಕ್ಷಿತ್ ಅವರು ಇತ್ತೀಚೆಗೆ ಹೈದರಾಬಾದ್‌ಗೆ ಭೇಟಿ ನೀಡಿದ ಸಂದರ್ಭದಲ್ಲಿ ಬಿಡಿಎಲ್‌ಗೆ ಉತ್ಪಾದನಾ ಅನುಮತಿಯನ್ನು ನೀಡಲಾಯಿತು ಎಂದು ಭಾರತೀಯ ವಾಯುಪಡೆಯ ಅಧಿಕಾರಿಗಳು ತಿಳಿಸಿದ್ದಾರೆ. ಐಎಎಫ್ ಉಪ ಮುಖ್ಯಸ್ಥರು ಅಸ್ಟ್ರಾ ಕ್ಷಿಪಣಿಗಳ ಅಭಿವೃದ್ಧಿ ಏಜೆನ್ಸಿಯಾದ ಡಿಆರ್‌ಡಿಒದ ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯೋಗಾಲಯಕ್ಕೆ ಭೇಟಿ ನೀಡಿದ್ದರು ಎಂದು ಅವರು ಹೇಳಿದರು. ರಕ್ಷಣಾ ಸ್ವಾಧೀನ ಮಂಡಳಿಯು 2022-23ರಲ್ಲಿ 2,900 ಕೋಟಿ ವೆಚ್ಚದ ಯೋಜನೆಗೆ ಅನುಮೋದನೆ ನೀಡಿದ್ದು, ಎಲ್ಲಾ ಪರೀಕ್ಷೆಗಳು ಮತ್ತು ಬೆಳವಣಿಗೆಗಳನ್ನು ಪೂರ್ಣಗೊಳಿಸಿದ ನಂತರ ಇದೀಗ ಆ ಆದೇಶಕ್ಕೆ ಉತ್ಪಾದನಾ ಅನುಮತಿ ನೀಡಲಾಗಿದೆ ಎಂದು ರಕ್ಷಣಾ ಮೂಲಗಳು ತಿಳಿಸಿವೆ.



ಅಸ್ಟ್ರಾ ಕಾರ್ಯಕ್ರಮವನ್ನು ಡಿಆರ್‌ಡಿಒ, ಐಎಎಫ್ ಹಂತಹಂತವಾಗಿ ಪ್ರಗತಿ ಮಾಡುತ್ತಿದೆ ಮತ್ತು ಅವರು ಈಗ ಶಸ್ತ್ರಾಸ್ತ್ರ ವ್ಯವಸ್ಥೆಯ ಮಾರ್ಕ್ 2 ಅನ್ನು ಸುಮಾರು 130 ಕಿ ಮೀಗಳಲ್ಲಿ ಪರೀಕ್ಷಿಸಲು ನೋಡುತ್ತಿದ್ದಾರೆ. 300 ಕಿಲೋಮೀಟರ್‌ಗಳ ಸ್ಟ್ರೈಕ್ ಸಾಮರ್ಥ್ಯದೊಂದಿಗೆ ದೀರ್ಘ-ಶ್ರೇಣಿಯ ಅಸ್ಟ್ರಾವನ್ನು ಪರೀಕ್ಷಿಸಲು, ಅಭಿವೃದ್ಧಿಪಡಿಸಲು ಯೋಜನೆಗಳು ನಡೆಯುತ್ತಿವೆ.

**ರಕ್ಷಣಾ ಸಂಶೋಧನೆ, ಅಭಿವೃದ್ಧಿ ಪ್ರಯೋಗಾಲಯ ಈ ಯೋಜನೆಗೆ ನೋಡಲ್ ಲ್ಯಾಬ್ ಆಗಿದೆ. ಅಸ್ಟ್ರಾ ಕ್ಷಿಪಣಿಗಳನ್ನು ರಷ್ಯಾದ ಮೂಲದ ಎಸ್‌-30, ಉತ್ಪಾದನೆಯ ನಂತರ ಸ್ಥಳೀಯ ಎಲ್‌ಸಿಎ ತೇಜಸ್ ಯುದ್ಧ ವಿಮಾನಗಳೆರಡರಲ್ಲೂ ಸಂಯೋಜಿಸಲಾಗುತ್ತದೆ. ಭಾರತೀಯ ವಾಯುಪಡೆಯು ಕ್ಷಿಪಣಿಗಳಿಗಾಗಿ ಸಾಕಷ್ಟು ಸ್ವದೇಶಿ ಯೋಜನೆಗಳಿಗೆ ಸಹಾಯ ಮಾಡುತ್ತಿದೆ, ಗಾಳಿಯಿಂದ ನೆಲಕ್ಕೆ ಕ್ಷಿಪಣಿಗಳನ್ನು ಒಳಗೊಂಡಂತೆ ಅಂತಹ ಮೂರರಿಂದ ನಾಲ್ಕು ಕಾರ್ಯಕ್ರಮಗಳು ಮುಕ್ತಾಯದ ಹಂತದಲ್ಲಿವೆ.**

# ಬಾಂಗ್ಲಾದೇಶಕ್ಕೆ ತರಳದಂತೆ ನಾಗರೀಕರಿಗೆ ಸರ್ಕಾರ ಮನವಿ

**ನವದೆಹಲಿ:** ನೆರೆಯ ಬಾಂಗ್ಲಾ ದೇಶದಲ್ಲಿ ಹಿಂಸಾಚಾರ ಭುಗಿಲೆದ್ದಿರುವ ಹಿನ್ನೆಲೆಯಲ್ಲಿ ಅಲ್ಲಿರುವ ಭಾರತೀಯ ನಾಗರೀಕರು ಎಚ್ಚರಿಕೆ ವಹಿಸಬೇಕು, ಚಲನವಲನಗಳನ್ನು ನಿರ್ಬಂಧಿಸಬೇಕು ಎಂದು ಭಾರತ ಮನವಿ ಮಾಡಿಕೊಂಡಿದೆ. ಇದರ ಜೊತೆಗೆ ಮುಂದಿನ ಸೂಚನೆ ನೀಡುವವರೆಗೆ ಬಾಂಗ್ಲಾಕ್ಕೆ ಪ್ರಯಾಣ ಬೆಳೆಸದಿರುವಂತೆಯೂ ಮನವಿ ಮಾಡಿಕೊಳ್ಳಲಾಗಿದೆ. ಪ್ರಧಾನಿ ಶೇಖ್ ಹಸೀನಾ ರಾಜೀನಾಮೆಗೆ ಪ್ರತಿಭಟನಾಕಾರರು ಒತ್ತಾಯಿಸಿ ಬಾಂಗ್ಲಾದೇಶದ ವಿವಿಧ ಭಾಗಗಳಲ್ಲಿ ಭದ್ರತಾ ಪಡೆ ಸಿಬ್ಬಂದಿ, ಸರ್ಕಾರಿ ವಿರೋಧಿ ಪ್ರತಿಭಟನಾಕಾರರ ನಡುವೆ ನಡೆದ ಭೀಕರ ಘರ್ಷಣೆಯಲ್ಲಿ 14 ಪೊಲೀಸರು ಸೇರಿದಂತೆ ಕನಿಷ್ಠ 90 ಜನರು ಸಾವನ್ನಪ್ಪಿದ್ದಾರೆ ಎಂದು ಢಾಕಾ ದ ವರದಿಗಳು ತಿಳಿಸಿವೆ.

ಸಾಗುತ್ತಿರುವ ಬೆಳವಣಿಗೆಗಳ ದೃಷ್ಟಿಯಿಂದ, ಮುಂದಿನ ಸೂಚನೆ ಬರುವವರೆಗೆ ಬಾಂಗ್ಲಾದೇಶಕ್ಕೆ ಪ್ರಯಾಣಿಸದಂತೆ ಭಾರತೀಯ ಪ್ರಜೆಗಳಿಗೆ ಬಲವಾಗಿ ಸಲಹೆ ನೀಡಲಾಗಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ಸಲಹೆಯಲ್ಲಿ ತಿಳಿಸಿದೆ. ಪ್ರಸ್ತುತ ಬಾಂಗ್ಲಾ ದೇಶದಲ್ಲಿರುವ



ಎಲ್ಲಾ ಭಾರತೀಯ ಪ್ರಜೆಗಳು ತೀವ್ರ ಎಚ್ಚರಿಕೆ ವಹಿಸಲು, ತಮ ಚಲನವಲನಗಳನ್ನು ನಿರ್ಬಂಧಿಸಲು, ಢಾಕಾದಲ್ಲಿರುವ ಭಾರತದ ಹೈಕ ಮಿಷನ್‌ನೊಂದಿಗೆ ಸಂಪರ್ಕದಲ್ಲಿರಲು ಸೂಚಿಸಲಾಗಿದೆ ಎಂದು ಅದು ಹೇಳಿದೆ. ವಿವಾದಾತಕ ಉದ್ಯೋಗ ಕೋಟಾ ಯೋಜನೆಯ ವಿರುದ್ಧ ಕಳೆದ ತಿಂಗಳು ಬಾಂಗ್ಲಾದೇಶದಲ್ಲಿ ವಿದ್ಯಾರ್ಥಿಗಳ ಪ್ರತಿಭಟನೆಗಳು ಪ್ರಾರಂಭವಾಗಿದ್ದವು. ಈಗ ನಡೆಯುತ್ತಿರುವ ಪ್ರತಿಭಟನೆಗಳು ಸರ್ಕಾರದ ವಿರುದ್ಧದ ಆಂದೋಲನವಾಗಿ ಮಾರ್ಪಟ್ಟಿವೆ.

ಜುಲೈ 25 ರಂದು, ಆ ದೇಶದ ಪರಿಸ್ಥಿತಿಯನ್ನು ಗಮನದಲ್ಲಿಟ್ಟುಕೊಂಡು ಸುಮಾರು 6,700 ಭಾರತೀಯ ವಿದ್ಯಾರ್ಥಿಗಳು ಬಾಂಗ್ಲಾದೇಶದಿಂದ ಮರಳಿದ್ದಾರೆ ಎಂದು ತಿಳಿದುಬಂದಿದೆ.

# ಅಮೆರಿಕದಲ್ಲಿ ನಿರುದ್ಯೋಗ ದರ ಏರಿಕೆ, ಆರ್ಥಿಕ ಹಿಂಜರಿತ ಭೀತಿ; ಕರಗಿತು ಹೂಡಿಕೆದಾರರ 17 ಲಕ್ಷ ಕೋಟಿ ರೂ.

**ಮುಂಬೈ:** ಇಸ್ರೇಲ್ - ಇರಾನ್ ಮಧ್ಯೆ ಯುದ್ಧ ಭೀತಿ, ಅಮೆರಿಕದಲ್ಲಿ ಆರ್ಥಿಕ ಹಿಂಜರಿತ ಲಕ್ಷಣ ಸೇರಿದಂತೆ ಹಲವಾರು ಕಾರಣಗಳಿಂದ ಷೇರು ಮಾರುಕಟ್ಟೆಯಲ್ಲಿ ರಕ್ತಪಾತವಾಗಿದ್ದು ಹೂಡಿಕೆದಾರರ ಸಂಪತ್ತು ಒಂದೇ ದಿನದಲ್ಲಿ 17 ಲಕ್ಷ ಕೋಟಿ ರೂ. ಕರಗಿದೆ.

ಸೋಮವಾರ ಬೆಳಗ್ಗೆಯೇ ಗಿಫ್ಟ್ ನಿಫ್ಟಿ 300 ಅಂಕ ಇಳಿಕೆಯಾಗಿತ್ತು. ಈ ಕಾರಣದಿಂದ ಬಾಂಬೆ ಷೇರು ಮಾರುಕಟ್ಟೆ ಸಂವೇದಿ ಸೂಚಂಕ್ಯ ಸೆನ್ಸೆಕ್ಸ್ ಮತ್ತು ರಾಷ್ಟ್ರೀಯ ಷೇರು ಮಾರುಕಟ್ಟೆ ಸೂಚಂಕ್ಯ ನಿಫ್ಟಿ ಇಳಿಕೆಯಾಗಲಿದೆ ಎಂದು ನಿರೀಕ್ಷಿಸಲಾಗಿತ್ತು. ನಿರೀಕ್ಷೆಯಂತೆ ಸೆನ್ಸೆಕ್ಸ್ 2,500 ಅಂಕ ಪತಗೊಂಡರೆ ನಿಫ್ಟಿ 760 ಅಂಕ ಇಳಿಕೆಯಾಗಿದೆ.



**ಅಮೆರಿಕದ ಆರ್ಥಿಕ ಹಿಂಜರಿತ ಭೀತಿ:** ಅಮೆರಿಕದಲ್ಲಿ ಉದ್ಯೋಗ ಬೆಳವಣಿಗೆಗೆ ನಿರೀಕ್ಷೆಗಿಂತಲೂ ಕಡಿಮೆಯಾಗಿದೆ. ಕಾರ್ಮಿಕ ಇಲಾಖೆಯು ಕಳೆದ ತಿಂಗಳು ಕೇವಲ 1,14,000 ಉದ್ಯೋಗಿಳ ನೇಮಕವಾಗಿದೆ ಎಂದು ವರದಿ ಮಾಡಿದೆ. ಕಳೆದ ತಿಂಗಳು 1,75,000 ಉದ್ಯೋಗಿಗಳ ನೇಮಕವಾಗಬಹುದು ಎಂಬ ನಿರೀಕ್ಷೆ ಇತ್ತು.

ಅಮೆರಿಕದಲ್ಲಿ ಬೆಳೆಯುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಲೆಕ್ಕ ಹಾಕಿದರೆ ಪ್ರತಿ ತಿಂಗಳು 2 ಲಕ್ಷ ಹೊಸ ಉದ್ಯೋಗ ಸೃಷ್ಟಿಯಾಗಬೇಕು. ಅಮೆರಿಕದಲ್ಲಿ ನಿರುದ್ಯೋಗ ದರವು 4.3%ಕ್ಕೆ ಏರಿದ್ದು, ಇದು ಮೂರು ವರ್ಷಗಳ ಗರಿಷ್ಠ ಮಟ್ಟವನ್ನು ತಲುಪಿದೆ.

# ಕೇರಳದಲ್ಲಿ ಮಿದುಳು ತಿನ್ನುವ ಅಮೀಬಾ ಸೋಂಕು

**ತಿರುವನಂತಪುರ:** ಸರಣಿ ಭೂಕುಸಿತದಿಂದ ತತ್ತರಿಸಿರುವ ಕೇರಳದಲ್ಲಿ ಇದೀಗ 'ಮಿದುಳು ತಿನ್ನುವ ಅಮೀಬಾ ಸೋಂಕು' ಪ್ರಕರಣಗಳು ವರದಿಯಾಗಿವೆ.

ಕೇರಳ ಆರೋಗ್ಯ ಸಚಿವೆ ವೀ ಣಾ ಜಾರ್ಜ್ ಅವರು, ಮೂವರಲ್ಲಿ ಸೋಂಕು ದೃಢಪಟ್ಟಿದೆ. ಅವರಿಗೆ ತಿರುವನಂತಪುರದ ವೈದ್ಯಕೀಯ ಕಾಲೇಜು ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ. ಕಲುಷಿತ ನೀರಿನ ಬಳಕೆಯಿಂದ ಸೋಂಕು ತಗುಲಿದೆ ಎಂದಿರುವ ಸಚಿವರು, ಸಾರ್ವಜನಿಕರು ಜಾಗೃತರಾಗಿರಬೇಕು ಎಂದೂ ಮನವಿ ಮಾಡಿದ್ದಾರೆ. ಈ ಪ್ರಕರಣಗಳು ಬೆಳಕಿಗೆ ಬರುತ್ತಿದ್ದಂತೆ ಆರೋಗ್ಯ ಸಚಿವಾಲಯ ಮಾರ್ಗಸೂಚಿ



ಬಿಡುಗಡೆ ಮಾಡಿದೆ. ಕಲುಷಿತ ನೀರನ್ನು ಸ್ನಾನ, ಪ್ರಾಣಿಗಳನ್ನು ತೊಳೆಯಲು ಅಥವಾ ಇತರ ಕಾರ್ಯಗಳಿಗೆ ಬಳಸುವುದು ಸೋಂಕು ಹರಡಲು ಕಾರಣವಾಗಲಿದೆ ಎಂದು ಎಚ್ಚರಿಸಿದೆ.

ಈ ಸೋಂಕಿನ ಪ್ರಕರಣಗಳು ತೀರಾ ಅಪರೂಪವಾದರೂ ಗಂಭೀರವಾದವು. ಹಾಗಾಗಿ, ವಿಪರೀತ ತಲೆನೋವು, ಜ್ವರ, ನೆಗಡಿ, ವಾಂತಿ ಅಥವಾ ಕುತ್ತಿಗೆ ನೋವು ಕಾಣಿಸಿಕೊಂಡರೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ ಎಂದು ಸಲಹೆ ನೀಡಿದೆ. ಜಾಗೃತಿ ಮೂಡಿಸುವ ಪ್ರಯತ್ನಗಳನ್ನು ಹಾಗೂ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದೂ ತಿಳಿಸಿದೆ.

14 ವರ್ಷದ ಬಾಲಕನೊಬ್ಬ ಕಳೆದ ತಿಂಗಳು ಈ ಸೋಂಕಿನಿಂದ ಮೃತಪಟ್ಟಿದ್ದ. ರಾಜ್ಯದಲ್ಲಿ ಮೇ ತಿಂಗಳಿಂದ ಈಚೆಗೆ ವರದಿಯಾದ ನಾಲ್ಕನೇ ಪ್ರಕರಣ ಇದಾಗಿದ್ದು, ಎಲ್ಲರೂ ಮಕ್ಕಳೇ ಎಂಬುದು ಆಘಾತಕಾರಿ. ಈ ಸೋಂಕು ಪ್ರಕರಣಗಳು ಆಲಪ್ಪುಳ ಜಿಲ್ಲೆಯಲ್ಲಿ 2017 ಹಾಗೂ 2023ರಲ್ಲಿಯೂ ವರದಿಯಾಗಿದ್ದವು.

# ಅಸಹಕಾರ ಚಳವಳಿ: ಹಿಂಸೆಗೆ 100 ಸಾವು

**ಢಾಕಾ:** ಬಾಂಗ್ಲಾದೇಶದಲ್ಲಿ ಪ್ರಧಾನಿ ಶೇಖ್ ಹಸೀನಾ ರಾಜೀನಾಮೆಗೆ ಒತ್ತಾಯಿಸಿ ವಿದ್ಯಾರ್ಥಿಗಳು ನಡೆಸುತ್ತಿರುವ ಅಸಹಕಾರ ಚಳವಳಿಯ ಮೊದಲ ದಿನವಾದ ಭಾನುವಾರ, ಪ್ರತಿಭಟನಕಾರರು ಹಾಗೂ ಆಡಳಿತಾರೂಢ ಅವಾಮಿ ಲೀಗ್ ಪಕ್ಷದ ಬೆಂಬಲಿಗರ ನಡುವೆ ಘರ್ಷಣೆ ನಡೆದಿದೆ. ಸುಮಾರು 100 ಮಂದಿ ಮೃತಪಟ್ಟಿದ್ದಾರೆ. ಹಸೀನಾ ರಾಜೀನಾಮೆಗೆ ಒತ್ತಾಯಿಸಿ ಅಸಹಕಾರ ಚಳವಳಿ ನಡೆಸುತ್ತಿರುವವರಿಗೆ ಅವಾಮಿ ಲೀಗ್, ಛಾತ್ರ ಲೀಗ್ ಮತ್ತು ಜುಬೊ ಲೀಗ್ ಕಾರ್ಯಕರ್ತರಿಂದ ಭಾನುವಾರ ಬೆಳಿಗ್ಗೆ ಪ್ರತಿರೋಧ ಎದುರಾದಾಗ ಘರ್ಷಣೆ ಉಂಟಾಯಿತು. ದೇಶದ 13 ಜಿಲ್ಲೆಗಳಲ್ಲಿ ಘರ್ಷಣೆ ಉಂಟಾಗಿದೆ ಎಂದು ಸ್ಥಳೀಯ ಮಾಧ್ಯಮವೊಂದು ವರದಿ ಮಾಡಿದೆ.

ಭಾನುವಾರ ಸಂಜೆ 6 ಗಂಟೆಯಿಂದ ಅನಿರ್ದಿಷ್ಟ ಅವಧಿಗೆ ದೇಶದಾದ್ಯಂತ ಕರ್ಫ್ಯೂ ವಿಧಿಸಲು ಗೃಹ ಸಚಿವಾಲಯ ತೀರ್ಮಾನಿಸಿದೆ. ಫೇಸ್‌ಬುಕ್, ಮೆಸೆಂಜರ್, ವಾಟ್ಸ್‌ಆ್ಯಪ್, ಇನ್‌ಸ್ಟಾಗ್ರಾಂ ಸೇವೆಗಳನ್ನು ಸ್ಥಗಿತಗೊಳಿಸಲು ಸರ್ಕಾರ ಆದೇಶಿಸಿದೆ. 4ಜಿ ಮೊಬೈಲ್ ಇಂಟರ್ನೆಟ್ ಸೇವೆಗಳ ಸ್ಥಗಿತಕ್ಕೂ ಆದೇಶಿಸಲಾಗಿದೆ ಎಂದು ಮಾಧ್ಯಮವೊಂದು ವರದಿ ಮಾಡಿದೆ.'ತಾರತಮ್ಯದ ವಿರುದ್ಧ ವಿದ್ಯಾರ್ಥಿಗಳು' ಹೆಸರಿನ ಒಕ್ಕೂಟವೊಂದು ಹಸೀನಾ ರಾಜೀ ನಾಮೆಗೆ ಆಗ್ರಹಿಸಿ, ಅಸಹಕಾರ ಚಳವಳಿಗೆ ಕರೆ ನೀಡಿದೆ. ಆದರೆ, ಪ್ರತಿಭಟನೆಯ ಹೆಸರಿನಲ್ಲಿ ದೇಶದಾದ್ಯಂತ ವಿಧ್ವಂಸಕ ಕಾರ್ಯಗಳಲ್ಲಿ ತೊಡಗಿರುವವರು ವಿದ್ಯಾರ್ಥಿಗಳಲ್ಲ,



ಅವರು ಭಯೋತ್ಪಾದಕರು ಎಂದು ಹಸೀನಾ ಹೇಳಿದ್ದಾರೆ. ಅವರನ್ನು ಹತ್ತಿಕ್ಕಬೇಕು ಎಂದು ಜನರಿಗೆ ಕರೆ ನೀಡಿದ್ದಾರೆ.

ಢಾಕಾದ ಶಾಹಬಾಗ್‌ನಲ್ಲಿ ಸೇರಿದ ನೂರಾರು ಮಂದಿ ವೃತ್ತಿಪರರು ಹಾಗೂ ವಿದ್ಯಾರ್ಥಿಗಳು ವಾಹನಗಳ ಸಂಚಾರಕ್ಕೆ ಅಡ್ಡಿ ಉಂಟುಮಾಡಿದರು. ಢಾಕಾದಲ್ಲಿ ಬಹುತೇಕ ಮಾಲ್‌ಗಳು ಹಾಗೂ ಅಂಗಡಿಗಳು ತೆರೆದಿರಲಿಲ್ಲ. ಈಚೆಗೆ ನಡೆದ ಕೆಲವು ಪ್ರತಿಭಟನೆಗಳಲ್ಲಿ ಮೃತಪಟ್ಟವರಿಗೆ ನ್ಯಾಯ ಕೊಡಿಸುವ ಕೆಲಸ ಆಗಬೇಕು ಎಂದು ಪ್ರತಿಭಟನಕಾರರು ಆಗ್ರಹಿಸಿದರು. ಬಂಗಬಂಧು ಶೇಖ್ ಮುಜೀಬ್ ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ (ಬಿಎಸ್‌ಎಂಎಂಯು) ನಿಲ್ಲಿಸಿದ್ದ ಹಲವು ವಾಹನಗಳಿಗೆ ಭಾನುವಾರ ಬೆಂಕಿ ಹಾಕಿದ್ದಾರೆ ಎಂದು ಪತ್ರಿಕೆಯೊಂದು ವರದಿ ಮಾಡಿದೆ. ಅಲ್ಲದೆ, ಖಾಸಗಿ ಆಸ್ಪತ್ರೆಯೊಂದರ ಆವರಣದಲ್ಲಿ ನಿಲ್ಲಿಸಿದ್ದ ಖಾಸಗಿ ಕಾರುಗಳಿಗೆ, ಆಂಬುಲೆನ್ಸ್ ವಾಹನಗಳಿಗೆ, ದ್ವಿಚಕ್ರ ವಾಹನಗಳಿಗೆ ಮತ್ತು ಬಸ್ಸುಗಳಿಗೆ ದೊಣ್ಣೆಗಳನ್ನು ಹಿಡಿದಿದ್ದ ಕೆಲವರು ಹಾನಿ ಉಂಟುಮಾಡಿದ್ದಾರೆ.

ಬಾಂಗ್ಲಾ ಸ್ವಾತಂತ್ರ್ಯ ಸಮರದಲ್ಲಿ ಭಾಗಿಯಾಗಿದ್ದವರ ಸಂಬಂಧಿಕರಿಗೆ ಸರ್ಕಾರದ ಹುದ್ದೆಗಳಲ್ಲಿ ಶೇ 30ರಷ್ಟು ಮೀಸಲಾತಿ ಕಲ್ಪಿಸುವ ವಿವಾದಾತ್ಮಕ ಮೀಸಲು ವ್ಯವಸ್ಥೆಯನ್ನು ಕೊನೆಗೊಳಿಸಬೇಕು ಎಂಬುದು ಪ್ರತಿಭಟನಕಾರರ ಬೇಡಿಕೆ.

### ಹೋಣೆ ಹೊತ್ತವರು ಕರೆ

**ದೇಶದ ಹಲವೆಡೆ ಪೊಲೀಸ್ ವಾಹನಗಳು ಹಾಗೂ ಸರ್ಕಾರಿ ಕಚೇರಿಗಳ ಮೇಲೆ ದಾಳಿ ನಡೆಸಿದ ವರದಿಗಳು ಇವೆ. ಮಾತುಕತೆಗೆ ಬರುವಂತೆ ಹಸೀನಾ ಅವರು ನೀಡಿದ್ದ ಆಹ್ವಾನವನ್ನು ಪ್ರತಿಭಟನಕಾರರು ತಿರಸ್ಕರಿಸಿದ್ದಾರೆ. ಶಾಲೆ, ಕಾಲೇಜು, ವಿಶ್ವವಿದ್ಯಾಲಯ, ಮದರಸಾಗಳ ವಿದ್ಯಾರ್ಥಿಗಳು, ರಾಜಕೀಯ ಕಾರ್ಯಕರ್ತರು ಮತ್ತು ಇತರರು ಪ್ರತಿಭಟನೆಯಲ್ಲಿ ಭಾಗಿಯಾಗಬೇಕು ಎಂದು ಪ್ರತಿಭಟನೆಗಳ ಸಮನ್ವಯದ ಹೊಣೆ ಹೊತ್ತವರು ಕರೆ ನೀಡಿದ್ದಾರೆ.**

# ಅತ್ಯಾಚಾರ ಪ್ರಕರಣ ಪಕ್ಷದ ಹೆಸರು ಕೆಡಿಸಲು ಬಿಜೆಪಿ ಪಿತೂರಿ: ಅಖಿಲೇಶ್ ಯಾದವ್

**ಲಖನೌ:** ಮುಂಬರುವ ವಿಧಾನಸಭೆ ಉಪಚುನಾವಣೆಗೂ ಮುನ್ನ ಮತ ಬ್ಯಾಂಕ್ ರಾಜಕಾರಣ ಮಾಡಲು ಯತ್ನಿಸುತ್ತಿರುವ ಉತ್ತರ ಪ್ರದೇಶದ ಬಿಜೆಪಿ ಸರ್ಕಾರ ತಮ್ಮ ಪಕ್ಷದ ಹೆಸರು ಕೆಡಿಸಲು ಪ್ರಯತ್ನಿಸುತ್ತಿದೆ ಎಂದು ಸಮಾಜವಾದಿ ಪಕ್ಷದ ಮುಖ್ಯಸ್ಥ ಅಖಿಲೇಶ್ ಯಾದವ್ ಆರೋಪಿಸಿದ್ದಾರೆ. ಬಿಜೆಪಿ ಏನೇ ಮಾಡಿದರು, ಜನರು ಆ ಪಕ್ಷದ ಮೇಲಿನ ನಂಬಿಕೆ ಕಳೆದುಕೊಂಡಿದ್ದಾರೆ. ಹಾಗಾಗಿ ಬಿಜೆಪಿ ನಾಶ ನಿಶ್ಚಿತ ಎಂದು ಅವರು



ಹೇಳಿದ್ದಾರೆ. ಅಯೋಧ್ಯೆ ಸಾಮೂಹಿಕ ಅತ್ಯಾಚಾರ ಪ್ರಕರಣ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಮುಂಬರುವ ವಿಧಾನಸಭೆ ಉಪಚುನಾವಣೆಗೂ ಮುನ್ನ, ಪಿತೂರಿ ನಡೆಸಿ ಸಮಾಜವಾದಿಗಳ ಹೆಸರು ಕೆಡಿಸಲು ಬಿಜೆಪಿ ಮುಂದಾಗಿದೆ.

ಮುಸ್ಲಿಮರ ಬಗ್ಗೆ ಅವರ ಆಲೋಚನೆಗಳು ಪ್ರಜಾಪ್ರಭುತ್ವ ವಿರೋಧಿಯಾಗಿವೆ' ಎಂದು ತಿಳಿಸಿದ್ದಾರೆ. 'ಏಳು ವರ್ಷಕ್ಕೂ ಅಧಿಕ ಶಿಕ್ಷೆ ಇರುವ ಅಪರಾಧ ಮಾಡಿದ್ದಲ್ಲಿ, ಡಿಎನ್‌ಎ ಪರೀಕ್ಷೆ ನಡೆಸಬೇಕು ಎಂದು 2023ರಲ್ಲಿ ಜಾರಿಗೆ ತಂದ ಕಾನೂನಿನಲ್ಲಿ ಹೇಳಲಾಗಿದೆ. ಹಾಗಿರುವಾಗ ನಮ್ಮ ಬೇಡಿಕೆಯಲ್ಲಿ ತಪ್ಪೇನಿದೆ' ಎಂದು ಅಖಿಲೇಶ್ ಪ್ರಶ್ನಿಸಿದ್ದಾರೆ. 12 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದ ಆರೋಪಿಗಳಿಬ್ಬರ ಡಿಎನ್‌ಎ ಪರೀಕ್ಷೆಗೆ ಅಖಿಲೇಶ್ ಯಾದವ್ ಬೇಡಿಕೆ ಇಟ್ಟಿದ್ದರು. ಸಾಮೂಹಿಕ ಅತ್ಯಾಚಾರ ಪ್ರಕರಣದಲ್ಲಿ ಮೊಯಿದ್ ಖಾನ್ ಪ್ರಮುಖ ಆರೋಪಿಯಾಗಿದ್ದು, ಸಮಾಜವಾದಿ ಪಕ್ಷದ ಸದಸ್ಯನಾಗಿದ್ದಾನೆ. ಬಾಲಕಿ ಮೇಲಿನ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ, ಅಯೋಧ್ಯೆ ಜಿಲ್ಲೆಯ ಬಾದರಸಾ ನಗರದಲ್ಲಿ ಬೇಕರಿ ನಡೆಸುತ್ತಿದ್ದ ಆರೋಪಿಗಳಾದ ಮೊಯಿದ್ ಖಾನ್, ಆತನ ನೌಕರ ರಾಜು ಖಾನ್‌ನನ್ನು ಜುಲೈ 30ರಂದು ಪೊಲೀಸರು ಬಂಧಿಸಿದ್ದರು.

# ಸೇನಾಡಳಿತದಿಂದ ಬಾಂಗ್ಲಾವನ್ನು ಕಾಪಾಡಿದ್ದ ನಾಯಕಿ

## ಸೇನಾಧಿಕಾರಿಗಳ ಆಕ್ರಮಣದಿಂದ ಕುಟುಂಬವನ್ನು ಕಳೆದುಕೊಂಡಿದ್ದ ಶೇಖ್ ಹಸೀನಾ ಬೆಳೆದ ಹಾದಿ

**ಢಾಕಾ:** ಬಾಂಗ್ಲಾದೇಶದಲ್ಲಿ ರಾಜಕೀಯ ಅರಾಜಕತೆ ತಲೆದೋರಿದೆ. ಒಂದು ಕಾಲದಲ್ಲಿ ಬಾಂಗ್ಲಾವನ್ನು ಸೇನಾ ಆಳ್ವಿಕೆಯಿಂದ ಕಾಪಾಡಿದ್ದ ಶೇಖ್ ಹಸೀನಾ, ಪ್ರಧಾನಿ ಸ್ಥಾನಕ್ಕೆ ರಾಜೀನಾಮೆ ನೀಡಿ, ಜೀವ ಉಳಿಸಿಕೊಳ್ಳಲು ಪರಾರಿಯಾಗಿದ್ದಾರೆ. ಇದರೊಂದಿಗೆ ಅಲ್ಲಿ ಸೇನಾ ಆಡಳಿತ ಅಸ್ತಿತ್ವಕ್ಕೆ ಬರಲು ಅವಕಾಶ ಸಿಕ್ಕಂತಾಗಿದೆ.

**ಯಾರಿದು ಶೇಖ್ ಹಸೀನಾ?**



ನಾಗರಿಕ ಸೇವೆಗಳ ಉದ್ಯೋಗ ಕೋಟಾ ವಿರುದ್ಧ ವಿಶ್ವವಿದ್ಯಾಲಯ ವಿದ್ಯಾರ್ಥಿಗಳ ನೇತೃತ್ವದಲ್ಲಿ ಸಣ್ಣದಾಗಿ ಆರಂಭವಾದ ಪ್ರತಿಭಟನೆ, ಬೃಹತ್ ಸ್ವರೂಪ ಪಡೆದುಕೊಂಡಿದೆ. ಅದು ಹಿಂಸಾಚಾರಕ್ಕೆ ತಿರುಗಿ 300ಕ್ಕೂ ಅಧಿಕ ಮಂದಿಯ ಸಾವಿಗೆ ಕಾರಣವಾಗಿದೆ. ತಮ್ಮ ಈಗಿನ ಸತತ 15 ವರ್ಷಗಳ ಆಡಳಿತದಲ್ಲಿ ಶೇಖ್ ಹಸೀನಾ ಅತ್ಯಂತ ಕೆಟ್ಟ ಸನ್ನಿವೇಶ ಎದುರಿಸಿದ್ದಾರೆ. ಇದು ಅವರ ರಾಜೀನಾಮೆಯಲ್ಲಿ ಅಂತ್ಯವಾಗಿದೆ. ಒಂದೂವರೆ ಎರಡು ತಿಂಗಳಿನಲ್ಲಿಯೇ ಇಡೀ ದೇಶದ ಚಿತ್ರಣ ಬದಲಾಗಿದೆ. ಈ ಪ್ರತಿಭಟನೆ ಆರಂಭದಲ್ಲಿ ಶಾಂತಿಯುತವಾಗಿತ್ತು. ಆದರೆ ಪೊಲೀಸರು ಹಾಗೂ ಸರ್ಕಾರದ ಪರ ವಿದ್ಯಾರ್ಥಿಗಳ ಯಾವಾಗ ಪ್ರತಿಭಟನಾನಿರತರ ಮೇಲೆ ದಾಳಿ ನಡೆಸಿದರೋ, ಅದರ ಬಳಿಕ ಸಂಪೂರ್ಣ ಸ್ವರೂಪವೇ ಬದಲಾಗಿದೆ. ಬೀದಿ ಬೀದಿಗಳಲ್ಲಿ ಹಿಂಸಾಚಾರಗಳು ನಡೆದಿವೆ. ಮೀಸಲಾತಿ ಪ್ರಮಾಣವನ್ನು ಶೇ .5ಕ್ಕೆ ಇಳಿಸಿ ಸುಪ್ರೀಂ ಕೋರ್ಟ್ ಆದೇಶ ಹೊರಡಿಸಿದ ಬಳಿಕವೂ ಅವರ ಆಕ್ರೋಶ ತಣಿದಿರಲಿಲ್ಲ. 76 ವರ್ಷದ ಹಸೀನಾ ಅವರು ಜನವರಿಯಲ್ಲಿ ಪ್ರಧಾನಿಯಾಗಿ ಐದನೇ ಅವಧಿಗೆ ಪ್ರಮಾಣವಚನ ಸ್ವೀಕರಿಸಿದ್ದರು. ಚುನಾವಣೆಯು ಮುಕ್ತ ಹಾಗೂ ನ್ಯಾಯಸಮ್ಮತವಾಗಿಲ್ಲ ಎಂದು ಆರೋಪಿಸಿ ವಿರೋಧ ಪಕ್ಷಗಳು ಅದನ್ನು ಬಹಿಷ್ಕರಿಸಿದ್ದವು. ಆಗ ಹಸೀನಾ ಅವರು ಮುಖ್ಯ ವಿರೋಧ ಪಕ್ಷವನ್ನು 'ಭಯೋತ್ಪಾದನಾ ಸಂಘಟನೆ' ಎಂದು ಟೀಕಿಸಿದ್ದರು.

ಶೇಖ್ ಹಸೀನಾ, ಬಾಂಗ್ಲಾದೇಶ ಸ್ವಾತಂತ್ರ್ಯ ಹೋರಾಟವನ್ನು ಮುನ್ನಡೆಸಿದ್ದ ಕ್ರಾಂತಿಕಾರಿ ನಾಯಕ, ಮಾಜಿ ಪ್ರಧಾನಿ ಶೇಖ್ ಮುಜೀಬುರ್ ರೆಹಮಾನ್ ಅವರ ಮಗಳು.

### ಶೇಖ್ ಹಸೀನಾ ಆಸ್ತಿ ಎಷ್ಟು?

**2024ರ ಚುನಾವಣೆ ಸಂದರ್ಭದ ಮಾಹಿತಿ ಪ್ರಕಾರ ಶೇಖ್ ಹಸೀನಾ 1550 ಕೋಟಿ ರೂ ಮೊತ್ತದ ಆಸ್ತಿ ಹೊಂದಿದ್ದಾರೆ. 134 ಕೋಟಿ ರೂ ವಾರ್ಷಿಕ ಆದಾಯ ಹೊಂದಿದ್ದು, 8 ಮಿಲಿಯನ್ ಡಾಲರ್ ಮೌಲ್ಯದ ಚಿನ್ನಾಭರಣ ಇರುವುದಾಗಿ ತಿಳಿಸಿದ್ದಾರೆ. 100ಕ್ಕೂ ಅಧಿಕ ರಿಯಲ್ ಎಸ್ಟೇಟ್ ಆಸ್ತಿಗಳು, 40 ಮಿಲಿಯನ್ ಡಾಲರ್ ವಿದೇಶಿ ನಗದು ಠೇವಣಿ, 25ಕ್ಕೂ ಹೆಚ್ಚು ಕಾರುಗಳ ಒಡತಿ ಅವರು. 151 ಕೋಟಿ ರೂ ಮೌಲ್ಯದ ರಿಯಲ್ ಎಸ್ಟೇಟ್ ಸಂಪತ್ತು ಅವರ ಬಳಿ ಇದೆ. ಬಾಂಗ್ಲಾದೇಶವಲ್ಲದೆ, ದುಬೈ ಮತ್ತು ಸಿಂಗಪುರಗಳಲ್ಲಿಯೂ ಅವರ ಆಸ್ತಿಗಳಿವೆ.**

**ಬದುಕಿನ ದುರಂತ:** 1975ರಲ್ಲಿ ಶೇಖ್ ಹಸೀನಾ ಅವರು 27 ವರ್ಷದವರಿದ್ದಾಗ ವಿದೇಶ ಪ್ರಯಾಣದಲ್ಲಿದ್ದರು. ಆಗ ಸೇನಾ ಅಧಿಕಾರಿಗಳು ಅವರ ತಂದೆ ಹಾಗೂ ಪ್ರಧಾನಿ ಶೇಖ್ ಮುಜೀಬುರ್ ರೆಹಮಾನ್ ಅವರನ್ನು ಹತ್ಯೆ ಮಾಡಿದ್ದರು. ಅಷ್ಟೇ ಅಲ್ಲ ಹಸೀನಾ ಅವರ ತಾಯಿ, ಮೂವರು ಸಹೋದರರು ಕೂಡ ದಂಗೆಯಲ್ಲಿ ಬಲಿಯಾಗಿದ್ದರು. ಇದರಿಂದಾಗಿ ಹಸೀನಾ ಸ್ವದೇಶಕ್ಕೆ ಮರಳಲಿಲ್ಲ.

**2009ರಿಂದ ಸತತ 15 ವರ್ಷ ಆಡಳಿತ ನಡೆಸಿದ್ದ ಬಾಂಗ್ಲಾದೇಶದ ಅವಾಮಿ ಲೀಗ್ ನಾಯಕಿ ಶೇಖ್ ಹಸೀನಾ ಅವರು ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಿದ್ದಾರೆ. ಅಲ್ಲೀಗ ಮಧ್ಯಂತರ ಸರ್ಕಾರ ರಚಿಸುವುದಾಗಿ ಸೇನೆ ಹೇಳಿದೆ. ಹಸೀನಾ ಅವರು ಭಾರತದಲ್ಲಿ ರಾಜಾಶ್ರಯ ಪಡೆಯುವ ಸಾಧ್ಯತೆ ಅಧಿಕ. 1975ರಲ್ಲಿ ಕೂಡ ಇದೇ ರೀತಿಯ ಸನ್ನಿವೇಶ ಸೃಷ್ಟಿಯಾಗಿತ್ತು. ಆದರೆ ಅದು ಹಸೀನಾ ಅವರ ಜೀವನದ ಘೋರ ದುರಂತದ ಕ್ಷಣ. ಆಗ ಅವರಿಗೆ ಇಂದಿರಾ ಗಾಂಧಿ ಆಶ್ರಯ ನೀಡಿದ್ದರು.**

**ರಾಜಕೀಯ ಸಂಘರ್ಷ:** ಸೇನಾ ಸರ್ವಾಧಿಕಾರಿ ಹುಸೇನ್ ಮುಹಮ್ಮದ್ ಎರ್ಷಾದ್ ಅವರನ್ನು ಪದಚ್ಯುತಗೊಳಿಸಲು 1990ರಲ್ಲಿ ಖಲೀದಾ ಜಿಯಾ ಅವರ ಬಾಂಗ್ಲಾದೇಶ ನ್ಯಾಷನಲಿಸ್ಟ್ ಪಕ್ಷದ ಜತೆ (ಬಿ ಎನ್‌ಪಿ) ಹಸೀನಾ ಕೈ ಜೋಡಿಸಿದರು. ಆದರೆ ಈ ಮೈತ್ರಿ ಹೆಚ್ಚು ಸಮಯ ಬಾಳಲಿಲ್ಲ. ಬಾಂಗ್ಲಾದೇಶ ರಾಜಕಾರಣದಲ್ಲಿ ಅವರ ವೈರತ್ವ ಶುರುವಾಗಿದ್ದೇ ಇಲ್ಲಿಂದ. 1996ರಲ್ಲಿ ಶೇಖ್ ಹಸೀನಾ ಪ್ರಧಾನಿಯಾಗಿ ಆಯ್ಕೆಯಾದರು. ಐದು ವರ್ಷಗಳ ಬಳಿಕ ಖಾಲಿದಾ ಜಿಯಾ ಅಧಿಕಾರಕ್ಕೇರಿದರು.

ಹಸೀನಾ ಅವರಿಗೆ ಪ್ರಬಲ ಎದುರಾಳಿಯಾಗಿದ್ದ ಜಿಯಾಗೆ ಭ್ರಷ್ಟಾಚಾರ ಪ್ರಕರಣದಲ್ಲಿ 2018ರಲ್ಲಿ 18 ವರ್ಷಗಳ ಸೆರವಾಸ ವಿಧಿಸಲಾಗಿದೆ.

ತೀವ್ರ ಅನಾರೋಗ್ಯದಿಂದ ಬಳಲುತ್ತಿರುವ 78 ವರ್ಷದ ಜಿಯಾ, ರಾಜಕೀಯಕ್ಕೆ ಮರಳುವ ಸ್ಥಿತಿಯಲ್ಲಿಲ್ಲ. ಅವರ ಪಕ್ಷದ ಹಲವಾರು ನಾಯಕರು ಸಹ ಜೈಲಿನಲ್ಲಿದ್ದಾರೆ. ಈಗ ಹಸೀನಾ ಅವರ ರಾಜೀನಾಮೆ, ಪಲಾಯನದೊಂದಿಗೆ ಬಾಂಗ್ಲಾದ ರಾಜಕೀಯ ಇತಿಹಾಸ ಮತ್ತೆ ಪಲ್ಲಟಗೊಂಡಿದೆ.

**ಬಾಂಗ್ಲಾ ಅಭಿವೃದ್ಧಿ:** 1971ರಲ್ಲಿ ಭಾರತದ ಸಹಾಯದ ಮೂಲಕ ಪಾಕಿಸ್ತಾನದಿಂದ ಪ್ರತ್ಯೇಕಗೊಂಡು ರಚನೆಯಾದ ಬಾಂಗ್ಲಾದೇಶ, ಜಗತ್ತಿನ ಬಡದೇಶಗಳಲ್ಲಿ ಒಂದು. ಆದರೆ 2009ರ ನಂತರ ಹಸೀನಾ ಆಡಳಿತದಲ್ಲಿ ಅದು ಸಾಕಷ್ಟು ಬದಲಾವಣೆಗಳನ್ನು ಕಂಡಿದೆ. ವಾರ್ಷಿಕ ಸರಾಸರಿ ಶೇ.6ರ ಪ್ರಗತಿ ಕಂಡಿರುವ ಬಾಂಗ್ಲಾ, 2021ರ ನಂತರ ಭಾರತಕ್ಕಿಂತಲೂ ಅಧಿಕ ತಲಾದಾಯ ಹೊಂದಿದ ಸಾಧನೆ ಮಾಡಿದೆ. ದೇಶದ ಶೇ 95ಕ್ಕೂ ಅಧಿಕ ಜನಸಂಖ್ಯೆಗೆ ಈಗ ವಿದ್ಯುತ್ ಸಂಪರ್ಕ ದೊರಕಿದೆ. ಬಡತನ ಮಟ್ಟದಲ್ಲಿಯೂ ಗಣನೀಯ ಇಳಿಕೆ ಕಂಡಿದೆ.

# ಮಿನಿ ನ್ಯೂಸ್

## ವಯನಾಡು ಪರಿಹಾರ ಶಿಬಿರದಲ್ಲಿದ್ದಾರೆ 2514 ಮಂದಿ

**ವಯನಾಡ್:** ಮಾರಣಾಂತಿಕ ಭೂಕುಸಿತ ಪ್ರಕರಣದಿಂದಾಗಿ 599 ಮಕ್ಕಳು ಮತ್ತು ಆರು ಗರ್ಭಿಣಿಯರು ಸೇರಿದಂತೆ 2,500 ಕ್ಕೂ ಹೆಚ್ಚು ಜನರು ಕೇರಳದ ವಯನಾಡಿನ ವಿವಿಧ ಪರಿಹಾರ ಶಿಬಿರಗಳಲ್ಲಿ ತಂಗಿದ್ದಾರೆ ಎಂದು ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಮುಖ್ಯಮಂತ್ರಿಗಳ ಕಚೇರಿ (ಸಿಎಂಒ) ಬಿಡುಗಡೆ ಮಾಡಿದ ಇತ್ತೀಚಿನ ಅಧಿಕೃತ ಅಂಕಿಅಂಶಗಳ ಪ್ರಕಾರ, ಭೂಕುಸಿತದಿಂದ ಪೀಡಿತ ಜನರು ತಂಗಿರುವ ಬೆಟ್ಟದ ಜಿಲ್ಲೆಯ ಮೆಪ್ಪಾಡಿ, ಇತರ ಗ್ರಾಮ ಪಂಚಾಯತ್‌ಗಳಲ್ಲಿ ಒಟ್ಟು 16 ರಕ್ಷಣಾ ಶಿಬಿರಗಳಿವೆ. 723 ಕುಟುಂಬಗಳಿಗೆ ಸೇರಿದ 2,514 ಜನರು ಶಿಬಿರಗಳಲ್ಲಿದ್ದಾರೆ. ಅವರಲ್ಲಿ 943 ಪುರುಷರು, 972 ಮಹಿಳೆಯರು ಮತ್ತು 599 ಮಕ್ಕಳು ಎಂದು ಸಿಎಂಒ ತಿಳಿಸಿದೆ.

ಪರಿಹಾರ ಶಿಬಿರದಲ್ಲಿರುವ ಒಟ್ಟು ಮಹಿಳೆಯರಲ್ಲಿ ಆರು ಮಂದಿ ಗರ್ಭಿಣಿಯಾಗಿದ್ದಾರೆ ಎಂದು ಅದು ಹೇಳಿದೆ. ಸರ್ಕಾರದ ಅಂಕಿಅಂಶಗಳ ಪ್ರಕಾರ, ಭೂಕುಸಿತಕ್ಕೆ ಬಲಿ ಯಾದವರ ಒಟ್ಟು 221 ದೇಹಗಳು ಮತ್ತು 166 ದೇಹದ ಭಾಗಗಳು ಪತ್ತೆಯಾವೆ. ಅಧಿಕಾರಿಗಳು ಅವರಲ್ಲಿ ಕೆಲವರನ್ನು ದೂರವಾಣಿ ಮೂಲಕ ಸಂಪರ್ಕಿಸಲು ಸಾಧ್ಯವಾದ ನಂತರ ಕಾಣೆಯಾದವರ ಸಂಖ್ಯೆ ಹಿಂದಿನ 206 ರಿಂದ 180 ಕ್ಕೆ ಇಳಿದಿದೆ ಎಂದು ತಿಳಿಸಿದ್ದಾರೆ.

## 370ನೇ ವಿಧಿ ರದ್ದಿಗೆ 5 ವರ್ಷ ಅಮರನಾಥ ಯಾತ್ರೆಗೆ ಬ್ರೇಕ್

**ಜಮ್ಮು:** ಕಣಿವೆಯಲ್ಲಿ 370 ನೇ ವಿಧಿಯನ್ನು ರದ್ದುಗೊಳಿಸಿದ ಐದನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಮುಂಜಾಗ್ರತಾ ಕ್ರಮವಾಗಿ ಯಾವುದೇ ಹೊಸ ಅಮರನಾಥ ಯಾತ್ರ ಯಾತ್ರಿಗಳಿಗೆ ಇಲ್ಲಿನ ಭಗವತಿ ನಗರ ಮೂಲ ಶಿಬಿರದಿಂದ ಕಾಶೀರಕ್ಕೆ ತೆರಳಲು ಅನುಮತಿ ನೀಡಲಾಗಿಲ್ಲ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ವರ್ಷ ಇದುವರೆಗೆ 3,880 ಮೀಟರ್ ಎತ್ತರದ ಗುಹಾ ದೇಗುಲದಲ್ಲಿ 4.90 ಲಕ್ಷಕ್ಕೂ ಹೆಚ್ಚು ಯಾತ್ರಾರ್ಥಿಗಳು ಪೂಜೆ ಸಲ್ಲಿಸಿದ್ದಾರೆ. ಮುಂಜಾಗ್ರತಾ ಕ್ರಮವಾಗಿ ದಿನದ ಮಟ್ಟಿಗೆ ಯಾತ್ರೆಯನ್ನು ಸ್ಥಗಿತಗೊಳಿಸಲಾದೆ. ಸೋಮವಾರ ಜಮುವಿನಿಂದ ಕಾಶೀರಕ್ಕೆ ಯಾವುದೇ ಹೊಸ ಬ್ಯಾಚ್ ಅನ್ನು ಅನುಮತಿಸಲಾಗಿಲ್ಲ ಎಂದು ಅಧಿಕಾರಿಯೊಬ್ಬರು ಪಿಟಿಐಗೆ ತಿಳಿಸಿದ್ದಾರೆ. 370 ನೇ ವಿಧಿಯನ್ನು ರದ್ದುಗೊಳಿಸಿದ ಐದನೇ ವಾರ್ಷಿಕೋತ್ಸವದ ಹಿನ್ನೆಲೆಯಲ್ಲಿ ಆಡಳಿತವು ಈ ಕ್ರಮವನ್ನು ತೆಗೆದುಕೊಂಡಿದೆ. ನಗರದಲ್ಲಿ ಭದ್ರತೆಯನ್ನು ಹೆಚ್ಚಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

2019 ರಂದು, ಕೇಂದ್ರವು ಸಂವಿಧಾನದ 370 ನೇ ವಿಧಿಯನ್ನು ರದ್ದು ಗೊಳಿಸಿತು, ಇದು ಹಿಂದಿನ ಜಮು ಮತ್ತು ಕಾಶೀರ ರಾಜ್ಯಕ್ಕೆ ವಿಶೇಷ ಸ್ಥಾನಮಾನವನ್ನು ನೀಡಿತ್ತು ಮತ್ತು ಅದನ್ನು ಎರಡು ಕೇಂದ್ರಾಡಳಿತ ಪ್ರದೇಶಗಳಾಗಿ ವಿಂಗಡಿಸಿತು ಜಮು ಮತ್ತು ಕಾಶೀರ ಮತ್ತು ಲಡಾಖ್ ಎಂದು ನಾಮಕರಣ ಮಾಡಲಾಗಿತ್ತು.

## ಹೈಟೆನ್ಷನ್ ಓವರ್‌ಹೆಡ್ ಸ್ಪರ್ಶಿಸಿ 9 ಕನ್ವರ್ ಯಾತ್ರಿಕರ ಸಾವು

**ಹಾಜಿಪುರ:** ಬಿಹಾರದ ವೈಶಾಲಿ ಜಿಲ್ಲೆಯಲ್ಲಿ ಹೈಟೆನ್ಷನ್ ಓವರ್‌ಹೆಡ್ ತಂತಿಯ ಸ್ಪರ್ಶದಿಂದ ಕನಿಷ್ಠ ಒಂಬತ್ತು ಕನ್ವರ್ ಯಾತ್ರಿಕರು ವಿದ್ಯುತ್ ಸ್ಪರ್ಶದಿಂದ ಸಾವನ್ನಪ್ಪಿದ್ದಾರೆ ಮತ್ತು ಇತರ ಮೂವರು ಗಾಯಗೊಂಡಿದ್ದಾರೆ ಎಂದು ಹಿರಿಯ ಅಧಿಕಾರಿಯೊಬ್ಬರು ತಿಳಿಸಿ ದ್ದಾರೆ. ಮಧ್ಯರಾತ್ರಿಯಲ್ಲಿ ಕೈಗಾರಿಕಾ ಪೊಲೀಸ್ ಠಾಣೆ ವ್ಯಾಪ್ತಿ ಯ ಸುಲ್ತಾನ್‌ಪುರ ಗ್ರಾಮದಲ್ಲಿ ಈ ಘಟನೆ ನಡೆದಿದೆ. ಈ ಬಗ್ಗೆ ತನಿಖೆ ನಡೆಸುತ್ತಿರುವ ಅಧಿಕಾರಿಗಳು, ಯಾರದ್ದಾದರೂ ಲೋಪ ಕಂಡುಬಂದಲ್ಲಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ. ವೈಶಾಲಿ ಜಿಲ್ಲೆಯ ಇಂಡಸ್ಟ್ರಿಯಲ್ ಪೊಲೀಸ್ ಠಾಣೆ ವ್ಯಾಪ್ತಿಯ ಸುಲ್ತಾನ್‌ಪುರ ಗ್ರಾಮದಲ್ಲಿ ಹೈ ಟೆನ್ಷನ್ ಓವರ್‌ಹೆಡ್ ವೈರ್ ಅವರ ವಾಹನದ ಮೇಲೆ ಬಿದ್ದಿದ್ದರಿಂದ ಒಂಬತ್ತು ಯಾತ್ರಾರ್ಥಿಗಳು ಸಾವನ್ನ ಪ್ಪಿದ್ದಾರೆ ಮತ್ತು ಮೂವರು ತೀವ್ರ ಗಾಯಗೊಂಡಿದ್ದಾರೆ.

ಮಧ್ಯರಾತ್ರಿಯಲ್ಲಿ ಕನ್ವಾರಿಯರು ಜಲಾಭಿಷೇಕ ಮಾಡಲು ಸೋನೆಪುರದ ಬಾಬಾ ಹರಿಹರನಾಥ ದೇವಸ್ಥಾನಕ್ಕೆ ಹೋಗುತ್ತಿದ್ದಾಗ ಈ ಘಟನೆ ನಡೆದಿದೆ ಎಂದು ಹಾಜಿಪುರ-ಸದರ್‌ನ ಉಪವಿಭಾಗಾಧಿಕಾರಿ ರಾಮಬಾಬು ಬೈತಾ ಸುದ್ದಿಗಾರರಿಗೆ ತಿಳಿಸಿದರು. ಘಟನೆಯಲ್ಲಿ ಎಂಟು ಮಂದಿ ಸಾವನ್ನಪ್ಪಿದ್ದಾರೆ ಎಂದು ಬೈತಾ ಈ ಹಿಂದೆ ಹೇಳಿದ್ದರು. ಗಾಯಾಳುಗಳನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರ ಸ್ಥಿತಿ ಸ್ಥಿರವಾಗಿದೆ ಎಂದು ಹೇಳಲಾಗಿದೆ. ಮತದೇಹಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದ್ದು, ತನಿಖೆ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

## ಕಾಶ್ಮೀರಕ್ಕೆ ನೀಡಲಾಗಿದ್ದ ಸ್ಥಾನಮಾನ ಹಿಂಪಡೆದಿದ್ದು ಐತಿಹಾಸಿಕ ಕ್ಷಣ

**ನವದೆಹಲಿ:** ಸಂವಿಧಾನದ 370ನೇ ವಿಧಿಯಡಿ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾಗಿದ್ದ ವಿಶೇಷ ಸ್ಥಾನಮಾನವನ್ನು ಹಿಂಪಡೆದಿದ್ದು, ದೇಶದ ಐತಿಹಾಸಿಕ ಕ್ಷಣ ಎಂದು ಪ್ರಧಾನಿ ನರೇಂದ್ರ ಮೋದಿ ಸೋಮವಾರ ಹೇಳಿದ್ದಾರೆ. ಈ ಸಂಬಂಧ ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಹಂಚಿಕೊಂಡಿರುವ ಅವರು, 'ಜಮ್ಮು, ಕಾಶ್ಮೀರ, ಲಡಾಖ್‌ನ ಜನರಿಗಾಗಿ ನಮ್ಮ ಸರ್ಕಾರವು ಕೆಲಸ ಮಾಡುತ್ತದೆ. ಮುಂಬರುವ ದಿನಗಳಲ್ಲಿ ಅವರ ಆಕಾಂಕ್ಷೆಗಳನ್ನು ಪೂರೈಸುವ ನಿಟ್ಟಿನಲ್ಲಿ ಕ್ರಮವಹಿಸುತ್ತೇವೆ' ಎಂದು ಭರವಸೆ ನೀಡಿದ್ದಾರೆ. ಸಂವಿಧಾನದ 370ನೇ ವಿಧಿಯಡಿ ಜಮ್ಮು ಮತ್ತು ಕಾಶ್ಮೀರಕ್ಕೆ ನೀಡಲಾದ ವಿಶೇಷ ಸ್ಥಾನಮಾನವನ್ನು ಹಿಂಪಡೆದ ಐದನೇ ವಾರ್ಷಿಕೋತ್ಸವನ್ನು ಉದ್ದೇಶಿಸಿ ಪ್ರಧಾನಿ ಮಾತನಾಡಿದ್ದಾರೆ. ಸಂವಿಧಾನ ರಚಿಸಿದ ಮಹಾನ್ ವ್ಯಕ್ತಿಗಳ ಆಶಯದೊಂದಿಗೆ ಇಲ್ಲಿನ ಜನರ ಅಭ್ಯುದಾಯಕ್ಕಾಗಿ, ಸಮಾನತೆಯ ದೃಷ್ಟಿಕೋನದಡಿ ಈ ವಿಶೇಷ ಸ್ಥಾನಮಾನವನ್ನು ಹಿಂಪಡೆಯಲಾಯಿತು. ಇದರಿಂದಾಗಿ ಮಹಿಳೆಯರು, ಯುವಕರು, ಬುಡಕಟ್ಟು ಸಮುದಾಯವರಿಗೆ ಭದ್ರತೆ, ಗೌರವ, ಅಭಿವೃದ್ಧಿಯ ಆಶಾಕಿರಣ ಮೂಡಿತು ಎಂದು ಮೋದಿ ತಿಳಿಸಿದ್ದಾರೆ.

## ಫ್ಲ್ಯಾಟ್ ಗೋಡೆಯಲ್ಲಿ ಪಾಕಿಸ್ತಾನ ಪರ ಬರಹ: ವ್ಯಕ್ತಿಯ ಬಂಧನ

**ನವದೆಹಲಿ:** ಫ್ಲ್ಯಾಟ್‌ನ ಗೋಡೆಯಲ್ಲಿ ಪಾಕಿಸ್ತಾನ ಪರ ಘೋಷಣೆ ಬರೆದ ವ್ಯಕ್ತಿಯನ್ನು ದೆಹಲಿ ರೋಹಿಣಿ ಪ್ರದೇಶದಲ್ಲಿ ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ರೋಹಿಣಿಯ ಅವಂತಿಕ- ಸಿ ಬ್ಲಾಕ್‌ನ ನಿವಾಸಿ ತನ್ನ ಫ್ಲ್ಯಾಟ್ ಗೋಡೆಯಲ್ಲಿ ವ್ಯಕ್ತಿಯೊಬ್ಬ ಪಾಕಿಸ್ತಾನ ಪರ ಘೋಷಣೆ ಬರೆದಿದ್ದಾನೆ ಎನ್ನುವ ಮಾಹಿತಿ ಬಂತು. ಪ್ರಾಥಮಿಕ ಮಾಹಿತಿ ಪ್ರಕಾರ ಆತ ಮಾನಸಿಕ ಅಸ್ವಸ್ಥನಾಗಿದ್ದು, ಏಕಾಂಗಿಯಾಗಿ ವಾಸವಿದ್ದ' ಎಂದು ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪಾಕಿಸ್ತಾನ ಅಥವಾ ಇನ್ಯಾವುದೇ ಸಂಘಟನೆ ಜೊತೆಗೆ ವ್ಯಕ್ತಿಗೆ ಸಂಬಂಧ ಇದೆಯೇ ಎನ್ನುವುದರ ಬಗ್ಗೆ ನಾವು ತನಿಖೆ ನಡೆಸಲಿದ್ದೇವೆ ಎಂದು ಪೊಲೀಸರು ಹೇಳಿದ್ದಾರೆ.

# ಬೌಲಿಂಗ್‌ನಲ್ಲೂ ರೋಹಿತ್ ವಿಶೇಷ ದಾಖಲೆ

ಪ್ರಸ್ತುತ ಕೊಲಂಬೊದಲ್ಲಿ ಭಾರತ ಹಾಗೂ ಶ್ರೀಲಂಕಾ ನಡುವೆ ಎರಡನೇ ಏಕದಿನ ಪಂದ್ಯ ನಡೆಯುತ್ತಿದೆ. ಈ ಪಂದ್ಯದಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ಶ್ರೀಲಂಕಾ ತಂಡ ನಿಗದಿತ 50 ಓವರ್‌ಗಳಲ್ಲಿ 9 ವಿಕೆಟ್ ಕಳೆದುಕೊಂಡು 240 ರನ್ ಕಲೆಹಾಕಿತು. ಇನ್ನು ಇದೇ ಪಂದ್ಯದಲ್ಲಿ ಎರಡು ಓವರ್ ಬೌಲ್ ಮಾಡಿದ ನಾಯಕ ರೋಹಿತ್ ಶರ್ಮಾ ವಿಶೇಷ ದಾಖಲೆಯನ್ನು ನಿರ್ಮಿಸಿದರು.

ಆರಂಭಿಕನಾಗಿ ಬ್ಯಾಟಿಂಗ್‌ಗೆ ಹೆಸರುವಾಸಿಯಾಗಿರುವ ನಾಯಕ ರೋಹಿತ್ ಶರ್ಮಾ, ಶ್ರೀಲಂಕಾ ವಿರುದ್ಧದ ಎರಡನೇ ಏಕದಿನ ಪಂದ್ಯದಲ್ಲಿ ಮೊದಲು 39ನೇ ಓವರ್ ಬೌಲ್ ಮಾಡಿದರು. ಈ ಓವರ್‌ನಲ್ಲಿ ಅವರು 6 ರನ್ ನೀಡಿದರು. ಇದಾದ ನಂತರ ರೋಹಿತ್ 41ನೇ ಓವರ್ ಬೌಲ್ ಮಾಡಿ 5 ರನ್ ಬಿಟ್ಟುಕೊಟ್ಟರು. ರೋಹಿತ್ ಅವರ ಸ್ಪಿನ್ ಬೌಲಿಂಗ್ ನೋಡಿದ ಅಭಿಮಾನಿಗಳು ಕೂಡ ಖುಷಿ ಪಟ್ಟರು.

ಈ ಪಂದ್ಯದಲ್ಲಿ ಎರಡು ಓವರ್ ಬೌಲ್ ಮಾಡುವುದರೊಂದಿಗೆ ರೋಹಿತ್ ಶರ್ಮಾ ತಮ್ಮ ಹೆಸರಿನಲ್ಲಿ ದಾಖಲೆ ಕೂಡ ಬರೆದರು. 37 ವರ್ಷ 96 ದಿನಗಳಲ್ಲಿ ಏಕದಿನದಲ್ಲಿ ಬೌಲಿಂಗ್ ಮಾಡಿದ ರೋಹಿತ್ ಶರ್ಮಾ ಟೀಂ ಇಂಡಿಯಾ ಪರ ಏಕದಿನದಲ್ಲಿ ಬೌಲಿಂಗ್ ಮಾಡಿದ ಮೂರನೇ ಅತ್ಯಂತ ಹಿರಿಯ ಸ್ಪಿನ್ನರ್ ಎನಿಸಿಕೊಂಡಿದ್ದಾರೆ. ಇದಲ್ಲದೆ ಈ ವಿಷಯದಲ್ಲಿ ರವಿಚಂದ್ರನ್ ಅಶ್ವಿನ್ ಅವರನ್ನು ಹಿಂದಿಕ್ಕಿದ್ದಾರೆ. ಅಶ್ವಿನ್ ತಮ್ಮ 37 ವರ್ಷ 21 ದಿನಗಳ ವಯಸ್ಸಿನಲ್ಲಿ ಈ ದಾಖಲೆಯನ್ನು ತಮ್ಮ ಹೆಸರಿಗೆ ಹಾಕಿಕೊಂಡಿದ್ದರು. ಈ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿರುವ ಸಚಿನ್ ತೆಂಡೂಲ್ಕರ್ 38 ವರ್ಷ 329 ದಿನಗಳಲ್ಲಿ ಏಕದಿನ ಮಾದರಿಯಲ್ಲಿ ಬೌಲಿಂಗ್ ಮಾಡಿದ್ದರು. ಎರಡನೇ ಸ್ಥಾನದಲ್ಲಿರುವ ಶ್ರೀನಿವಾಸರಾಘವನ್ ವೆಂಕಟರಾಘವನ್ 37 ವರ್ಷ 351 ದಿನಗಳೊಂದಿಗೆ ಎರಡನೇ ಸ್ಥಾನದಲ್ಲಿದ್ದಾರೆ.

ಸುಮಾರು 9 ತಿಂಗಳ ಹಿಂದೆ ರೋಹಿತ್ ಕೊನೆಯ ಬಾರಿಗೆ ಏಕದಿನ ಪಂದ್ಯದಲ್ಲಿ ಬೌಲಿಂಗ್ ಮಾಡಿದ್ದರು. ಅವರು 12 ನವೆಂಬರ್ 2023 ರಂದು ಬೆಂಗಳೂರಿನಲ್ಲಿ ನಡೆದ ನೆದರ್ಲ್ಯಾಂಡ್ಸ್ ವಿರುದ್ಧದ ಪಂದ್ಯದಲ್ಲಿ ಬೌಲಿಂಗ್ ಮಾಡಿದ್ದರು. ಈ ವೇಳೆ ರೋಹಿತ್ 5 ಎಸೆತಗಳನ್ನು ಎಸೆದು ಒಂದು ವಿಕೆಟ್ ಪಡೆದಿದ್ದರು. ಏಕದಿನದಲ್ಲಿ ರೋಹಿತ್ ಬೌಲಿಂಗ್ ಬಗ್ಗೆ ಮಾತನಾಡುವುದಾದರೆ, ಅವರು 40 ಪಂದ್ಯಗಳ 264 ಇನ್ನಿಂಗ್ಸ್‌ಗಳಲ್ಲಿ 9 ವಿಕೆಟ್ ಪಡೆದಿದ್ದಾರೆ. ರೋಹಿತ್ ಟೆಸ್ಟ್‌ನಲ್ಲಿಯೂ ಬೌಲಿಂಗ್ ಮಾಡಿದ್ದು, ಈ ಮಾದರಿಯಲ್ಲಿ 2 ವಿಕೆಟ್ ಪಡೆದಿದ್ದಾರೆ. ಟಿ20ಯಲ್ಲಿ ಅವರ ಹೆಸರಿನಲ್ಲಿ ಒಂದು ವಿಕೆಟ್ ಇದೆ. ಇನ್ನು ಈ ಪಂದ್ಯದಲ್ಲಿ ಬೌಲಿಂಗ್ ಜೊತೆಗೆ ಬ್ಯಾಟಿಂಗ್‌ನಲ್ಲೂ ಕಮಾಲ್ ಮಾಡಿದ ರೋಹಿತ್ ಶರ್ಮಾ, ಮೊದಲ ಏಕದಿನ ಪಂದ್ಯದಂತೆ ಎರಡನೇ ಏಕದಿನ ಪಂದ್ಯದಲ್ಲಿ ಅರ್ಧಶತಕದ ಇನ್ನಿಂಗ್ಸ್ ಆಡಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 44 ಎಸೆತಗಳನ್ನು ಎದುರಿಸಿದ ರೋಹಿತ್ 5 ಬೌಂಡರಿ ಹಾಗೂ 4 ಸಿಕ್ಸರ್ ಸಹಿತ 64 ರನ್‌ಗಳ ಸ್ಫೋಟಕ ಇನ್ನಿಂಗ್ಸ್ ಕಟ್ಟಿದರು.



**ಬೌಲಿಂಗ್ ನಲ್ಲೂ ಕಮಾಲ್**

# ಗಂಭೀರ್ ಪ್ರಯೋಗಗಳೇ ಟೀಂ ಇಂಡಿಯಾ ಸೋಲಿಗೆ ಕಾರಣವೇ: ಮುಖ್ಯ ಕೋಚ್ ಎಡವಿದ್ದೆಲ್ಲಿ

ಟೀಂ ಇಂಡಿಯಾದ ಸೋಲಿಗೆ ನೂತನ ಕೋಚ್ ಗಂಭೀರ್ ಅವರ ಪ್ರಯೋಗಗಳೇ ಪ್ರಮುಖ ಕಾರಣ ಎಂಬುದು ಅನುಭವಿಗಳ ವಾದವಾಗಿದೆ. ಹಾಗಿದ್ದರೆ ಗಂಭೀರ್ ಎಡವಿದ್ದೆಲ್ಲಿ.

ಬ್ಯಾಟಿಂಗ್ ಕ್ರಮಾಂಕದ ಬದಲಾವಣೆಯ ಅಗತ್ಯ ಏನಿತ್ತು ಏಕದಿನ ಸರಣಿಯಲ್ಲಿ ಆಡಿರುವ ಎರಡೂ ಪಂದ್ಯಗಳಲ್ಲಿ ತಂಡದ ಸೋಲಿಗೆ ಪ್ರಮುಖ ಕಾರಣ ಮ್ಯಾನೇಜ್‌ಮೆಂಟ್ ತೆಗೆದುಕೊಂಡ ಬ್ಯಾಟಿಂಗ್ ಕ್ರಮಾಂಕದ ಬದಲಾವಣೆಯ ನಿರ್ಧಾರ. ಮೊದಲ ಏಕದಿನ ಪಂದ್ಯದಲ್ಲಿ ವಾಷಿಂಗ್ಟನ್ ಸುಂದರ್ ಐದನೇ ಕ್ರಮಾಂಕದಲ್ಲಿ ಕಣಕ್ಕಿಳಿದಿದ್ದರು. ಆದರೆ ಸುಂದರ್ ಕೇವಲ 5 ರನ್ ಗಳಿಸಿ ಪೆವಿಲಿಯನ್ ಸೇರಿಕೊಂಡರು. ಇನ್ನು ಎರಡನೇ ಪಂದ್ಯದಲ್ಲಿ ಇದೇ ತಪ್ಪು ಮಾಡಿದ ನಾಯಕ ಮತ್ತು ಕೋಚ್ ಶಿವಂ ದುಬೆ ಅವರನ್ನು ನಾಲ್ಕನೇ ಕ್ರಮಾಂಕದಲ್ಲಿ ಬ್ಯಾಟಿಂಗ್‌ಗೆ ಕಳುಹಿಸಿದರು. ಈ ಪಂದ್ಯದಲ್ಲಿ ದುಬೆಗೆ ಖಾತೆ ತೆರೆಯಲೂ ಸಾಧ್ಯವಾಗಲಿಲ್ಲ.



ಕೊಲಂಬೊದ ಸ್ಪಿನ್ ಸ್ನೇಹಿ ಪಿಚ್‌ನಲ್ಲಿ ಅನುಭವಿಗಳೇ ರನ್ ಕಲೆಹಾಕಲು ಕಷ್ಟಪಡುತ್ತಿರುವಾಗ ಅನಾನುಭವಿಗಳಾದ ದುಬೆ ಹಾಗೂ ಸುಂದರ್ ಅವರಿಗೆ ಮುಂಬಡ್ತಿ ನೀಡುವ ಅಗತ್ಯ ಏನಿತ್ತು. ಎಡಗೈ ಮತ್ತು ಬಲಗೈ ಬ್ಯಾಟ್ಸ್‌ಮನ್‌ಗಳು ಕ್ರೀಸ್‌ನಲ್ಲಿದ್ದರೆ ಸಿಂಗಲ್ಸ್‌ಗಳನ್ನು ಸುಲಭವಾಗಿ ತೆಗೆಯಬಹುದು ಎಂದು ಭಾವಿಸಿದ್ದೆ ಆದರೆ ಅದು ಸಾಧ್ಯವಾಗಲಿಲ್ಲ ಎಂದು ಎರಡನೇ ಪಂದ್ಯದ ನಂತರ ರೋಹಿತ್ ಶರ್ಮಾ ಹೇಳಿದ್ದರು. ಆದರೆ ಮೊದಲನೇ ಏಕದಿನದಲ್ಲಿ ಈ ನಿರ್ಧಾರದಿಂದ ಆದ ಪ್ರಮಾದದಿಂದ ರೋಹಿತ್ ಶರ್ಮಾ ಏಕೆ ಎಚ್ಚೆತ್ತುಕೊಳ್ಳಲಿಲ್ಲ.

# ಚರಂಡಿ ನೀರಿಗಿಂತ ಕಲುಷಿತ

## ಸೀನ್ ನದಿಯಲ್ಲಿ ಈಜಿದ ಸ್ಪರ್ಧಿಗೆ ಅನಾರೋಗ್ಯ

ಪ್ಯಾರಿಸ್ ಒಲಿಂಪಿಕ್ಸ್ ದಿನ ಕಳೆದಂತೆ ವಿವಾದಗಳ ಕೂಪವಾಗಿ ಮಾರ್ಪಡುತ್ತಿದೆ. ಅದರಲ್ಲಿ ಹೊಸ ಪ್ರಕರಣವೊಂದು ಬೆಳಕಿಗೆ ಬಂದಿದ್ದು, ಸೀನ್ ನದಿಯಲ್ಲಿ ಈಜಿದ ನಂತರ ಬೆಲ್ಜಿಯಂ ಆಟಗಾರ್ತಿ ಅನಾರೋಗ್ಯಕ್ಕೆ ಒಳಗಾಗಿದ್ದಾರೆ. ಇದರಿಂದಾಗಿ ಬೆಲ್ಜಿಯಂ ಇಡೀ ತಂಡ ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟದ ಮಿಶ್ರ ರಿಲೇ ಟ್ರಯಥ್ಲಾನ್‌ನಿಂದ ತನ್ನ ಹೆಸರನ್ನು ಹಿಂತೆಗೆದುಕೊಂಡಿದೆ. ವಾಸ್ತವವಾಗಿ ಮಹಿಳೆಯರ ಟ್ರಯಥ್ಲಾನ್ ಕ್ರೀಡೆಯಲ್ಲಿ ಭಾಗವಹಿಸಿದ್ದ ತನ್ನ ಆಟಗಾರ್ತಿ ಕ್ಲೇರ್ ಮೈಕೆಲ್ ಅನಾರೋಗ್ಯಕ್ಕೆ ಒಳಗಾಗಿದ್ದಾರೆ ಎಂದು ಬೆಲ್ಜಿಯಂ ಒಲಿಂಪಿಕ್ ಸಮಿತಿ ಹೇಳಿದೆ. ಇದರಿಂದಾಗಿ ಇಡೀ ತಂಡವು ಈಗ ರಿಲೇ ಟ್ರಯಥ್ಲಾನ್‌ನಿಂದ ಹಿಂದೆ ಸರಿಯಬೇಕಾಗಿದೆ ಎಂದು ಸಮಿತಿ ತಿಳಿಸಿದೆ. ಯುರೋಪಿಯನ್ ಚಾಂಪಿಯನ್‌ಶಿಪ್ ಮತ್ತು ವಿಶ್ವ ಚಾಂಪಿಯನ್‌ಶಿಪ್ ಸೇರಿದಂತೆ ಹಲವು ಸ್ಪರ್ಧೆಗಳಲ್ಲಿ ಪದಕ ಗೆದ್ದಿರುವ 35 ವರ್ಷದ ಬೆಲ್ಜಿಯಂ ಆಟಗಾರ್ತಿ ಮಿಚೆಲ್, ಟ್ರಯಥ್ಲಾನ್ ಕ್ರೀಡೆಯಲ್ಲಿ ಭಾಗವಹಿಸಿದ್ದರು. ಆದರೆ ಸೀನ್ ನದಿಯಲ್ಲಿ ನಡೆದ ಈ ಸ್ಪರ್ಧೆಯ ಬಳಿಕ ಅವರು ಅನಾರೋಗ್ಯಕ್ಕೆ ತುತ್ತಾಗಿದ್ದಾರೆ.


ಪ್ಯಾರಿಸ್ ಒಲಿಂಪಿಕ್ ಕ್ರೀಡಾಕೂಟದ ಸಂಘಟಕರು ಮೈಕೆಲ್ ಅವರ ಅನಾರೋಗ್ಯದ ಬಗ್ಗೆ ಯಾವುದೇ ಹೇಳಿಕೆಯನ್ನು ಇದುವರೆಗೂ ನೀಡಿಲ್ಲ. ಆದರೆ ಸೀನ್ ನದಿಯಲ್ಲಿ ಸ್ಪರ್ಧೆಯು ಪೂರ್ವನಿರ್ಧರಿತ ವೇಳಾ ಪಟ್ಟಿಯ ಪ್ರಕಾರ ನಡೆಯಲಿದೆ ಎಂದು ಸಂಘಟನಾ ಸಮಿತಿ ಹೇಳಿದೆ. ಒಲಿಂಪಿಕ್ಸ್ ಆರಂಭಕ್ಕೂ ಮುನ್ನವೇ ಸೀನ್ ನದಿಯ ನೀರಿನ ಗುಣಮಟ್ಟದ ಬಗ್ಗೆ ಮೊದಲಿನಿಂದಲೂ ಪ್ರಶ್ನೆಗಳು ಎತ್ತಿದ್ದವು. ಸ್ಪರ್ಧೆ ಶುರುವಾಗುವ ವೇಳೆಗೆ ನದಿಯ ನೀರಿನ ಗುಣಮಟ್ಟ ಸುಧಾರಿಸಲಿದೆ ಎಂದು ಸಂಘಕರು ಹೇಳಿದ್ದರು. ಆದರೆ ನಿರಂತರ ಮಳೆಯಿಂದಾಗಿ ನದಿ ಇನ್ನಷ್ಟು ಕಲುಷಿತಗೊಂಡಿದೆ. ಈ ಕಾರಣಕ್ಕಾಗಿಯೇ ಈ ಮೊದಲು ಟ್ರಯಥ್ಲಾನ್ ಅಭ್ಯಾಸ ಅವಧಿಯನ್ನು ರದ್ದುಗೊಳಿಸಲಾಗಿತ್ತು.




# ಚೊಚ್ಚಲ ಒಲಿಂಪಿಕ್ಸ್ ಚಿನ್ನಕ್ಕೆ ಮುತ್ತಿಟ್ಟ ಜೊಕೊವಿಚ್..!

ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಇಂದು ನಡೆದ ಪುರುಷರ ಟೆನಿಸ್ ಸಿಂಗಲ್ಸ್ ಫೈನಲ್ ಪಂದ್ಯದಲ್ಲಿ ಸೆರ್ಬಿಯಾದ ಟೆನಿಸ್ ಲೆಜೆಂಡ್ ನೊವಾಕ್ ಜೊಕೊವಿಚ್, ಸ್ಪೇನ್‌ನ ಕಾರ್ಲೋಸ್ ಅಲ್ಕರಾಝ್ ಅವರನ್ನು ಸೋಲಿಸುವ ಮೂಲಕ ತಮ್ಮ ಮೊದಲ ಒಲಿಂಪಿಕ್ಸ್ ಚಿನ್ನದ ಪದಕಕ್ಕೆ ಕೊರಳೊಡ್ಡಿದ್ದಾರೆ. ವಾಸ್ತವವಾಗಿ ಇದೇ ಕಾರ್ಲೋಸ್ ಅಲ್ಕರಾಝ್ ವಿರುದ್ಧ ಈ ಹಿಂದೆ ನಡೆದ ವಿಂಬಲ್ಡನ್ ಫೈನಲ್‌ನಲ್ಲಿ ಜೊಕೊವಿಚ್ ಸೋತಿದ್ದರು. ಆದರೀಗ ಒಲಿಂಪಿಕ್ಸ್‌ನಲ್ಲಿ ಅಲ್ಕರಾಝ್ ಅವರನ್ನು ಮಣಿಸುವ ಮೂಲಕ ಜೊಕೊವಿಚ್ ತಮ್ಮ ಹಳೆಯ ಸೋಲಿಗೆ ಸೇಡು ತೀರಿಸಿಕೊಂಡಿದ್ದಾರೆ. ನಡೆದ ರೋಚಕ ಪಂದ್ಯದಲ್ಲಿ ಜೊಕೊವಿಚ್ 7-6(3), 7-6(2) ಸೆಟ್‌ಗಳಿಂದ ಅಲ್ಕರಾಝ್‌ರನ್ನು ಸೋಲಿಸಿದರು. ಈ ಮೂಲಕ ಜೊಕೊವಿಕ್ ತಮ್ಮ ವೃತ್ತಿಜೀವನದಲ್ಲಿ ಮೊದಲ ಬಾರಿಗೆ ಒಲಿಂಪಿಕ್ ಚಿನ್ನದ ಪದಕ ಗೆದ್ದರೆ, ಇತ್ತ ಅಲ್ಕರಾಝ್ ತಮ್ಮ ಮೊದಲ ಒಲಿಂಪಿಕ್ ಚಿನ್ನದ ಪದಕದಿಂದ ವಂಚಿತರಾದರು.

**ಮೊದಲ ಚಿನ್ನದ ಪದಕ:** ಟೆನಿಸ್ ಲೋಕದಲ್ಲಿ ಇದುವರೆಗೆ 24 ಗ್ರ್ಯಾನ್ ಸ್ಲಾಮ್ ಪ್ರಶಸ್ತಿಗಳನ್ನು ಗೆದ್ದಿರುವ ಜೊಕೊವಿಚ್ ಒಲಿಂಪಿಕ್ ಪದಕಕ್ಕಾಗಿ ಬಹಳ ವರ್ಷ ಕಾಯಬೇಕಾಯಿತು.



ವಾಸ್ತವವಾಗಿ ಜೊಕೊವಿಚ್ ಈ ಹಿಂದೆ ನಡೆದಿದ್ದ ಮೂರು ಒಲಿಂಪಿಕ್ಸ್‌ನಲ್ಲಿ ಸೆಮಿಫೈನಲ್ ಸುತ್ತಿನಲ್ಲೇ ತಮ್ಮ ಪ್ರಯಣ ಅಂತ್ಯಗೊಳಿಸಿದ್ದರು. 2008 ರಲ್ಲಿ ನಡೆದಿದ್ದ ಬೀಜಿಂಗ್ ಒಲಿಂಪಿಕ್ಸ್‌ನಲ್ಲಿ ಆಂಡಿ ಮುರ್ರೆ ವಿರುದ್ಧ ಸೋತಿದ್ದ ಜೊಕೊವಿಚ್, 2012 ರಲ್ಲಿ ನಡೆದಿದ್ದ ಲಂಡನ್ ಒಲಿಂಪಿಕ್ಸ್‌ನಲ್ಲಿ ಅಲೆಕ್ಸಾಂಡರ್ ಜ್ವೆರೆವ್ ವಿರುದ್ಧ ಸೋತಿದ್ದರು. ಇನ್ನು ಕಳೆದ ಬಾರಿಯ ಅಂದರೆ 2020 ರಲ್ಲಿ ನಡೆದಿದ್ದ ಟೋಕಿಯೊ ಒಲಿಂಪಿಕ್ ಸೆಮಿಫೈನಲ್‌ನಲ್ಲಿ ಜೊಕೊವಿಚ್ ಅವರನ್ನು ರಫೆಲ್ ನಡಾಲ್ ಸೋಲಿಸಿದ್ದರು. ಆದಾಗ್ಯೂ 2008ರ ಬೀಜಿಂಗ್ ಒಲಿಂಪಿಕ್ಸ್‌ನಲ್ಲಿ ಜೊಕೊವಿಚ್ ಕಂಚಿನ ಪದಕ ಗೆಲ್ಲುವಲ್ಲಿ ಯಶಸ್ವಿಯಾಗಿದ್ದರು. ಹೀಗಾಗಿ ಈ ಬಾರಿಯ ಒಲಿಂಪಿಕ್ಸ್‌ನಲ್ಲೂ ಸೆಮಿಫೈನಲ್ ಎಂಬ ಅಡೆತಡೆಯನ್ನು ದಾಟುವುದು ಜೊಕೊವಿಚ್‌ಗೆ ದೊಡ್ಡ ಸವಾಲಾಗಿತ್ತು. ಕೊನೆಗೂ ಈ ಸವಾಲನ್ನು ಮೆಟ್ಟಿ ನಿಲ್ಲುವಲ್ಲಿ ಯಶಸ್ವಿಯಾಗಿದ್ದ ಜೊಕೊವಿಚ್, ಸೆಮಿಫೈನಲ್ ಪಂದ್ಯದಲ್ಲಿ ಇಟಲಿಯ ಲೊರೆಂಜೊ ಮುಸೆಟ್ಟಿ ಅವರನ್ನು ಸೋಲಿಸುವ ಮೂಲಕ ಮೊದಲ ಬಾರಿಗೆ ಒಲಿಂಪಿಕ್‌ನಲ್ಲಿ ಫೈನಲ್ ಪ್ರವೇಶಿಸಿದ್ದರು.

**ಕೊನೆಗೂ ಗೆದ್ದ ಜೊಕೊವಿಚ್:** ಇನ್ನು ಫೈನಲ್ ಪಂದ್ಯದ ಬಗ್ಗೆ ಹೇಳುವುದಾದರೆ.. ಈ ಮುಂಚೆಯೇ ನಿರೀಕ್ಷಿಸಿದಂತೆ ಇಬ್ಬರ ನಡುವೆ ತಲಾ ಒಂದು ಪಾಯಿಂಟ್‌ಗಾಗಿ ಕಠಿಣ ಹೋರಾಟ ನಡೆಯಿತು.

ಇದರಿಂದಾಗಿ ಮೊದಲ ಸೆಟ್ 94 ನಿಮಿಷಗಳ ಕಾಲ ಅಂದರೆ ಒಂದೂವರೆ ಗಂಟೆಗಳ ಕಾಲ ನಡೆಯಿತು. ಎರಡನೇ ಸೆಟ್‌ನಲ್ಲೂ ಇದೇ ರೀತಿ ಕಠಿಣ ಪೈಪೋಟಿ ಕಂಡುಬಂದಿದ್ದರಿಂದ ಈ ಸೆಟ್ ಕೂಡ 1 ಗಂಟೆ ಕಾಲ ನಡೆಯಿತು. ಅಂತಿಮವಾಗಿ ಎರಡೂ ಸೆಟ್‌ಗಳನ್ನು ಟೈ ಬ್ರೇಕರ್‌ನಲ್ಲಿ ನಿರ್ಧರಿಸಲಾಯಿತು. ಅಂತಿಮವಾಗು ಜೊಕೊವಿಚ್ ಎರಡೂವರೆ ಗಂಟೆಗಳ ನಡೆದ ಈ ಪಂದ್ಯವನ್ನು ಗೆಲ್ಲುವಲ್ಲಿ ಯಶಸ್ವಿಯಾದರು. ಜೊಕೊವಿಚ್ ಜಯ ಗಳಿಸಿದ ಕೂಡಲೇ, ಅಂಗಳದಲ್ಲಿ ಸಣ್ಣ ಮಗುವಿನಂತೆ ಜೋರಾಗಿ ಅಳಲು ಪ್ರಾರಂಭಿಸಿದರು.

# ನನ್ನ ಬದುಕಿನ ಶಕ್ತಿ ನೀವು ಪತಿಗೆ ಅದಿತಿ ಪ್ರಭುದೇವ ಲವ್ಲಿ ವಿಶ್

ಸ್ಯಾಂಡಲ್‌ವುಡ್ ನಟಿ ಅದಿತಿ ಪ್ರಭುದೇವ ಕಿರುತೆರೆಗೆ ಎಂಟ್ರಿ ಕೊಟ್ಟು ಸೆಕೆಂಡ್ ಇನ್ನಿಂಗ್ಸ್ ಶುರು ಮಾಡಿದ್ದಾರೆ. ದಾಂಪತ್ಯ ಜೀವನ ಮತ್ತು ಸಿನಿಮಾ ಬದುಕು ಎರಡನ್ನು ನಿಭಾಯಿಸಿಕೊಂಡು ಹೋಗ್ತಿದ್ದಾರೆ. ನನ್ನ ಬದುಕಿನ ಶಕ್ತಿ ನೀವು ಎಂದು ಪತಿಗೆ ಯಶಸ್‌ಗೆ ವಿಶೇಷವಾಗಿ ಶುಭಕೋರಿದ್ದಾರೆ.

ಪ್ರೀತಿಯ ಯಶು, ಹುಟ್ಟುಹಬ್ಬದ ಶುಭಾಶಯಗಳು. ನೀವೊಬ್ಬ ನಿಷ್ಕಲ್ಮಶ ಮನಸ್ಸಿನ ವ್ಯಕ್ತಿತ್ವದವರು. ಮೌನಕ್ಕೂ ಅರ್ಥವಿದೆ ಎಂದು ತಿಳಿಸಿ ಕೊಟ್ಟ ಪ್ರೀತಿಯ ಗೆಳೆಯ ನೀವು. ನನ್ನ ಬದುಕಿನ ಶಕ್ತಿ ನೀವು ಎಂದು ಅದಿತಿ ಪ್ರಭುದೇವ ಪೋಸ್ಟ್ ಮಾಡಿದ್ದಾರೆ. ಆ ದೇವರು ಪ್ರಪಂಚದ ಎಲ್ಲಾ ಸುಖವನ್ನು, ನೆಮ್ಮದಿಯನ್ನು ನಿಮಗೆ ನೀಡಲಿ ಕಂದ. ಹಾಗೆಯೇ ನಾವಿಬ್ರೂ ಯಾವಾಗಲೂ ಹೀಗೆ ಒಟ್ಟಿಗೆ ಕಷ್ಟ ಸುಖದಲ್ಲಿ ಒಂದಾಗಿ, ಜೊತೆಯಾಗಿ ಬೆಳೆದು ಸಾಧನೆ, ನೆಮ್ಮದಿಯತ್ತ ಹೆಜ್ಜೆ ಹಾಕೋಣ ಎಂದು ನಟಿ ಪತಿಗೆ ವಿಶ್ ಮಾಡಿದ್ದಾರೆ.

ನಿಮಗೆ ನೆನಪಿದೆಯಾ ಕಳೆದ ವರ್ಷ ಇದೇ ದಿವಸ ನೀವು ತಂದೆಯಾಗುವ ಸುದ್ದಿಯನ್ನು ನೀಡಿದೆ. ಈ ವರ್ಷ ನಾವು ಇಬ್ಬರಲ್ಲ ಮೂವರು. ಈ ವರ್ಷದ ನಿಮ್ಮ ಹುಟ್ಟುಹಬ್ಬಕ್ಕೆ ನಮ್ಮ ಮಗಳೇ ನಾನು ನಿಮಗೆ ನೀಡಿರುವ ಮುದ್ದಾದ ಉಡುಗೊರೆ. ಏನಂತೀರಾ ಎಲ್ಲಾದಕ್ಕೂ ಧನ್ಯವಾದಗಳು. ಹ್ಯಾಪಿ ಬರ್ತ್ಡೇ ಎಂದು ನಟಿ ಬರೆದುಕೊಂಡಿದ್ದಾರೆ. ಅಂದಹಾಗೆ, ಬಜಾರ್ ಸಿನಿಮಾ ನಟಿ ಅದಿತಿ 2022ರಲ್ಲಿ ಉದ್ಯಮಿ ಯಶಸ್ ಪಾಟ್ಲಾ ಜೊತೆ ಮದುವೆಯಾದರು. ಇದೀಗ ಮುದ್ದು ಮಗಳ ಆರೈಕೆಯಲ್ಲಿ ನಟಿ ಬ್ಯುಸಿಯಾಗಿದ್ದಾರೆ.





# ಅಮೆರಿಕದಿಂದ ಬಂದು ಉಪೇಂದ್ರ ಮನೆಗೆ ಮಾನ್ಯಾ ಭೇಟಿ

ಸ್ಯಾಂಡಲ್‌ವುಡ್ ನಟಿ ಮಾನ್ಯಾ ನಾಯ್ಡು ಸದ್ಯ ಅಮೆರಿಕದಲ್ಲಿ ನೆಲೆಸಿದ್ದಾರೆ. ಹಾಲಿಡೇ ಕಳೆಯಲು ಮಗಳ ಜೊತೆ ಭಾರತಕ್ಕೆ ಮರಳಿದ್ದಾರೆ. ಸದ್ಯ ಬೆಂಗಳೂರಿನಲ್ಲಿ ಉಪೇಂದ್ರ, ಶ್ರೀಮುರಳಿ, ಅನುಪ್ರಭಾಕರ್ ಮನೆಗೆ ಮಾನ್ಯಾ ಭೇಟಿ ಕೊಟ್ಟಿದ್ದಾರೆ. ಕನ್ನಡದ ಶಾಸ್ತ್ರಿ, ಶಂಭು ಸಿನಿಮಾದಲ್ಲಿ ನಟಿಸಿ ಗೆದ್ದಿದ್ದ ಮಾನ್ಯಾ, ಮದುವೆಯ ಬಳಿಕ ವಿದೇಶದಲ್ಲಿ ಸೆಟಲ್ ಆದರು. ಈಗ ಒಂದಷ್ಟು ವರ್ಷಗಳ ಬಳಿಕ ಭಾರತಕ್ಕೆ ಬಂದಿರುವ ಮಾನ್ಯಾ, ಸಿನಿಮಾರಂಗದ ತನ್ನ ಸ್ನೇಹಿತರನ್ನು ಭೇಟಿಯಾಗಿ ಸಂಭ್ರಮಿಸಿದ್ದಾರೆ. ಉಪೇಂದ್ರ ದಂಪತಿ ಮನೆಗೆ ಮಗಳೊಂದಿಗೆ ಮಾನ್ಯಾ ಭೇಟಿ ನೀಡಿ ಸಮಯ ಕಳೆದಿದ್ದಾರೆ.

ಇನ್ನೂ ಶ್ರೀಮುರಳಿ ಕುಟುಂಬದ ಜೊತೆ ಕೂಡ ಮಾನ್ಯಾ ಉತ್ತಮ ಒಡನಾಟ ಹೊಂದಿದ್ದಾರೆ. ಅವರ ಮನೆಗೆ ಭೇಟಿ ನೀಡಿ ಮಾನ್ಯಾ ಕಳೆದಿದ್ದಾರೆ. ಶ್ರೀಮುರಳಿ ಫ್ಯಾಮಿಲಿ ಭೋಜನ ಸವಿದಿದ್ದಾರೆ. ಇನ್ನೂ ಅನುಪ್ರಭಾಕರ್ ಮನೆಗೂ ನಟಿ ಭೇಟಿ ನೀಡಿ, ವರ್ಷ ಸಿನಿಮಾ ಚಿತ್ರೀಕರಣದ ಸಂದರ್ಭವನ್ನು ಸ್ಮರಿಸಿದ್ದಾರೆ.

ಅನುಪ್ರಭಾಕರ್ ಜೊತೆ ಮೊದಲು ಭೇಟಿಯಾಗಿದ್ದೆ ವರ್ಷ ಸಿನಿಮಾದ ಸೆಟ್‌ನಲ್ಲಿ ಎಂದು ಹೇಳುತ್ತಾ, ಅವರ ಮನೆಯಲ್ಲಿ ಕಳೆದ ಸುಂದರ ಫೋಟೋಗಳನ್ನು ನಟಿ ಹಂಚಿಕೊಂಡಿದ್ದಾರೆ.

ಮಾನ್ಯಾ ಅವರು ಸಾಲು ಸಾಲು ಕನ್ನಡ ಸಿನಿಮಾಗಳಲ್ಲಿ ನಟಿಸಿದ್ದರು. ಇಂಗ್ಲೆಂಡ್‌ನಲ್ಲಿ ಜನಿಸಿದ ಮಾನ್ಯಾ ಅವರ ಮಾತೃ ಭಾಷೆ ತೆಲುಗು.

ಅನೇಕ ಮಲಯಾಳಂ, ತೆಲುಗು ಸಿನಿಮಾಗಳಲ್ಲಿ ನಟಿಸಿದ ನಂತರದಲ್ಲಿ ಅವರು 2005ರಲ್ಲಿ ಕನ್ನಡ ಸಿನಿಮಾದಲ್ಲಿ ನಟಿಸಿದ್ದರು. ಆಗ ಅವರು ಕನ್ನಡ ಮಾತಾಡೋದನ್ನು ಕಲಿತಿದ್ದರು. ಈಗ ಅವರು ಮಗಳಿಗೂ ಕೂಡ ಕನ್ನಡ ಹೇಳಿಕೊಡುತ್ತಿದ್ದಾರೆ.



# ಬಾಕ್ಸಾಫೀಸ್‌ನಲ್ಲಿ ಉಲಾಜ್ ಕಳಪೆ ಕಲೆಕ್ಷನ್

**ಜಾನ್ವಿಗೆ ಮತ್ತೆ ಸೋಲು**

ಬಾಲಿವುಡ್ ನಟಿ ಜಾನ್ವಿ ಕಪೂರ್‌ಗೆ ಸಿನಿಮಾ ಅವಕಾಶ ಸಿಕ್ಕಿದ್ರೂ ಯಶಸ್ಸು ಕೈ ಹಿಡಿಯುತ್ತಿಲ್ಲ. ಬಹುನಿರೀಕ್ಷಿತ 'ಉಲಾಜ್' ಸಿನಿಮಾ ಇದೀಗ ಚಿತ್ರಮಂದಿರಲ್ಲಿ ಮಕಾಡೆ ಮಲಗಿದೆ. ಮತ್ತೆ ನಟಿ ಸೋಲಿನ ರುಚಿ ಕಂಡಿದ್ದಾರೆ. ಜಾನ್ವಿ ಕಪೂರ್ ನಟನೆಯ 'ಉಲಾಜ್' ಸಿನಿಮಾದ ಟ್ರೈಲರ್‌ನಿಂದ ಭಾರೀ ನಿರೀಕ್ಷೆ ಹೆಚ್ಚಿಸಿತ್ತು. ಆದರೆ ಆ.2ರಂದು ಉಲಾಜ್ ರಿಲೀಸ್ ನಂತರ ಅಭಿಮಾನಿಗಳಿಗೆ ಸಿನಿಮಾ ನೋಡಿ ನಿರಾಸೆ ಆಗಿದೆ. ಹಾಕಿದ ಬಂಡವಾಳಕ್ಕೆ ಅರ್ಧದಷ್ಟು ಗಳಿಕೆ ಮಾಡಿದಕ್ಕೂ ಉಲಾಜ್ ಚಿತ್ರ ಒದ್ದಾಡುತ್ತಿದೆ. 50 ಕೋಟಿ ರೂ. ಬಜೆಟ್‌ನಲ್ಲಿ ಈ ಸಿನಿಮಾ ನಿರ್ಮಾಣವಾಗಿದೆ.

ಇನ್ನೂ 'ಧಡಕ್' ಸಿನಿಮಾ ಮೂಲಕ ಜಾನ್ವಿ ಕಪೂರ್ ಬಾಲಿವುಡ್‌ಗೆ ಎಂಟ್ರಿ ಕೊಟ್ಟರು. ಈ ಚಿತ್ರ ಸಕ್ಸಸ್ ಕಂಡಿತ್ತು. ಆ ನಂತರ ಜಾನ್ವಿ ನಟಿಸಿದ ರೂಹಿ, ಗುಡ್ ಲಕ್ ಜೆರ್ರಿ, ಮಿಲಿ, ಮಿಸ್ಟರ್ ಮಿಸಸ್ ಮಾಹಿ ಸಿನಿಮಾಗಳು ಫ್ಲಾಪ್ ಆಗಿದೆ.

ಹಾಗಂತ ಸ್ಟಾರ್ ಕಿಡ್ ಜಾನ್ವಿ ಕಪೂರ್‌ಗೆ ಅವಕಾಶಗಳ ಕೊರತೆ ಇಲ್ಲ. ಸದ್ಯ ಅವರು ಜ್ಯೂ.ಎನ್‌ಟಿಆರ್ ಜೊತೆಗಿನ 'ದೇವರ' ಸಿನಿಮಾ ಮತ್ತು ರಾಮ್ ಚರಣ್ ಜೊತೆ ಹೊಸ ಚಿತ್ರದಲ್ಲಿ ನಟಿಸಿದ್ದಾರೆ. ಈಗ ಸೌತ್ ಸಿನಿಮಾಗಳ ಸಕ್ಸಸ್‌ಗಾಗಿ ನಟಿ ಎದುರು ನೋಡ್ತಿದ್ದಾರೆ.



# ತಮಿಳು ನಟ ಕಾರ್ತಿಗೆ ಆಶಿಕಾ ಜೋಡಿ

**ವಿಶೇಷ ಪೋಸ್ಟರ್ ರಿಲೀಸ್**

ಕನ್ನಡದ ನಟಿ ಆಶಿಕಾ ರಂಗನಾಥ್‌ಗೆ ಹುಟ್ಟುಹಬ್ಬದಂದು ಅಭಿಮಾನಿಗಳಿಗೆ ಸಿಹಿಸುದ್ದಿ ನೀಡಿದ್ದಾರೆ. ತಮಿಳಿನಲ್ಲಿ ಬಿಗ್ ಚಾನ್ಸ್ ಗಿಟ್ಟಿಸಿಕೊಂಡಿರುವ ಆಶಿಕಾ, ಮುಂದಿನ ಸಿನಿಮಾ ಬಗ್ಗೆ ಬಿಗ್ ಅಪ್‌ಡೇಟ್ ಹಂಚಿಕೊಂಡಿದ್ದಾರೆ.

ತಮಿಳಿನ ಸ್ಟಾರ್ ನಟ ಕಾರ್ತಿ ಜೊತೆ ನಟಿ ಡ್ಯುಯೆಟ್ ಹಾಡುವ ಚಾನ್ಸ್ ಗಿಟ್ಟಿಸಿಕೊಂಡಿದ್ದಾರೆ. ಸರ್ದಾರ್ 2ಗೆ ಮತ್ತೋರ್ವ ನಾಯಕಿಯಾಗಿ ಎಂಟ್ರಿ ಕೊಟ್ಟಿದ್ದಾರೆ. ಈ ಕುರಿತು ಸ್ವತಃ ಆಶಿಕಾ ಮಾಹಿತಿ ನೀಡಿದ್ದಾರೆ. ನನ್ನ ಮುಂದಿನ ಸಿನಿಮಾದ ಅನೌನ್ಸ್‌ಮೆಂಟ್. ತಮಿಳಿನಲ್ಲಿ ನನ್ನ 3ನೇ ಸಿನಿಮಾವಾಗಿದ್ದು, ಕಾರ್ತಿ ಸರ್ ಜೊತೆ ಕೆಲಸ ಮಾಡಲು ಉತ್ಸುಕಳಾಗಿದ್ದೇನೆ. ನಿರ್ದೇಶಕ ಪಿ.ಎಸ್ ಮಿತ್ರನ್ ಜೊತೆ ಕೆಲಸ ಮಾಡಲು ಕಾಯುತ್ತಿದ್ದೇನೆ. ಥ್ರಿಲಿಂಗ್ ಆಗಿರುವ ಕಥೆಯಲ್ಲಿ ಭಾಗವಾಗಿರೋದಕ್ಕೆ ಖುಷಿಯಾಗಿದ್ದೇನೆ ಎಂದು ನಟಿ ತಿಳಿಸಿದ್ದಾರೆ. ವಿಶೇಷ ಪೋಸ್ಟರ್ ರಿಲೀಸ್ ಮಾಡಿ ಶುಭಕೋರಿದ ತಂಡಕ್ಕೂ ನಟಿ ಧನ್ಯವಾದ ತಿಳಿಸಿದ್ದಾರೆ.

ಕಾರ್ತಿ ಜೊತೆ ಈ ಸಿನಿಮಾದಲ್ಲಿ ಆಶಿಕಾ, ಮಾಳವಿಕಾ ಮೋಹನನ್, ಎಸ್ ಸೂರ್ಯ ಸೇರಿದಂತೆ ಹಲವರು ನಟಿಸಲಿದ್ದಾರೆ. ಒಟ್ನಲ್ಲಿ ಚುಟು ಚುಟು ಸುಂದರಿ ಈಗ ಕಾಲಿವುಡ್‌ನಲ್ಲಿ ನೆಲೆ ನಿಲ್ಲುವತ್ತ ಹೆಜ್ಜೆ ಹಾಕ್ತಿದ್ದಾರೆ.



# ನೈಸ್ ರೋಡ್ ಸಿನಿಮಾಗೆ ಕಂಟಕ

ನೈಸ್ ರೋಡ್ ಕನ್ನಡ ಸಿನಾಮಾಕ್ಕೆ ನೈಸ್ ರೋಡ್ ಕಂಪನಿಯವರಿಂದಲೆ ಕಂಟಕ ಎದುರಾಗಿದೆ. ನೈಸ್ ರೋಡ್ ಎಂಬ ಹೆಸರನ್ನು ಬದಲಾಯಿಸದೆ ಇದ್ದರೆ ಕಂಪ್ಲೇಂಟ್ ಕೊಡುವುದಾಗಿ ಈ ಸಿನಿಮಾದ ನಿರ್ಮಾಪಕರಾದ ಗೋಪಾಲ್ ಹಳೆಪಾಳ್ಯ ಅವರಿಗೆ ನೋಟಿಸ್ ನೀಡಿದ್ದಾರೆ.

ಸಿನಿಮಾ ಈಗ ರಿಲೀಸ್ ಹಂತಕ್ಕೆ ಬಂದಿದ್ದು ಎಲ್ಲಾ ಕಡೆ ನೈಸ್ ರೋಡ್ ಎಂಬ ಹೆಸರಿನಿಂದನೆ ಪ್ರಚಾರವಾಗಿದೆ ಈ ಹಂತದಲ್ಲಿ ಹೆಸರು ಬದಲಾಯಿಸಲು ತುಂಬಾ ಖರ್ಚುವೆಚ್ಚಗಳಾಗುವುದು ಅಲ್ಲದೆ ತುಂಬಾ ಸಮಯವು ಬೇಕಾಗುತ್ತದೆ. ಚಲನಚಿತ್ರ ವಾಣಿಜ್ಯ ಮಂಡಳಿಯಲ್ಲಿ ನೈಸ್ ರೋಡ್ ಎಂಬ ಟೈಟಲ್ ರಿಜಿಸ್ಟರ್ ಆಗಿದ್ದು ಸಿನಿಮಾ ಚಿತ್ರೀಕರಣ ಮುಗಿಸಿ ಈಗಾಗಲೇ ಸಿನಿಮಾ ಸೆನ್ಸಾರ್ ಆಗಿದ್ದು ಸೆನ್ಸಾರ್ ಮಂಡಳಿಯು ಕೂಡ ಸಿನಿಮಾ ನೋಡಿ ನೈಸ್ ರೋಡಿಗೂ ಈ ಸಿನಿಮಾಕ್ಕೂ ಯಾವುದೇ ಸಂಬಂಧ ಇಲ್ಲ ಎಂದು ನಿರ್ಧರಿಸಿ ಪ್ರಮಾಣ ಪತ್ರ ಕೊಟ್ಟಿದಾರೆ.

ಆದರೆ ಈಗ ನೈಸ್ ರೋಡ್ ಕಂಪನಿಯವರು ಏಕಏಕಿ ಬಂದು ಹೆಸರು ಬದಲಾಯಿಸಲೇ ಬೇಕೆಂದು ನೋಟೀಸ್ ನೀಡಿದ್ದಾರೆ.ಈ ವಿಷಯಕ್ಕೆ ಸಂಬಂಧ ಪಟ್ಟಂತೆ ನಿರ್ಮಾಪಕ ಗೋಪಾಲ್ ಹಳೆಪಾಳ್ಯ ಅವರು.. ಈ ಸಿನಿಮಾಕ್ಕೆ ಫೈನಾನ್ಸ್ ಮಾಡಿರುವ ಏನ್ ರಾಜೂಗೌಡ ಮತ್ತು ಈ ಸಿನಿಮಾದ ನಟರಾದ ಧರ್ಮ ಅವರ ಜೊತೆ ಮಾತಾಡಿ ಒಂದು ನಿರ್ಧಾರಕ್ಕೆ ಬರುತ್ತೇನೆ ಎನ್ನುತ್ತಿದ್ದಾರೆ.

ಮುಂದೆ ಸಿನಿಮಾತಂಡದವರು ಹೆಸರು ಬದಲಾಯಿಸುತ್ತಾರೋ ಇಲ್ಲ ಇದೆ ಹೆಸರಿನಲ್ಲೆ ಸಿನಿಮಾ ಬಿಡುಗಡೆ ಮಾಡೊತರೋ ಕಾದು ನೋಡಬೇಕಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966